ಸಂಪುಟ: 06 ಸಂಚಿಕೆ: 61 ಪುಟಗಳು: 08 ಶುಕ್ರವಾರ 15 ಮೇ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

ಮುಂಜಾನೆ ಮಾತು

ಶಕ್ತಿಯೆಲ್ಲ ನಿಮ್ಮೊಳಗೇ ಇದೆ, ನೀವು ಏನು ಬೇಕಾದರೂ ಮಾಡಬಲ್ಲಿರಿ ಎಲ್ಲವನ್ನೂ ಮಾಡಬಲ್ಲಿರಿ.

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ಔಷಧಗಳ ಮಾರುಕಟ್ಟೆ ಮೇಲೆ ಕಣ್ಗಾವಲಿಡಲು ಹೊಸ ತಂತ್ರಜ್ಞಾನ!

## ಕಳಪೆ ಹಾಗೂ ನಕಲಿ ಔಷಧಗಳ ಪೂರೈಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಕ್ರಮ

• ಉದಯವಾಹಿನಿ, ಬೆಂಗಳೂರು

ಔಷಧಗಳ ಮಾರುಕಟ್ಟೆ ಮೇಲೆ ಕಣ್ಗಾವಲಿಡಲು ಹೊಸ ತಂತ್ರಜ್ಞಾನ ಅಳವಡಿಕೆ ಮಾಡಲಾಗಿದೆ. ಈ ತಂತ್ರಜ್ಞಾನವನ್ನು ನಮ್ಮ ರಾಜ್ಯ ದೇಶದಲ್ಲೇ ಮೊದಲು ಬಾರಿಗೆ ಅಳವಡಿಕೆ ಮಾಡಿಕೊಳ್ಳುತ್ತಿದೆ. ಬೆಂಗಳೂರಿನ ಆರೋಗ್ಯಸೌಧದಲ್ಲಿ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಈ ಬಗ್ಗೆ ಮಾಹಿತಿ ನೀಡಿದ್ದಾರೆ.

**ರಾಜ್ಯದಲ್ಲೂ NDPS ಪ್ರಕರಣ:** 'ಗಾಬರಿಯಾಗುವ ಅವಶ್ಯಕತೆ ಇಲ್ಲ, ಇದೊಂದು ಹಳೆಯ ವೈರಸ್'- ಎಂದು ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

ಇದು ದೇಶದಲ್ಲೇ ಮೊದಲು

NSQ ಔಷಧಗಳನ್ನು ಮಾರುಕಟ್ಟೆಯಲ್ಲಿ ನಿಖರವಾಗಿ ಪತ್ತೆಹಚ್ಚಲು ಮತ್ತು NDPS ಔಷಧಗಳ ದುರುಪಯೋಗ ತಡೆಯಲು ನೂತನ ಕಣ್ಗಾವಲು ವ್ಯವಸ್ಥೆಯಾಗಿ ಪೋರ್ಟಲ್ ಗೆ ಚಾಲನೆ ನೀಡಿದ ದಿನೇಶ್ ಗುಂಡೂರಾವ್ ಈ ತಂತ್ರಜ್ಞಾನದ ಅಗತ್ಯತೆಯ ಬಗ್ಗೆ ಮಾಹಿತಿಯನ್ನು ನೀಡಿದರು.

ಔಷಧಗಳ ಗುಣನಿಯಂತ್ರಣ ಬಹಳ ಮುಖ್ಯ. ನಿಗದಿತ ಗುಣಮಟ್ಟವಿಲ್ಲದ ಔಷದ ಸರಬರಾಜು ಆಗಿದ್ದರೆ ಪತ್ತೆ ಹಚ್ಚುವಿದು ಕಷ್ಟವಾಗಿತ್ತು. ಒಂದು ವರ್ಷದ ಹಿಂದೆ ಕೇಂದ್ರ ಸಚಿವರಿಗೂ ಪತ್ರ ಬರೆದು ವಿನಂತಿಸಿದ್ದೆ. ಈ ಬಗ್ಗೆ ಒಂದು ನಿಯಮ ಮಾಡಬೇಕು ಎಂದು ಕೇಳಿಕೊಳ್ಳಲಾಗಿತ್ತು. ನಂತರ ರಾಜ್ಯಮಟ್ಟದಲ್ಲಿಯೇ ಈ ಕುರಿತು ತೀರ್ಮಾನ ಮಾಡಿ ಈ ವ್ಯವಸ್ಥೆ ತರಲಾಗುತ್ತಿದೆ ಎಂದು ತಿಳಿಸಿದರು. ಕಳೆದ ವರ್ಷ ಈ ಸಹಿ ಮಾಡುವ ವ್ಯವಸ್ಥೆ ತಂದಿದ್ದೇವೆ. ಅದರಿಂದ ತಕ್ಷಣವೇ ಮಾರುಕಟ್ಟೆಯ ಮಾಹಿತಿ ಸಿಗುತ್ತಿತ್ತು. 1.83 ರೂ ಮೌಲ್ಯದ ಕಳಪೆ ಔಷಧ ಹಿಂಪಡೆಯಲಾಗಿತ್ತು. ಔಷಧದ ಗುಣಮಟ್ಟ ಕಳಪೆರ ಎಂದು ತಿಳಿದ ತಕ್ಷಣ ಈ ಪೋರ್ಟಲ್‌ನಲ್ಲಿ ದಾಖಲಿಸುತ್ತೇವೆ. ತಕ್ಷಣ ಎಲ್ಲಾ ಹೋಲ್ ಸೇಲ್ ವ್ಯಾಪಾರಿಗಳಿಗೆ ಮಾಹಿತಿ ಹೋಗಿ ಮುಂದೆ ಮಾರಾಟ ಮಾಡಲು ಸಾಧ್ಯವಾಗುವುದಿಲ್ಲ ಎಂದು ತಿಳಿಸಿದರು.

15 ಸಾವಿರ ಹೋಲ್ ಸೇಲ್ ಇದರಲ್ಲಿ ನೋಂದಣಿ ಆಗಿದ್ದಾರೆ. ರಿಯಲ್ ಸಮಯದಲ್ಲಿ ಪತ್ತೆಹಚ್ಚಲು ಸಾಧ್ಯ. ನಮ್ಮ ದೇಶದಲ್ಲಿ ಮೊದಲ ಬಾರಿಗೆ ಇದನ್ನು ತರಲಾಗಿದೆ ಎಂದು ಇದೇ ಸಂದರ್ಭದಲ್ಲಿ ದಿನೇಶ್ ಗುಂಡೂರಾವ್ ಅವರು ಮಾಹಿತಿಯನ್ನು ನೀಡಿದರು.



### NDPS ಔಷಧಗಳ ಕುರಿತು ನಿಗಾ

ಮೊದಲು ಮಾರಾಟ ಮಾಡಿದಾಗ ಮಾಹಿತಿ ಇರಬೇಕಾಗಿತ್ತು ಮತ್ತು ಸಲಹಾ ಚೀಟಿ ಇರಬೇಕಾಗಿತ್ತು. ಈಗ NDPS ಮಾರಾಟ ಮಾಡಿದರೆ ಈ ಪೋರ್ಟಲ್ ನಲ್ಲಿ ಕಡ್ಡಾಯವಾಗಿ ನಮೂದಿಸಬೇಕು. ಪದೇ ಪದೇ ಸಲಹಾ ಚೀಟಿ ಒಬ್ಬರೇ ನೀಡಿದರೆ ಪರೀಕ್ಷೆ ನಡೆಸಲು ಇದು ಸಹಾಯಕ ಎಂದರು. ಆಹಾರ ಸುರಕ್ಷತಾ ಮತ್ತು ಔಷಧ ನಿಯಂತ್ರಣ ಆಯುಕ್ತ ಶ್ರೀನಿವಾಸ ಹಾಗೂ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

12ನೇ ವರ್ಷದ ಪುಣ್ಯಸ್ಮರಣೆ



ಶ್ರೀ ಹೆಚ್. ತಿಮ್ಮಪ್ಪ

15-05-2014

ಜಮೀನ್ದಾರರು ಯಜಮಾನಪ್ಪನ ಹಟ್ಟಿ, ವಾಜರಹಳ್ಳಿ ಗ್ರಾಮ, ಬಿಡದಿ ಹೋಬಳಿ, ರಾಮನಗರ (ತಾ) (ಜಿ)

ನಿಮ್ಮ ಆದರ್ಶ, ಧೈಯ, ಪ್ರಾಮಾಣಿಕತೆ, ನಿಸ್ವಾರ್ಥ, ದುಡಿಮೆಯೇ ನಮ್ಮೆಲ್ಲರಿಗೂ ಮಾರ್ಗದರ್ಶನ ನಿಮ್ಮ ನೆನಪೆ ನಮಗೆ ದಾರಿದೀಪ.

ಸದಾ ನಿಮ್ಮನ್ನು ಸ್ಮರಿಸುವ ದುಃಖತಪ್ತರು

ಪತ್ನಿ ನಿಂಗಮ್ಮ , ಮಕ್ಕಳು, ಮೊಮ್ಮಕ್ಕಳು, ಮುಮ್ಮಕ್ಕಳು ಕುಟುಂಬದವರು ಮತ್ತು ಸಂಪಾದಕರು ಉದಯವಾಹಿನಿ ಕನ್ನಡ ದಿನಪತ್ರಿಕೆ.

## ಜಮೀನು ವ್ಯಾಜ್ಯ: ಟಿ.ಎನ್.ಎಸ್ ವಿರುದ್ಧದ ಕ್ರಿಮಿನಲ್ ಪ್ರಕರಣಕ್ಕೆ ತಡೆ

• ಉದಯವಾಹಿನಿ, ಬೆಂಗಳೂರು


ಜಮೀನು ವ್ಯಾಜ್ಯಕ್ಕೆ ಸಂಬಂಧಿಸಿದಂತೆ ಅತಿಕ್ರಮ ಪ್ರವೇಶ ಮಾಡಿ ಮಹಿಳೆಯರ ಮೇಲೆ ದೌರ್ಜನ್ಯ ನಡೆಸಿದ ಆರೋಪಕ್ಕೆ ಸಂಬಂಧಿಸಿದಂತೆ ಕಿರುತೆರೆ ನಿರ್ದೇಶಕ ಟಿ.ಎನ್.ಸೀತಾರಾಮ್ ಮತ್ತು ಇತರರ ವಿರುದ್ಧ ದಾಖಲಿಸಲಾಗಿರುವ ಕ್ರಿಮಿನಲ್ ಪ್ರಕರಣಕ್ಕೆ ಹೈಕೋರ್ಟ್ ಮಧ್ಯಂತರ ತಡೆ ನೀಡಿದೆ.

ಪ್ರಕರಣ ರದ್ದುಕೋರಿ ಟಿ.ಎನ್.ಸೀತಾರಾಮ್ ಮತ್ತು ಅವರ ಸಹೋದರಿ ಕೆ.ಎಸ್.ವಿಜಯಲಕ್ಷ್ಮಿ ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿಯನ್ನು ನ್ಯಾಯಮೂರ್ತಿ ಎಂ.ಜಿ.ಎಸ್.ಕಮಲ್ ಅವರ ರಜಾಕಾಲದ ಏಕಸದಸ್ಯ ನ್ಯಾಯಪೀಠ ಗುರುವಾರ ವಿಚಾರಣೆ ನಡೆಸಿತು. ವಿಚಾರಣೆ ವೇಳೆ ಸೀತಾರಾಮ್ ಪರ ಪದಾಂಕಿತ ಹಿರಿಯ ವಕೀಲ ಕೆ.ದಿವಾಕರ ಅವರು, 'ಅರ್ಜಿದಾರರು ವಕೀಲರು ಮತ್ತು ಖ್ಯಾತ ಕಿರುತೆರೆ ನಿರ್ದೇಶಕರು. ಅವರಿಗೆ ಸಂಬಂಧಿಸಿದ ಆಸ್ತಿ ವಿಚಾರದಲ್ಲಿ ಈ ಸುಳ್ಳು ದೂರು ದಾಖಲಾಗಿದ್ದು ಇದಕ್ಕೆ ತಡೆ ನೀಡಬೇಕು' ಎಂದು ಕೋರಿದರು.

## ಕೇಂದ್ರ ಸರಕಾರ ದೇಶದ ಯುವಜನತೆಗೆ ಬಗೆದ ದ್ರೋಹ

• ಉದಯವಾಹಿನಿ, ಬೆಂಗಳೂರು

ದೇಶಾದ್ಯಂತ 22 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಬರೆದಿದ್ದ 'ನೀಟ್-ಯುಜಿ 2026' ಪರೀಕ್ಷೆಯನ್ನು ರದ್ದುಗೊಳಿಸಿರುವ ಕೇಂದ್ರ ಸರಕಾರದ ನಿರ್ಧಾರವು ಆಡಳಿತಾತ್ಮಕ ವೈಫಲ್ಯ ಮಾತ್ರವಲ್ಲ ದೇಶದ ಯುವಜನತೆಗೆ ಬಗೆದ ಕ್ರೂರ ದ್ರೋಹವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಕರ್ನಾಟಕದ ಒಂದು ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳು ಸೇರಿದಂತೆ ದೇಶದ 22 ಲಕ್ಷಕ್ಕೂ ಹೆಚ್ಚಿನ ವಿದ್ಯಾರ್ಥಿಗಳು ತಿಂಗಳುಗಟ್ಟಲೆ ಶ್ರಮಪಟ್ಟು ಈ ಪರೀಕ್ಷೆ ಬರೆದಿದ್ದರು. ಆದರೆ ಕೇಂದ್ರದ ಒಂದು ನಿರ್ಧಾರ ಇಡೀ ವಿದ್ಯಾರ್ಥಿ ಸಮುದಾಯವನ್ನು ಅನಿಶ್ಚಿತತೆ ಮತ್ತು ಸಂಕಷ್ಟಕ್ಕೆ ತಳ್ಳಿದೆ. 2024ರಲ್ಲೇ ನಮ್ಮ ಸರ್ಕಾರವು ನೀಟ್ ಪರೀಕ್ಷೆಯು ಗ್ರಾಮೀಣ ಮತ್ತು ಬಡ ವಿದ್ಯಾರ್ಥಿಗಳಿಗೆ ಅನ್ಯಾಯ ಮಾಡುತ್ತದೆ. ಶಾಲಾ ಶಿಕ್ಷಣ ವ್ಯವಸ್ಥೆಯನ್ನು ದುರ್ಬಲಗೊಳಿಸುತ್ತದೆ ಮತ್ತು ದಾಖಲಾತಿ ವಿಚಾರದಲ್ಲಿ ರಾಜ್ಯಗಳ ಅಧಿಕಾರವನ್ನು ಕಸಿದುಕೊಳ್ಳುತ್ತದೆ ಎಂದು ಆಕ್ಷೇಪ ವ್ಯಕ್ತಪಡಿಸಿ, ಸದನ ನಿರ್ಣಯ ಕೈಗೊಂಡಿದ್ದೆವು. ಅಂದಿನ ನಮ್ಮ ಕಾಳಜಿ ಎಷ್ಟು ಸತ್ಯ ಮತ್ತು ಅನಿವಾರ್ಯವಾಗಿತ್ತು ಎನ್ನುವುದನ್ನು ಇಂದಿನ ಪರೀಕ್ಷಾ ರದ್ದತಿಯು ಸಾಬೀತುಪಡಿಸಿದೆ ಎಂದು ಹೇಳಿದ್ದಾರೆ.



ಹಿಜಾಬ್ ವಿಚಾರದಲ್ಲಿ ಸರ್ಕಾರ ನ್ಯಾಯಾಂಗ ನಿಂದನೆಗೆ ಮುಂದಾಗಿದೆ ಎಂದು ಸುನಿಲ್ ಕಿಡಿ

ಸುಪ್ರೀಂ ಕೋರ್ಟಿಗೆ ಮಾಡಿದ ಅವಮಾನ ಎಂದ ಬಿಜೆಪಿ

ಮತ್ತೆ ಜೋರಾಯ್ತು ಹಿಜಾಬ್ ಗದ್ದಲ


ಸಿಎಂ ಎಚ್ಚರಿಕೆ, ಹಿಜಾಬ್ ನಿಷೇಧ ಹಿಂದಕ್ಕೆ

# ಹಿಜಾಬ್‌ಗೆ ಸಾಕಾರ ಕೇಸರಿ ಶಾಲಿಗೆ ನಕಾರ

ಕೇಸರಿ ಶಾಲು ಹಾಕಿ ಬರುವಂತಿಲ್ಲ ಸರ್ಕಾರ ಸಹಿಸಲ್ಲ!




### ಶಾಲಾ ಶಿಸ್ತನ್ನು ಹದಗೆಡಿಸುವ ಹುನ್ನಾರ



ರಾಜ್ಯ ಕಾಂಗ್ರೆಸ್ ಸರ್ಕಾರ ವಿದ್ಯಾರ್ಥಿಗಳಲ್ಲೂ 'ವಿಭಜಕ ನೀತಿ' ಅನುಸರಿಸಿ ಶಾಲಾ ಶಿಸ್ತನ್ನು ಹದೆಗೆಡಿಸುವ ಹುನ್ನಾರಕ್ಕೆ ಮುಂದಾಗಿರುವುದು ನಿಜಕ್ಕೂ ಶೋಚನೀಯ. ಕೇಂದ್ರ ಸರ್ಕಾರ ದೇಶದೆಲ್ಲೆಡೆ ಏಕರೂಪ ನಾಗರಿಕ ಸಂಹಿತೆ ಜಾರಿ ತರುತ್ತಿರುವ ಬೆನ್ನಲ್ಲೇ ಕರ್ನಾಟಕದ ಕಾಂಗ್ರೆಸ್ ಸರ್ಕಾರ ಧರ್ಮಗಳನ್ನು ಒಡೆದಾಳುವ ನೀತಿಗೆ ಕೈ ಹಾಕಿದೆ. ಇನ್ನು ಕೇಸರಿ ಶಾಲು ಧಾರ್ಮಿಕವಲ್ಲ, ಆದರೆ, ರಾಜ್ಯ ಕಾಂಗ್ರೆಸ್ ಸರ್ಕಾರ ಯಾವ ಬಣ್ಣ ಹಾಕಬೇಕು, ಹಾಕಬಾರದೆಂಬ ಹಕ್ಕನ್ನೇ ಕಸಿದುಕೊಳ್ಳುವ ಸರ್ವಾಧಿಕಾರಿ ಧೋರಣೆ ಪ್ರದರ್ಶಿಸುತ್ತಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಆರೋಪಿಸಿದ್ದಾರೆ.

### ಉಡುಪಿಯಲ್ಲಿ ನಡೆದಿದ್ದ ವಿದ್ಯಮಾನ ರಾಷ್ಟ್ರಮಟ್ಟದಲ್ಲಿ ಭಾರೀ ಸುದ್ದಿ

ಕಳೆದ ಬಿಜೆಪಿ ಸರ್ಕಾರದ ಅವಧಿಯಲ್ಲಿ, ಉಡುಪಿಯ ಸರ್ಕಾರೀ ಪದವಿಪೂರ್ವ ಕಾಲೇಜಿನಲ್ಲಿ ಹಿಜಾಬ್ ವಿವಾದ ಭುಗಿಲೆದ್ದಿತ್ತು. ಇದು, ರಾಷ್ಟ್ರವ್ಯಾಪಿ ಸುದ್ದಿಯಾಗುತ್ತಿದ್ದಂತೆಯೇ, ಕರ್ನಾಟಕ ಶಿಕ್ಷಣ ಕಾಯ್ದೆ 1983ರ ಅಡಿಯಲ್ಲಿ ಆದೇಶವೊಂದನ್ನು ಹೊರಡಿಸಿತ್ತು. ಅದರ ಭಾಗವಾಗಿ, ಶಾಲೆ ಮತ್ತು ಕಾಲೇಜುಗಳಲ್ಲಿ, ಆಯಾಯ ಶೈಕ್ಷಣಿಕ ಆಡಳಿತ ಮಂಡಳಿಗಳು ನಿಗದಿಪಡಿಸಿದ ಸಮವಸ್ತ್ರವನ್ನೇ ಕಡ್ಡಾಯವಾಗಿ ಧರಿಸಬೇಕು ಎಂದು ಆದೇಶದಲ್ಲಿ ಸೂಚಿಸಿತ್ತು. ಆಮೂಲಕ, ಹಿಜಾಬ್ ಅಥವಾ ಕೇಸರಿ ಶಾಲನ್ನು ಹಾಕಿಕೊಂಡು ಶಾಲಾಕಾಲೇಜಿಗೆ ಬರುವಂತಿಲ್ಲ ಎನ್ನುವುದು ಆದೇಶದ ತಾತ್ಪರ್ಯವಾಗಿತ್ತು. ಈಗ, ಆ ಆದೇಶವನ್ನು ಸಿದ್ದರಾಮಯ್ಯ ಸರ್ಕಾರ ತೆರವುಗೊಳಿಸಿದೆ.



1 ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರದಿಂದ ಶೈಕ್ಷಣಿಕ ಅಂಗಳಕ್ಕೂ ತುಷ್ಟೀಕರಣ ಹೇರಿಕೆ

2 ಹಿಜಾಬ್ ನಿಷೇಧ ಹಿಂಪಡೆದ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಕಿಡಿ

3 ಹಿಜಾಬ್ ವಿವಾದ ಸುಪ್ರೀಂಕೋರ್ಟ್‌ನಲ್ಲಿ ಇರುವಾಗಲೇ ನಿಷೇಧ ಹಿಂದಕ್ಕೆ: ನ್ಯಾಯಾಂಗ ವ್ಯವಸ್ಥೆಗೆ ಅವಮಾನ - ಬಿಜೆಪಿ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಶಾಲೆಗಳಲ್ಲಿ ಹಿಜಾಬ್ ಮತ್ತು ಕೇಸರಿ ಶಾಲು ವಿವಾದದ ಕುರಿತು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಸಿಎಂ, ಸರ್ಕಾರದ ನಿಲುವನ್ನು ಸ್ಪಷ್ಟಪಡಿಸಿದರು. ಶಿಕ್ಷಣ ಇಲಾಖೆಯ ನಿಯಮಗಳ ಪ್ರಕಾರ, ಶಾಲೆಗಳಲ್ಲಿ ಮೊದಲಿನಿಂದಲೂ ನಡೆದುಕೊಂಡು ಬಂದಿರುವ ಸಾಂಪ್ರದಾಯಿಕ ಆಚರಣೆಗಳಿಗೆ ಯಾವುದೇ ಅಡ್ಡಿಯಿಲ್ಲ. ಜನಿವಾರ, ರುದ್ರಾಕ್ಷಿ, ಶಿವದಾರ, ಹಿಜಾಬ್ ಅಥವಾ ಪೇಟ ಧರಿಸುವುದು ಧಾರ್ಮಿಕ ನಂಬಿಕೆಯ ಭಾಗವಾಗಿದ್ದು, ಇವುಗಳಿಗೆ ಅಭ್ಯಂತರವಿಲ್ಲ ಎಂದು ತಿಳಿಸಿದರು. ಆದರೆ, ಶಾಲೆಗಳಲ್ಲಿ ರಾಜಕೀಯ ಪ್ರೇರಿತ ಅಥವಾ ಹೊಸದಾಗಿ ಆರಂಭಿಸಲಾದ ಬದಲಾವಣೆಗಳಿಗೆ ಅವಕಾಶವಿಲ್ಲ ಎಂದು ಎಚ್ಚರಿಸಿದ ಅವರು, ಕೇಸರಿ ಶಾಲು ಧರಿಸುವುದು ಅಥವಾ ಹೊಸ ಮಾದರಿಯ ಬಣ್ಣದ ಪೇಟಗಳನ್ನು ಹಾಕಿಕೊಂಡು ಶಾಲೆಗೆ ಸರಿಯಲ್ಲ. ಇಂತಹ ಕೃತ್ಯಗಳಿಗೆ ಶಾಲಾ ಆವರಣದಲ್ಲಿ ಅವಕಾಶ ನೀಡುವುದಿಲ್ಲ. ಶೈಕ್ಷಣಿಕ ವಾತಾವರಣವನ್ನು ಹಾಳುಮಾಡುವ ಯಾವುದೇ ಪ್ರಯತ್ನವನ್ನು ಸರ್ಕಾರ ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

**ವಿದ್ಯಾರ್ಥಿಗಳ ಜೀವನದ ಜೊತೆ ಕೇಂದ್ರದ ಆಟ :** ಇತ್ತೀಚೆಗೆ ನಡೆದ 'ನೀಟ್' ಪರೀಕ್ಷೆಯಲ್ಲಿನ ಅಕ್ರಮಗಳು ಮತ್ತು ಫಲಿತಾಂಶದ ಗೊಂದಲಗಳ ಕುರಿತು ಸಿಎಂ ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು. ನಮ್ಮ ರಾಜ್ಯದಲ್ಲಿ ಸಿಇಟಿ ಪರೀಕ್ಷೆಯನ್ನು ನಾವು ಅತ್ಯಂತ ಪಾರದರ್ಶಕವಾಗಿ ಮತ್ತು ವ್ಯವಸ್ಥಿತವಾಗಿ ನಡೆಸುತ್ತಿದ್ದೇವೆ. ಆದರೆ, ಕೇಂದ್ರ ಸರ್ಕಾರವು ರಾಷ್ಟ್ರೀಯ ಮಟ್ಟದ ಪರೀಕ್ಷೆಯನ್ನು ಸಮರ್ಪಕವಾಗಿ ನಡೆಸುವಲ್ಲಿ ವಿಫಲವಾಗಿದೆ.

ಲಕ್ಷಾಂತರ ವಿದ್ಯಾರ್ಥಿಗಳ ಪರಿಶ್ರಮ ಮತ್ತು ಅವರ ಭವಿಷ್ಯದ ಜೊತೆ ಕೇಂದ್ರ ಸರ್ಕಾರ ಆಟವಾಡುತ್ತಿರುವುದು ಅತ್ಯಂತ ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

**ಮೂಲಭೂತ ಸಮಸ್ಯೆಗಳ ಕಡೆ ಗಮನ ಹರಿಸಿ :** ಪ್ರಧಾನಿ ಮೋದಿ ಅವರ ಬೆಂಗಾವಲು ವಾಹನಗಳ ಸಂಖ್ಯೆ ಕಡಿತಗೊಳಿಸಿರುವ ಕೇಂದ್ರದ ನಿರ್ಧಾರದ ಕುರಿತು ಮಾತನಾಡುತ್ತಾ, ಇದು ಕೇವಲ ತೋರಿಕೆಯ ಅಥವಾ ತಾತ್ಕಾಲಿಕ ಕ್ರಮವಷ್ಟೇ. ಬೇರೆ ರಾಜ್ಯಗಳು ಇದನ್ನು ಹೇಗೆ ಅಳವಡಿಸಿಕೊಳ್ಳುತ್ತವೆ ಎಂಬುದನ್ನು ನೋಡಿ ನಾವು ನಿರ್ಧಾರ ತೆಗೆದುಕೊಳ್ಳುತ್ತೇವೆ. ಕೇಂದ್ರ ಸರ್ಕಾರವು ಇಂತಹ ಸಣ್ಣಪುಟ್ಟ ವಿಷಯಗಳಿಗಿಂತ ದೇಶದ ಮೂಲಭೂತ ಸಮಸ್ಯೆಗಳತ್ತ ಗಮನಹರಿಸಲಿ ಎಂದು ಸಲಹೆ ನೀಡಿದರು.



**ನನಗೆ ಅಧಿಕೃತ ಕರೆ ಬಂದಿಲ್ಲ :** ರಾಜ್ಯ ಸಚಿವ ಸಂಪುಟ ಪುನಾರಚನೆ ಮತ್ತು ದೆಹಲಿ ಭೇಟಿಯ ಕುರಿತ ಪ್ರಶ್ನೆಗೆ, ಹೈಕಮಾಂಡ್‌ನಿಂದ ನನಗೆ ಯಾವುದೇ ಅಧಿಕೃತ ಕರೆ ಬಂದಿಲ್ಲ. ಜೂನ್ 15ಕ್ಕೆ ನಾನು ದೆಹಲಿಗೆ ಹೋಗುತ್ತಿದ್ದೇನೆ ಎಂದು ಸುದ್ದಿಗಳು ಹಬ್ಬುತ್ತಿವೆ, ಆದರೆ ಅಂತಹ ಯಾವುದೇ ದಿನಾಂಕ ನಿಗದಿಯಾಗಿಲ್ಲ. ಹೈಕಮಾಂಡ್ ಸೂಚಿಸಿದಾಗ ಮಾತ್ರ ದೆಹಲಿಗೆ ತೆರಳಿ ಸಂಪುಟ ಪುನಾರಚನೆಯ ಬಗ್ಗೆ ಚರ್ಚಿಸಲಾಗುವುದು ಎಂದು ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

**ಏನಿದು ಹಿಜಾಬ್, ಜನಿವಾರ ವಿವಾದ?:** ಮಹತ್ವದ ನಿರ್ಧಾರ ತೆಗೆದುಕೊಂಡಿದ್ದ ಸಿದ್ದರಾಮಯ್ಯ ಸರ್ಕಾರ, ರಾಜ್ಯದ ಶಾಲಾಕಾಲೇಜುಗಳಲ್ಲಿ ಮುಸ್ಲಿಂ ವಿದ್ಯಾರ್ಥಿನಿಯರು ಹಿಜಾಬ್ ಧರಿಸಲು ಇದ್ದಿದ್ದ ನಿಷೇಧವನ್ನು ಹಿಂದಕ್ಕೆ ಪಡೆದಿತ್ತು. ಇದರ ಜೊತೆಗೆ, ಹಿಂದೂ ಧರ್ಮದಲ್ಲಿ ಪಾಲಿಸಿಕೊಂಡು ಬರಲಾಗುತ್ತಿರುವ ಜನಿವಾರ ಮತ್ತು ಪವಿತ್ರ ನೂಲು ಧಾರಣೆ, ಪೇಟ, ರುದ್ರಾಕ್ಷಿ ಹಾಕಿಕೊಳ್ಳುವುದಕ್ಕೆ ಮತ್ತು ಎಲ್ಲಾ ಧರ್ಮಗಳಲ್ಲಿ ಪಾಲಿಸಿಕೊಂಡು ಬರಲಾಗುತ್ತಿರುವ ಧಾರಣೆಗೆ ಅನುಮತಿಯನ್ನು ನೀಡಿತ್ತು. ಇದರ ಮಾಹಿತಿಯನ್ನು ರಾಜ್ಯ ಶಿಕ್ಷಣ ಸಚಿವ ಮಧು ಬಂಗಾರಪ್ಪ ನೀಡಿದ್ದರು.

### ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ

ಪ್ರಾಥಮಿಕ ತರಗತಿಯಿಂದ 12 ನೇ ತರಗತಿಯವರೆಗೆ ಜನಿವಾರ, ಹಿಜಾಬ್, ಉಡುದಾರ, ರುದ್ರಾಕ್ಷಿ ಮುಂತಾದ ಸಾಂಪ್ರದಾಯಿಕವಾಗಿ ಅನುಸರಿಸುವ ಧಾರ್ಮಿಕ ಸಂಕೇತಗಳನ್ನು ಧರಿಸಬಹುದು. ಹೊಸದಾಗಿ ಏನನ್ನೂ ಮಾಡುವಂತಿಲ್ಲ. ಶಿಕ್ಷಣ ವ್ಯವಸ್ಥೆಯಲ್ಲಿ ಸರ್ವ ಧರ್ಮಕ್ಕೂ ಸಮಾನ ಗೌರವ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಧಾರ್ಮಿಕ ಸಂಕೇತಗಳ ವಿಚಾರದಲ್ಲಿ ಬಿಜೆಪಿ ಎತ್ತಿರುವ ತಕರಾರಿಗೆ ಸಂಬಂಧಿಸಿದಂತೆ ಸುದ್ದಿಗಾರರ ಪ್ರಶ್ನೆಗೆ ಮುಖ್ಯಮಂತ್ರಿಗಳು ಮೇಲಿನಂತೆ ಪ್ರತಿಕ್ರಿಯೆ ನೀಡಿದರು.

# ರಾಮನಗರ ಜಿಲ್ಲಾಧಿಕಾರಿಗೆ ಎಚ್‌ಡಿ ಕುಮಾರಸ್ವಾಮಿ ಖಡಕ್ ಎಚ್ಚರಿಕೆ

## ಬಿಡದಿಯಲ್ಲಿ ರೈತರ ಭೂಮಿ ಕಿತ್ತುಕೊಂಡು ರಿಯಲ್ ಎಸ್ಟೇಟ್ ದಂಧೆ ನಡೆಸಲಾಗುತ್ತಿದೆ

• ಉದಯವಾಹಿನಿ, ಬೆಂಗಳೂರು

ನನ್ನ ಫೋನ್ ನಂಬರ್ ನೋಡಿದರೆ ರಾಮನಗರ ಡಿಸಿ ಕಾಲೇ ಪಿಕ್ ಮಾಡುತ್ತಿಲ್ಲ ಎಂದು ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಆರೋಪ ಮಾಡಿದ್ದಾರೆ.

ಬೆಂಗಳೂರಿನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಮನಗರ ಜಿಲ್ಲಾಧಿಕಾರಿಗೆ ನೇರ ಎಚ್ಚರಿಕೆ ನೀಡಿದ್ದಾರೆ.

ರೈತರ ಭೂಮಿ ಕಿತ್ತುಕೊಂಡು ರಿಯಲ್ ಎಸ್ಟೇಟ್ ದಂಧೆ ಮಾಡುವ ವ್ಯಕ್ತಿಗಳ ಹೇಳುವುದಕ್ಕೆಲ್ಲ ಈ ಜಿಲ್ಲಾಧಿಕಾರಿ ಕುಣಿಯುತ್ತಿದ್ದಾರೆ. ಅವರು ಹೇಳಿದ್ದಕ್ಕೆಲ್ಲಾ ಈ ಡಿಸಿ ಸೈನ್ ಹೊಡೆದುಕೊಂಡು ಕೂತಿದ್ದಾರೆ.

ನನ್ನ ನಂಬರ್ ನೋಡಿದ್ರೆ ಡಿಸಿ ಫೋನ್ ಎತ್ತಲ್ಲ!

ಒಂದು ಗ್ರಾಮಕ್ಕೆ ಹೋಗಿ ರೈತರ ಕಷ್ಟ ಸುಖ ಕೇಳಿಲ್ಲ, ಸಭೆ ನಡೆಸಿಲ್ಲ. ನನ್ನ ನಂಬರ್ ನಿಂದ ಫೋನ್ ಹೋದರೆ ಡಿಸಿ ಫೋನೇ ತೆಗೆಯಲ್ಲ. ಏನೇನು ಮಾಡುತ್ತಿದ್ದಾರೆ ಎಂಬುದನ್ನು ನಾನು ಕೂಡ ನೋಡುತ್ತಿದ್ದೇನೆ. ಸಮಯ ಬಂದಾಗ ಉತ್ತರ ಕೊಡುತ್ತೇನೆ ಎಂದು ಅವರು ಎಚ್ಚರಿಕೆ ನೀಡಿದರು.

ಮುಖ್ಯಮಂತ್ರಿಗಳಿಗೆ ಒಂದು ಮಾತು ಹೇಳಲು ಬಯಸುತ್ತೇನೆ, ಕುರ್ಚಿ ಸಿಕ್ಕಿದರೆ ಸಾಕು ಎಂದು ಇಂಥ ದಂಧೆಕೋರನ ಮಾತು ಕಟ್ಟಿಕೊಂಡು ರಿಯಲ್ ಎಸ್ಟೇಟ್ ದಲ್ಲಾಳಿ ಆಗಬೇಡಿ. ಕೊನೆಗಾಲದಲ್ಲಿ ಹೋಗಬೇಕಾದರೆ ಸಿದ್ದರಾಮಯ್ಯನವರೇ ಗೌರವಯುತವಾಗಿ ಒಳ್ಳೆಯ ಹೆಸರು ತೆಗೆದುಕೊಂಡು ಹೋಗಿ. ಹಲವಾರು ಭಾಗ್ಯ ಕೊಟ್ಟರೂ 2018ರಲ್ಲಿ 85 ಸೀಟಿಗೆ ಇಳಿಸಿದರು ಜನರು. ಇಂಥ ಗ್ಯಾರಂಟಿ ಕೊಟ್ಟು ಜನ ಈಗ ಹೇಗೆ ಉಳಿಸ್ತಾರೆ ಅಂತ ಭಾವಿಸಬೇಡಿ ಎಂದು ಕುಮಾರಸ್ವಾಮಿ ಅವರು ತೀವ್ರ ತರಾಟೆಗೆ ತೆಗೆದುಕೊಂಡರು.

ಸಂಪುಟ ಸಭೆಯ ನಿರ್ಧಾರಗಳ ಬಗ್ಗೆ ತೀವ್ರ ಕಿಡಿಕಾರಿದ ಅವರು; ಬೇಕಾಬಿಟ್ಟಿ ನಿರ್ಧಾರಗಳನ್ನು ಕೈಗೊಳ್ಳುವ ಇದನ್ನು ಕ್ಯಾಬಿನೆಟ್ ಎನ್ನುತ್ತೀರಾ? ಕ್ಯಾಬಿನೆಟ್ ಎನ್ನೋದು ಹೆಸರಿಗೆ ಮಾತ್ರ. ಕ್ಯಾಬಿನೆಟ್‌ನಲ್ಲಿ ಹೇಳೋರು ಕೇಳೋರು ಯಾರೂ ಇಲ್ಲ.



ಕ್ಯಾಬಿನೆಟ್ ಅಂದ್ರೆ ಎಲ್ಲವನ್ನೂ ಹರಾಜು ಹಾಕುವ ಮನೆ ಎನ್ನಬಹುದಾ? ಎಂದು ಅವರು ಲೇವಡಿ ಮಾಡಿದರು.

**ರಿಯಲ್ ಎಸ್ಟೇಟ್ ಸರ್ಕಾರದ ಕೆಲಸವಲ್ಲ:** ರಿಯಲ್ ಎಸ್ಟೇಟ್ ಮಾಡುವುದು ರಾಜ್ಯ ಸರ್ಕಾರದ ಕೆಲಸವಲ್ಲ ಎಂದು ಸಿದ್ದರಾಮಯ್ಯ ಸರಕಾರದ ಮೇಲೆ ಹರಿಹಾಯ್ದಿರುವ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು, ರೈತರಿಗೆ ಬೇಡವಾಗಿರುವ ಬಿಡದಿ ಟೌನ್ ಶಿಪ್ ಯೋಜನೆಯನ್ನು ಕೂಡಲೇ ಕೈಬಿಡಬೇಕು ಎಂದು ಒತ್ತಾಯಿಸಿದ್ದಾರೆ.

ಪಕ್ಷದ ರಾಜ್ಯ ಕಚೇರಿಯಲ್ಲಿ ಮಾಧ್ಯಮಗೋಷ್ಠಿಯನ್ನು ಉದ್ದೇಶಿಸಿ ಮಾತಾಡಿಸಿದ ಕೇಂದ್ರ ಸಚಿವರು, ರೈತರು ಜಮೀನು ನೀಡಲ್ಲ ಎಂದು ಬೀದಿಯಲ್ಲಿ ಕೂತಿದ್ದಾರೆ. ಆದರೆ, ರಾಜ್ಯ ಸರ್ಕಾರದಲ್ಲಿರುವ ರಿಯಲ್ ಎಸ್ಟೇಟ್ ದಂಧೆಕೋರರು ಭೂಮಿಯನ್ನು ಕಿತ್ತುಕೊಂಡು ವ್ಯವಹಾರ ಮಾಡಿಯೇ ಸಿದ್ಧ ಎಂದು ಹೊರಟಿದ್ದಾರೆ. ಇದು ಯಾರಪ್ಪನ ಭೂಮಿ ಅವರು ಧಮ್ಕಿ ಹಾಕಿ ಕಿತ್ತುಕೊಳ್ಳುವುದಕ್ಕೆ ಎಂದು ಕಿಡಿಕಾರಿದರು.

ಎಂಟು ಹಳ್ಳಿಗಳ ರೈತರ ಅತ್ಯಂತ ಫಲವತ್ತಾದ ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ಕೃಷಿ ಭೂಮಿಯನ್ನು ಲಪಟಾಯಿಸಿ ರಿಯಲ್ ಎಸ್ಟೇಟ್ ಮಾಡಲು ಹೊರಟಿರುವ ರಾಜ್ಯ ಸರ್ಕಾರವು ನೇರವಾಗಿ ದಂಧೆಯಲ್ಲಿ ಮುಳುಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಈ ದಂಡಕೋರರ ಕೈಗೊಂಬೆಯಾಗಿ ವರ್ತಿಸುತ್ತಿದ್ದಾರೆ ಎಂದು ಸಚಿವ ಕುಮಾರಸ್ವಾಮಿ ಅವರು ಗಂಭೀರ ಆರೋಪ ಮಾಡಿದರು.

### ರೈತರನ್ನು ಬೆದರಿಸಿ ಹೆದರಿಸುವ, ಬೆದರಿಸುವ ಕೆಲಸ ಆಗುತ್ತಿದೆ

ಯಾವುದೇ ಕಾರಣಕ್ಕೂ ಭೂಮಿ ಕೊಡುವುದಿಲ್ಲ ಎನ್ನುವುತ್ತಿರುವ ರೈತರನ್ನು ಬೆದರಿಸಿ ಹೆದರಿಸುವ, ಬೆದರಿಸುವ ಕೆಲಸ ಆಗುತ್ತಿದೆ. ಇಂತಹವರ ಬೆದರಿಕೆಯ ಆಟ ನಮ್ಮ ಮುಂದೆ ನಡೆಯುವುದಿಲ್ಲ. ಭೂಮಿ ಬಿಟ್ಟು ಕೊಡುವ ಪ್ರಶ್ನೆಯೇ ಇಲ್ಲ. ಯಾವ ರೈತರು ಕೂಡ ಭೂಮಿ ಬಿಟ್ಟುಕೊಡಲು ತಯಾರಿಲ್ಲ. ಅದು ಹೇಗೆ ಭೂಮಿ ವಶಪಡಿಸಿಕೊಳ್ಳುತ್ತಿರೋ ಬಂದು ವಶಪಡಿಸಿಕೊಳ್ಳಲಿ ನೋಡೋಣ ಎಂದು ಕುಮಾರಸ್ವಾಮಿ ಅವರು ನೇರ ಸವಾಲು ಹಾಕಿದರು. ಯಾರ ಯಾರ ಕಾಲದಲ್ಲಿ ಯಾರ ಯಾರ ಕಾಲು ಕಟ್ಟೇರಿ ಎನ್ನುವುದು ನನಗೆ ಗೊತ್ತಿದೆ ಎಂದು ಹೇಳುತ್ತಲೇ ಕೆಲವರ ಹೆಸರು ಹೇಳದೆ ಆಕ್ರೋಶ ವ್ಯಕ್ತಪಡಿಸಿದ ಕೇಂದ್ರ ಸಚಿವರು, ಇದೇ ಸಂದರ್ಭದಲ್ಲಿ ರಾಮನಗರದ ಜಿಲ್ಲಾಧಿಕಾರಿಗೆ ಕಟುವಾದ ಶಬ್ದಗಳಿಂದ ಎಚ್ಚರಿಕೆ ನೀಡಿದರು.

| ಈ ದಿನದ ದರ | ಪೆಟ್ರೋಲ್: 102.92 ₹/L | ಡೀಸೆಲ್ : 90.99 ₹/L | ಬಂಗಾರ: ₹16,233/Gram24ct | ₹14,880/Gram22ct | ಬೆಳ್ಳಿ: ₹300.00/Gram |
|---|---|---|---|---|---|

## ಅಧಿಕ ಮಾಸದ ಪ್ರವಚನ ಮಾಲಿಕೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ತ್ಯಾಗರಾಜನಗರದ 11ನೇ ಅಡ್ಡರಸ್ತೆಯಲ್ಲಿರುವ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಅಧಿಕ ಮಾಸದ ಪ್ರಯುಕ್ತ ಮೇ 17 ರಿಂದ ಜೂನ್ 14ರ ವರೆಗೆ ಪ್ರತಿದಿನ ಸಂಜೆ 6-00ಕ್ಕೆ ಧಾರ್ಮಿಕ ಪ್ರವಚನ ಮಾಲಿಕೆ ಹಮ್ಮಿಕೊಳ್ಳಲಾಗಿದೆ.

**ಕಾರ್ಯಕ್ರಮಗಳು :** ಮೇ 17ರಂದು ಉದ್ಘಾಟನೆ, 18 ರಿಂದ 24-ಶ್ರೀ ಕಂಬಾಲೂರು ಶ್ರೀವತ್ಸಾಚಾರ್ಯರಿಂದ ಅಧಿಕ ಮಾಸ ಮಹಾತ್ಮೆ, ಮೇ 25 ರಿಂದ 31-ಶ್ರೀಗುರುಪವನಾಚಾರ್ಯರಿಂದ ಶ್ರೀಮದ್ಭಾಗವತ ಪ್ರಥಮ ಸ್ಕಂದದಿಂದ ಸಪ್ತಮ ಸ್ಕಂದದವರೆಗೆ, ಜೂನ್ 1 ರಿಂದ 7-ಡಾ|| ಕೃಷ್ಣಾಚಾರ್ ಕೆಂಪದಾಳಹಳ್ಳಿ ಇವರಿಂದ ಶ್ರೀಮದ್ಭಾಗವತದ ಅಷ್ಟಮ ಸ್ಕಂದದಿಂದ ದ್ವಾದಶ ಸ್ಕಂದದವರೆಗೆ, ಜೂನ್ 8 ರಿಂದ 14-ಶ್ರೀ ವಿಜಯೀಂದ್ರಾಚಾರ್ ಪಸಗಿ ಇವರಿಂದ ಹರಿದಾಸರ ಕೀರ್ತನೆಗಳಲ್ಲಿ ಜ್ಞಾನ-ಭಕ್ತಿ-ವೈರಾಗ್ಯ ವಿಷಯವಾಗಿ ಧಾರ್ಮಿಕ ಪ್ರವಚನಗಳು ಜರುಗಲಿವೆ.

**ವಿಶೇಷ ಕಾರ್ಯಕ್ರಮಗಳು :** ಮೇ 24, ಭಾನುವಾರ ಸಂಜೆ 5-30ಕ್ಕೆ ಸಾಮೂಹಿಕ ದುರ್ಗಾ ನಮಸ್ಕಾರ, ಜೂನ್ 11, ಗುರುವಾರ ಸಂಜೆ 5-30ಕ್ಕೆ ಹರಿದಾಸರುಗಳಿಂದ ರಚಿಸಲ್ಪಟ್ಟ 33 ಹಾಡುಗಳ ಗಾಯನ ಹಾಗೂ ಹರಿವಾಣ ಸೇವೆ, ಜೂನ್ 14, ಭಾನುವಾರ ಸರ್ವ ಸಮರ್ಪಣೋತ್ಸವ, ನರಸಿಂಹ ಮಹಾ ಮಂತ್ರ ಹೋಮ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

## ಹೂಡಿಕೆ ಚಿನ್ನ ಖರೀದಿ ವ್ಯವಹಾರ ನಿಲ್ಲಲಿ: ಟಿ.ಎ. ಶರವಣ

• ಉದಯವಾಹಿನಿ, ಬೆಂಗಳೂರು

ಚಿನ್ನದ ಖರೀದಿಯನ್ನು ಒಂದು ವರ್ಷದವರೆಗೆ ಮುಂದೂಡುವಂತೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿರುವುದು 'ಆಭರಣ'ಗಳಿಗೆ ಅಲ್ಲ, 'ಬುಲಿಯನ್'ಗಳಿಗೆ. ಹಾಗಾಗಿ ಬುಲಿಯನ್ (ಹೂಡಿಕೆ ಚಿನ್ನ) ಖರೀದಿ ವ್ಯವಹಾರ ಸದ್ಯಕ್ಕೆ ನಿಲ್ಲಿಸಬೇಕು ಎಂದು ಕರ್ನಾಟಕ ಜುವೆಲ್ಲರಿ ಅಸೋಸಿಯೇಷನ್ ಅಧ್ಯಕ್ಷರೂ ಆಗಿರುವ ವಿಧಾನ ಪರಿಷತ್ ಸದಸ್ಯ ಟಿ.ಎ. ಶರವಣತಿಳಿಸಿದರು. ಪ್ರಧಾನಿ ನೀಡಿದ ಕರೆಯ ಸಾಧಕ-ಬಾಧಕ ಕುರಿತು ನಡೆಸಿದ ಮಾತುಕತೆಯಲ್ಲಿ ಅವರು ಈ ಮಾಹಿತಿ ನೀಡಿದರು.

'ವಿದೇಶಕ್ಕೆ ಹೋಗಬೇಡಿ, ವಾಹನಗಳನ್ನು ಕಡಿಮೆ ಬಳಕೆ ಮಾಡಿ, ಸಂಚಾರಕ್ಕೆ ಸಾರ್ವಜನಿಕ ಸಾರಿಗೆ ವಾಹನಗಳನ್ನು ಬಳಸಿ, ಚಿನ್ನಾಭರಣ ಖರೀದಿ ಮುಂದಕ್ಕೆ ಹಾಕಿ ಎಂಬ ಕರೆಯನ್ನು ಸ್ವಾಗತ ಮಾಡುತ್ತೇನೆ. ಯಾಕೆಂದರೆ ಭಾರತದ ರೂಪಾಯಿ ಸದೃಢ ವಾಗಬೇಕು. ಭಾರತದ ಆರ್ಥಿಕತೆ ಬಲವಾಗಬೇಕು' ಎಂದು ಹೇಳಿದರು.

ಬಂಡವಾಳ ಹೂಡಿಕೆ ಚಿನ್ನ (ಬುಲಿಯನ್), ನಿತ್ಯ ಬಳಕೆಯ ಆಭರಣದ ಚಿನ್ನ ನಮ್ಮ ಸಂಸ್ಕೃತಿ ಸಂಸ್ಕಾರದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಅದು ಅನಿವಾರ್ಯ. ಅದನ್ನು ಖರೀದಿಸಿ. ಬಂಡವಾಳ ಹೂಡಿಕೆ ಚಿನ್ನವನ್ನು ನಿಲ್ಲಿಸಿದರೆ ಶೇ 50ರಷ್ಟು ಚಿನ್ನ ಖರೀದಿ ಕಡಿಮೆಯಾಗುತ್ತದೆ ಎಂದರು.

## ಮುಷ್ಕರ: ಜೀವರಕ್ಷಕ ಔಷಧ ದಾಸ್ತಾನಿಗೆ ಸೂಚನೆ

• ಉದಯವಾಹಿನಿ, ಬೆಂಗಳೂರು

ಆನ್‌ಲೈನ್ ಔಷಧ ಮಾರಾಟ ವಿರೋಧಿಸಿ ಔಷಧ ವ್ಯಾಪಾರಿಗಳು ಇದೇ 20ರಂದು ದೇಶದಾದ್ಯಂತ ಮುಷ್ಕರ ನಡೆಸುತ್ತಿರುವ ಕಾರಣ, ಜೀವರಕ್ಷಕ ಔಷಧಗಳು ಕೊರತೆ ಆಗದಂತೆ ಕ್ರಮವಹಿಸಲು ಆಹಾರ ಸುರಕ್ಷತೆ ಔಷಧ ಆಡಳಿತ ಇಲಾಖೆ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಸೂಚಿಸಿದೆ. ಇ-ಫಾರ್ಮಸಿ ವೇದಿಕೆಗಳು ಒದಗಿಸುವ ಭಾರಿ ರಿಯಾಯಿತಿಯನ್ನೂ ವಿರೋಧಿಸಿರುವ ಆಲ್ ಇಂಡಿಯಾ ಆರ್ಗನೈಸೇಷನ್ ಆಫ್ ಕೆಮಿಸ್ಟ್ ಆ್ಯಂಡ್ ಡ್ರಗ್ಗಿಸ್ಟ್, ದೇಶದಾದ್ಯಂತ ಮುಷ್ಕರಕ್ಕೆ ಕರೆ ನೀಡಿದೆ.

'ಔಷಧ ವ್ಯಾಪಾರಿಗಳ ಸಂಘದ ರಾಜ್ಯ ಪದಾಧಿಕಾರಿ ಗಳೊಂದಿಗೆ ಆನ್‌ಲೈನ್ ವೇದಿಕೆ ಮೂಲಕ ಸಭೆ ನಡೆಸಿ, ಅವರ ಅಭಿಪ್ರಾಯ ಸಂಗ್ರಹಿಸಲಾಗಿದೆ. ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಜೀವರಕ್ಷಕ ಔಷಧಗಳು ಜನರಿಗೆ ಲಭ್ಯವಾಗುವಂತಾಗಲುಆಸ್ಪತ್ರೆ, ನರ್ಸಿಂಗ್ ಹೋಮ್ ಆವರಣದಲ್ಲಿ ಇರುವ ಔಷಧ ಮಳಿಗೆಗಳನ್ನು ಮುಚ್ಚದಿರಲು ಮನವಿ ಮಾಡಲಾಗಿದೆ' ಎಂದು ಇಲಾಖೆ ಆಯುಕ್ತ ಕೆ.ಶ್ರೀನಿವಾಸ ತಿಳಿಸಿದ್ದಾರೆ. ರಾಜ್ಯದ ಎಲ್ಲಾ ಜಿಲ್ಲಾ ಆರೋಗ್ಯಾಧಿಕಾರಿ ಗಳು

ಸರ್ಕಾರಿ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧ ಕೊರತೆಯಾಗದಂತೆ ಕ್ರಮವಹಿಸಲಿದ್ದಾರೆ. ಜಿಲ್ಲಾಮಟ್ಟ ದಲ್ಲಿ ಸಹಾಯಕ ಔಷಧ ನಿಯಂತ್ರಕರನ್ನು ನೋಡಲ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ' ಎಂದು ಪ್ರಕಟಣೆಯಲ್ಲಿ ಹೇಳಿದ್ದಾರೆ.

## ಪುರುಷರ ಮದ್ಯ ವ್ಯಸನದಿಂದ ಮಹಿಳೆಯರ ಮೇಲಿನ ದೌರ್ಜನ್ಯ ಹೆಚ್ಚಳ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಒಟ್ಟಾರೆ ಜನಸಂಖ್ಯೆಯಲ್ಲಿ ಶೇ.11ರಷ್ಟು ಜನರು ಮದ್ಯಕ್ಕೆ ದಾಸರಾಗಿದ್ದು, ಕುಡಿತದ ದಾಸ್ಯವು ವಿವಾಹಿತ ಮಹಿಳೆಯರ ಮೇಲಿನ ದೈಹಿಕ ದೌರ್ಜನ್ಯದ ಹೆಚ್ಚಳಕ್ಕೆ ಕಾರಣವಾಗಿರುವ ಕಳವಳಕಾರಿ ಸಂಗತಿ ವರದಿಯಲ್ಲಿ ಬಯಲಾಗಿದೆ. ಅಬಕಾರಿ ಉದ್ಯಮಕ್ಕೆ ಕಾಯಕಲ್ಪ ನೀಡಲು ಹಾಗೂ ಮದ್ಯ ವ್ಯಸನದ ಸಾಮಾಜಿಕ ಪರಿಣಾಮಗಳ ಅವಲೋಕನಕ್ಕಾಗಿ ರಚಿಸಲಾಗಿದ್ದ ಸಂಪನ್ಮೂಲ ಕ್ರೋಢೀಕರಣ ಸಮಿತಿಯ ವರದಿ ಆಧರಿಸಿ ಸರಕಾರ ಪ್ರಕಟಿಸಿರುವ ಅಬಕಾರಿ ಸುಧಾರಣೆ-2026ರ ವರದಿಯು ಕುಡುಕ ಪತಿಯಂದಿರ ದೌರ್ಜನ್ಯದ ಕರಾಳ ಮುಖವನ್ನು ತೆರೆದಿಟ್ಟಿದೆ.

ಕರ್ನಾಟಕವು ದೇಶದ ಅತಿ ದೊಡ್ಡ ವೇಗವಾಗಿ ಬೆಳೆಯುತ್ತಿರುವ ಮದ್ಯ ಮಾರುಕಟ್ಟೆಗಳಲ್ಲಿ ಒಂದಾಗಿದೆ. ಮದ್ಯದ ಬಳಕೆ ಮತ್ತು ಆರ್ಥಿಕ ಕೊಡುಗೆ ಎರಡರಲ್ಲೂ ರಾಜ್ಯವು ರಾಷ್ಟ್ರೀಯ ಮದ್ಯ ಉದ್ಯಮದಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ. ಸರಕಾರದ ಖಜಾನೆ ತುಂಬಿಸುವ ಮದಿರೆಯ ಸಾಮಾಜಿಕ ದುಷ್ಪರಿಣಾಮಗಳು ಅಷ್ಟೇ ಗಂಭೀರವಾಗಿವೆ ಎಂದು ವರದಿ ಹೇಳಿದೆ. ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆ ಆಧರಿಸಿ ಅಬಕಾರಿ ಸುಧಾರಣಾ ವರದಿ ರೂಪಿಸಲಾಗಿದೆ. ಕುಡಿತದ ಚಟವಿಲ್ಲದ ವಿವಾಹಿತ ಪುರುಷರಿಗಿಂತ ಮದ್ಯವ್ಯಸನಿಗಳು, ಪತ್ನಿ ಸೇರಿದಂತೆ ಕುಟುಂಬದ ಮಹಿಳಾ ಸದಸ್ಯರ ಮೇಲೆ ಹೆಚ್ಚು ದೌರ್ಜನ್ಯ ನಡೆಸುತ್ತಿದ್ದಾರೆ. ಪ್ರತಿನಿತ್ಯ ಮದ್ಯ ಸೇವಿಸಿ ಮನೆಗೆ ಬರುವ ಪತಿಯಂದಿರ ಪೈಕಿ ಶೇ.71ರಷ್ಟು ಮಂದಿ ಪತ್ನಿಯರ ಮೇಲೆ ಹೆಚ್ಚು ದೌರ್ಜನ್ಯ ಎಸಗುತ್ತಿದ್ದಾರೆ. ಸಾಂದರ್ಭಿಕವಾಗಿ ಮದ್ಯ ಸೇವಿಸುವ ಪುರುಷರಲ್ಲಿ ಶೇ.46ರಷ್ಟು, ಕುಡಿತದ ವ್ಯಸನವಿದ್ದರೂ ಮನೆಗೆ ಮದ್ಯ ಸೇವಿಸಿ ಬಾರದ ಪುರುಷರಲ್ಲಿ ಶೇ.33ರಷ್ಟು ಮಂದಿ ಪತ್ನಿಯರನ್ನು ಹಿಂಸಿಸುತ್ತಿದ್ದಾರೆ. ಕುಡಿತದ ಚಟವಿಲ್ಲದ ಪುರುಷರೂ ಪತ್ನಿಯರನ್ನು ಶೋಷಿಸುತ್ತಿದ್ದಾರೆ. ಸೇವಿಸುವ ಮದ್ಯದ ನಮೂನೆ, ಪ್ರಮಾಣ ನಶೆಯು ದೈಹಿಕ ಹಿಂಸೆಯ ಅಪಾಯವನ್ನು ನಿರ್ಧರಿಸುತ್ತದೆ ಎಂದು ವರದಿ ಹೇಳಿದೆ.

### 'ನನ್ನ ಖಾತಾ ನನ್ನ ಹಕ್ಕು' ಅಭಿಯಾನ ನಗರದ 50 ಸ್ಥಳಗಳಲ್ಲಿ ಮೂರು ತಿಂಗಳು ಪ್ರತಿ ಶನಿವಾರ ನಡೆಸಲಾಗುವುದು

# 'ಬಿ'ದಿಂದ 'ಎ' ಖಾತಾ: ವಿಶೇಷ ರಿಯಾಯಿತಿ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿರುವ 'ಬಿ' ಖಾತಾ ಆಸ್ತಿಗಳನ್ನು 'ಎ' ಖಾತಾವನ್ನಾಗಿ ಮಾಡಿಸಿಕೊಳ್ಳುವವರಿಗೆ ಆಸ್ತಿಯ ಮಾರ್ಗಸೂಚಿ ಮೌಲ್ಯದ ಶೇ 5ರ ಬದಲು ಶೇ 2ರಷ್ಟು ಹಣ ಪಾವತಿಸುವ ವಿಶೇಷ ರಿಯಾಯಿತಿ ದೊರೆಯಲಿದೆ. ಇದು ಸರ್ಕಾರದ ಆರನೇ ಗ್ಯಾರಂಟಿ- ಭೂ ಗ್ಯಾರಂಟಿ' ಎಂದು ಬೆಂಗಳೂರು ಅಭಿವೃದ್ಧಿ, ನಗರ ಯೋಜನೆ ಸಚಿವರೂ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು. 'ನಗರದಲ್ಲಿ 23 ಲಕ್ಷ ಮನೆಗಳಿವೆ. ಅದರಲ್ಲಿ 16 ಲಕ್ಷ ಆಸ್ತಿಗಳು 'ಎ' ಖಾತಾ ಹೊಂದಿವೆ. 7 ಲಕ್ಷ ಆಸ್ತಿಗಳು 'ಬಿ' ಖಾತೆಯಲ್ಲಿವೆ. ಮಾರ್ಗಸೂಚಿ ಮೌಲ್ಯ ಶೇ 5ರಷ್ಟು ಕಟ್ಟಿ 'ಎ' ಖಾತೆಯಾಗಿ ಪರಿವರ್ತನೆ ಮಾಡಲು ಹಿಂದೆ ಅವಕಾಶ ನೀಡಲಾಗಿತ್ತು. ಕೇವಲ 11 ಸಾವಿರ ಜನರು ಅರ್ಜಿ ಸಲ್ಲಿಸಿದ್ದು, 5 ಸಾವಿರ ಆಸ್ತಿಗಳಿಗೆ 'ಎ' ಖಾತೆ ಮಾಡಿ ಕೊಡಲಾಗಿದೆ. ದಾಖಲೆಗಳು ಸರಿ ಇದ್ದರೆ ಕೂಡಲೇ ಅರ್ಜಿ ಸಲ್ಲಿಸಿ ಸರಿಪಡಿಸಿಕೊಳ್ಳಲು ಅವಕಾಶ ನೀಡಲಾಗಿದೆ ವಿಶೇಷ ರಿಯಾಯಿತಿಯ ಅವಧಿ ಮುಗಿದ ಬಳಿಕವಾದರೆ ಶೇ 5 ಪಾವತಿ ಮಾಡಬೇಕಾಗುತ್ತದೆ. ಇಲ್ಲದೇ ಇದ್ದರೆ 'ಬಿ' ಖಾತೆಯೇ ಮುಂದುವರಿಯಲಿದ್ದು, ಮಾರಾಟ ಮಾಡಲಾಗಲಿ, ಇನ್ನಿತರ ಸೌಲಭ್ಯ ಪಡೆಯಲಾಗಲಿ ಸಾಧ್ಯವಾಗುವುದಿಲ್ಲ' ಎಂದರು. ಅಭಿಯಾನದ ಸಂದರ್ಭದಲ್ಲಿ ರಜೆಗಳಿದ್ದರೂ ಅಧಿಕಾರಿಗಳು, ನೌಕರರು ಕೆಲಸ ಮಾಡಬೇಕು. ಅವರಿಗೆ ಬೇರೆ ದಿವಸ ರಜೆ ತೆಗೆದುಕೊಳ್ಳಲು ಅವಕಾಶ ಮಾಡಿಕೊಡಲಾಗುವುದು ಎಂದರು. 'ನಾವು ಅಕ್ರಮ-ಸಕ್ರಮ ಮಾಡುತ್ತಿಲ್ಲ. ಭೂಮಿಗೆ ತೀವ್ರ ಬೇಡಿಕೆ ಬಂದಿದೆ. ಇದರಿಂದಾಗಿ 20/30, 30/40, 40/60 ಅಳತೆಯ ನಿವೇಶನಗಳಲ್ಲಿ ಮನೆ ಕಟ್ಟಿಕೊಂಡವರಿಗಷ್ಟೇ ಈ ವಿನಾಯಿತಿ ನೀಡುತ್ತಿದ್ದೇವೆ. ದೊಡ್ಡ ನಿವೇಶನದಾರರಿಗಲ್ಲ' ಎಂದರು. ಬಿಡಿಎ ಬಡಾವಣೆಗಳಲ್ಲಿ 1 ಲಕ್ಷಕ್ಕೂ ಅಧಿಕ ಮನೆಗಳನ್ನು ಜನರು ಕಟ್ಟಿಕೊಂಡಿದ್ದರು. ಅವರಿಗೆ ಸ್ವಾಧೀನಾನುಭವ ಪ್ರಮಾಣಪತ್ರ ನೀಡಲು 2020 ರಲ್ಲಿ ಬಿಜೆಪಿ ಸರ್ಕಾರ 38 'ಡಿ' ಕಾನೂನು ಜಾರಿಗೆ ತಂದಿತ್ತು. 600 ಅಡಿವರೆಗೆ ಶೇ 10 ರಷ್ಟು, 600 ರಿಂದ 900 ಅಡಿವರೆಗೆ ಶೇ 25 ರಷ್ಟು, 1200 ರಿಂದ 2400 ವರೆಗೆ ಶೇ 40 ರಷ್ಟು, 2400 ರಿಂದ 4000 ಅಡಿವರೆಗೆ ಶೇ 50 ರಷ್ಟು ಮಾರ್ಗಸೂಚಿ ಮೌಲ್ಯ ಕಟ್ಟಿ ಪ್ರಮಾಣಪತ್ರ ಪಡೆಯಲು ಅವಕಾಶ ಮಾಡಿಕೊಡಲಾಗಿತ್ತು. ಆದರೆ, ಶುಲ್ಕ ಹೆಚ್ಚಾಯಿತು ಎಂಬ ಕಾರಣಕ್ಕೆ ಬಹುತೇಕರು ಅರ್ಜಿ ಸಲ್ಲಿಸಿರಲಿಲ್ಲ. 570 ಅರ್ಜಿಗಳಷ್ಟೇ ಬಂದಿದ್ದವು' ಎಂದು ಹೇಳಿದರು.

ಈಗ ಅರ್ಜಿ ಹಾಕಲು ಜೂನ್ 15 ರಿಂದ ಒಟ್ಟು ಮೂರು ತಿಂಗಳ ಕಾಲ ಅವಕಾಶ ಕಲ್ಪಿಸಿಕೊಡಲಾಗುವುದು. ಒಟಿಎಸ್ ಜಾರಿ ಮಾಡಲಾಗುವುದು. ಮೊದಲ ಮೂರು ತಿಂಗಳು ಅರ್ಜಿ ಸಲ್ಲಿಸಲು, ಆ ನಂತರದ ಮೂರು ತಿಂಗಳು ಅರ್ಜಿ ಪರಿಶೀಲನೆಗೆ ಹಾಗೂ ಬಳಿಕ ಆರು ತಿಂಗಳು ಶುಲ್ಕ ಪಾವತಿಗೆ ಅವಕಾಶ ನೀಡಲಾಗುವುದು. 1 ವರ್ಷ ಕಾಲಮಿತಿಯೊಳಗೆ ಅಂದರೆ 2027ರ ಜೂನ್‌ಗೆ ಈ ಯೋಜನೆ ಮುಕ್ತಾಯಗೊಳಿಸಲಾಗವುದು ಎಂದರು. ಈ 'ಮೂರು ತಿಂಗಳ ಒಳಗೆ ಅರ್ಜಿ ಸಲ್ಲಿಸಿದವರು ಶೇ 10ರ ಬದಲು ಶೇ 5 ರಷ್ಟು ಮಾತ್ರ ಪಾವತಿ ಮಾಡಬಹುದು. ಅವರಿಗೆ ಶೇ 50 ರಷ್ಟು ರಿಯಾಯಿತಿ ದೊರೆಯಲಿದೆ. ಈ ಬಗ್ಗೆ ಮುಖ್ಯಮಂತ್ರಿ, ಇತರ ಸಚಿವರೊಂದಿಗೆ ಚರ್ಚೆ ನಡೆಸಲಾಗಿದೆ' ಎಂದು ಹೇಳಿದರು. 'ಈ ಯೋಜನೆಯ ಸೌಲಭ್ಯ ಬಳಸಿಕೊಳ್ಳದೇ ಇದ್ದರೆ ಕಾನೂನು ರೀತಿ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ.ಈಗಾಗಲೇ ಬಿಡಿಎ 2 ಸಾವಿರ ಕೋಟಿ ಮೌಲ್ಯದ ಆಸ್ತಿಗಳನ್ನು ವಶಕ್ಕೆ ಪಡೆದಿದೆ' ಎಂದರು.

**ಶಿವರಾಮ ಕಾರಂತ ಬಡಾವಣೆ: 18 ಸಾವಿರ ನಿವೇಶನ ಹಂಚಿಕೆ**

ಶಿವರಾಮ ಕಾರಂತ ಬಡಾವಣೆಗೆ 3,052 ಭೂ ಮಾಲೀಕರು ಆಸ್ತಿಯನ್ನು ನೀಡಿದ್ದರು. ಹಲವು ಆಸ್ತಿ ಮಾಲೀಕರು ಬೇರೆಯವರಿಗೆ ಆಸ್ತಿ ಮಾರಾಟ ಮಾಡಿದ್ದು ಸೇರಿದಂತೆ ಅನೇಕ ತೊಡಕುಗಳಿದ್ದವು. ಈಗ ನ್ಯಾಯಾಲಯದ ಅನುಮತಿ ಪಡೆದು 18 ಸಾವಿರ ನಿವೇಶನಗಳನ್ನು ಭೂ ಮಾಲೀಕರಿಗೆ ನೀಡಲಾಗುತ್ತಿದೆ.

ಮೇ 15ನೇ ತಾರೀಕಿನಿಂದಲೇ ನಿವೇಶನ ಪಡೆದುಕೊಳ್ಳಲು ಅವಕಾಶ ನೀಡಲಾಗಿದೆ. ಕೇಂದ್ರಿಯ ಇ- ಗವರ್ನೆನ್ಸ್‌ನಿಂದ ಸಾಫ್ಟವೇರ್ ಅಭಿವೃದ್ಧಿಪಡಿಸಿ ಅದರ ಮೂಲಕ ಹಂಚಿಕೆ ವ್ಯವಸ್ಥೆ ಮಾಡಲಾಗಿದೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

1 ಎಕರೆ ಅಥವಾ ಹೆಚ್ಚು ಜಮೀನು ಹೊಂದಿದ್ದ ಮಾಲೀಕರಿಗೆ ಪ್ರತ್ಯೇಕ ಅವಕಾಶ ಕಲ್ಪಿಸಲಾಗಿದೆ. ಒಂದೇ ಜಾಗದಲ್ಲಿ ದೊಡ್ಡ ನಿವೇಶನ ಬೇಕು ಎಂದವರಿಗೂ ಅವಕಾಶ ನೀಡುತ್ತೇವೆ ಎಂದು ಹೇಳಿದ್ದೆವು. ಇದಕ್ಕೆ 7 ಜನರು ಮಾತ್ರ ಅರ್ಜಿ ಸಲ್ಲಿಸಿದ್ದಾರೆ. 1 ಎಕರೆ ಜಮೀನು ಇದ್ದರೆ ಒಂದೇ ಜಾಗದಲ್ಲಿ 9,583 ಚದರ ಅಡಿ ಜಾಗ ನೀಡಲಾಗುವುದು. ಎತ್ತರದ ಕಟ್ಟಡಗಳಿಗೆ ಅವಕಾಶ ಮಾಡಿಕೊಡಲು ಈ ರೀತಿ ಅನುಕೂಲ ಕಲ್ಪಿಸಲಾಗಿದೆ' ಎಂದು ವಿವರಿಸಿದರು.


**'ಬಿಸಿನೆಸ್ ಕಾರಿಡಾರ್ ಜಮೀನು ಡಿನೋಟಿಫಿಕೇಶನ್ ಇಲ್ಲ'**

ಬಿಸಿನೆಸ್ ಕಾರಿಡಾರ್‌ಗೆ ಜಮೀನು ನೀಡಿದವರಿಗೆ ದುಪ್ಪಟ್ಟು ಪರಿಹಾರ ನೀಡಲಾಗುವುದು. ಯಾವುದೇ ಕಾರಣಕ್ಕೆ ಡಿನೋಟಿಫಿಕೇಶನ್ ಮಾಡುವುದಿಲ್ಲ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

ಬಿಸಿನೆಸ್ ಕಾರಿಡಾರ್‌ನ ಮೊದಲನೇ ಹಂತಕ್ಕೆ ಶೇ 80ರಷ್ಟು ಜನರು ಒಪ್ಪಿಗೆ ನೀಡಿದ್ದಾರೆ. ಎರಡನೇ ಹಂತಕ್ಕೆ ನೋಟಿಫಿಕೇಷನ್ ಮಾಡಲಾಗಿದೆ. ಜಮೀನು ನೀಡಲು ರೈತರೂ ಮುಂದೆ ಬರುತ್ತಿದ್ದಾರೆ ಎಂದು ಹೇಳಿದರು.

> ಬಿಡಿಎಗೆ 50 ವರ್ಷ ತುಂಬಿದೆ. ಇದರ ನೆನಪಿಗೆ ಜೂನ್ 27ರಂದು ಕೆಂಪೇಗೌಡ ಜಯಂತಿ ದಿನ 'ಗ್ರೀನ್ ಬೆಂಗಳೂರು' ಕಾರ್ಯಕ್ರಮದ ಮೂಲಕ ಒಂದೇ ದಿನ 15 ಲಕ್ಷ ಸಸಿಗಳನ್ನು ನೆಡಲಾಗುವುದು
> – ಡಿ.ಕೆ. ಶಿವಕುಮಾರ್, ಉಪ ಮುಖ್ಯಮಂತ್ರಿ

ಭೂಮಿಗೆ ತೀವ್ರ ಬೇಡಿಕೆ



**ವಿನಾಯಿತಿ ಮಿತಿ ಶೇ 15ಕ್ಕೆ ಹೆಚ್ಚಳ**

**ಕಟ್ಟಡ ನಿಯಮ ಉಲ್ಲಂಘನೆ ವಿನಾಯಿತಿ ಮಿತಿಯನ್ನು ಶೇ 5ರ ಬದಲಾಗಿ ಶೇ 15ಕ್ಕೆ ಹೆಚ್ಚಿಸಲಾಗಿದೆ. ಶೇ15 ರಷ್ಟು ಪ್ರಮಾಣದ ಉಲ್ಲಂಘನೆಗಳಿಗೆ ದಂಡ ಪಾವತಿಸಿಕೊಂಡು ಸ್ವಾಧೀನಾನುಭವ ಪ್ರಮಾಣ ಪತ್ರ ನೀಡಲು ಒಪ್ಪಿಗೆ ನೀಡಲಾಗಿದೆ. ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯದ ಕಟ್ಟಡಗಳಿಗೆ ವಿದ್ಯುತ್ ಹಾಗೂ ನೀರು ಸರಬರಾಜು ಸೌಕರ್ಯ ಒದಗಿಸಬಾರದೆಂದು ಸುಪ್ರೀಂ ಕೋರ್ಟ್ ಆದೇಶಿಸಿದೆ. ಶೇ 15ಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಉಲ್ಲಂಘನೆ ಮಾಡಿರುವ ಪ್ರಕರಣಗಳ ಸಮಸ್ಯೆ ನಿವಾರಿಸಲು ಮುಂದಿನ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಮಾಡಲಾಗುವುದು' ಎಂದು ಡಿ.ಕೆ. ಶಿವಕುಮಾರ್ ಮಾಹಿತಿ ನೀಡಿದರು.**

## ಬಸ್ ಆದ್ಯತಾ ಪಥಕ್ಕೆ ಹೊಸ ರೂಪ: ಬಿಎಂಟಿಸಿ ಅಧಿಕಾರಿಗಳು

• ಉದಯವಾಹಿನಿ, ಬೆಂಗಳೂರು

ನಗರದ ಹೊರ ವರ್ತುಲ ರಸ್ತೆಯಲ್ಲಿ(ಒಆರ್‌ಆರ್) ವಾಹನ ದಟ್ಟಣೆ ನಿಯಂತ್ರಿಸಿ, ಸುಗಮ ಸಂಚಾರಕ್ಕೆ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ, ಬಿಎಂಆರ್‌ಸಿಎಲ್, ಪೊಲೀಸ್ ಇಲಾಖೆ, ಬಿಎಂಟಿಸಿ ಅಧಿಕಾರಿಗಳು, ಹೊರ ವರ್ತುಲ ರಸ್ತೆಯಲ್ಲಿರುವ ವಿವಿಧ ಕಂಪನಿಗಳ ಅಸೋಸಿಯೇಷನ್ ಪ್ರತಿನಿಧಿಗಳೊಂದಿಗೆ ಬುಧವಾರ ಸಭೆ ನಡೆಸಿದರು.

ಕಂಪನಿಗಳಿಗೆ ಕೆಲಸಕ್ಕೆ ಬರುವವರು ದ್ವಿಚಕ್ರ ವಾಹನ ಬಳಕೆಯನ್ನು ಕಡಿಮೆ ಮಾಡಿ ಸಾರ್ವಜನಿಕ ಸಾರಿಗೆ ಬಳಸುವಂತೆ ಉತ್ತೇಜಿಸಲು ಕ್ರಮ ಕೈಗೊಳ್ಳಲು ಸಭೆ ನಿರ್ಧರಿಸಿತು. ಅಲ್ಲದೇ, ಹೊರ ವರ್ತುಲ ರಸ್ತೆಯಲ್ಲಿ ಹೊಸ ರೂಪದಲ್ಲಿ ಬಸ್ ಆದ್ಯತಾ ಪಥ ನಿರ್ಮಾಣ ಮಾಡುವುದರ ಕುರಿತೂ ಸಭೆಯಲ್ಲಿ ಚರ್ಚಿಸಲಾಯಿತು. ನಗರ ಪೊಲೀಸ್ ಕಮಿಷನರ್ ಸೀಮಾಂತ್ ಕುಮಾರ್ ಸಿಂಗ್ ನೇತೃತ್ವದಲ್ಲಿ ಈ ಸಭೆ ನಡೆಯಿತು. ಸಂಚಾರ ವಿಭಾಗದ ಜಂಟಿ ಪೊಲೀಸ್‌ಕಮಿಷನರ್ ಕಾರ್ತಿಕ್ ರೆಡ್ಡಿ ಮಾತನಾಡಿ, 'ಬಸ್‌ಆದ್ಯತಾ ಪಥವನ್ನು ಹೈ ಆಕ್ಯುಪೆನ್ಸಿ ವಾಹನ(ಎಚ್‌ಒವಿ)ಮಾರ್ಗಗಳಾಗಿ ಬದಲಾವಣೆ ಮಾಡಬಹುದು. ಆಗ, ಮೂರು ಮಂದಿಗಿಂತ ಹೆಚ್ಚು



ಉದಯವಾಹಿನಿ ಚಿತ್ರ

ಪ್ರಯಾಣಿಕರಿರುವ ವಾಹನಗಳೂ ಈ ಮಾರ್ಗವನ್ನು ಬಳಸಬಹುದಾಗಿದೆ ಎಂದು ಸಲಹೆ ನೀಡಿದರು. ಹೊರವರ್ತುಲ ರಸ್ತೆಯಲ್ಲಿ ಬಸ್ ಆದ್ಯತಾ ಪಥವು ಯಶಸ್ವಿ ಆಗಿತ್ತು. ಅದೇ ಆಧಾರದಲ್ಲಿ ಎಚ್.ಒ.ವಿ ಮಾರ್ಗಗಳು ಈ ಪ್ರದೇಶಕ್ಕೆ ಪರಿಹಾರ ನೀಡಬಹುದು' ಎಂದು ಸಂಚಾರ ವಿಭಾಗದ ಡಿಸಿಪಿ ಸಾಹಿಲ್ ಬಾಗ್ಲಾ ತಿಳಿಸಿದರು.

ಕೋವಿಡ್ ಲಾಕ್‌ಡೌನ್‌ಗೂ ಮೊದಲು ಬಸ್ ಆದ್ಯತಾ ಪಥಗಳು ಕಾರ್ಯ ನಿರ್ವಹಿಸುತ್ತಿದ್ದವು. ಆಗ ಬಸ್‌ಗಳು 15 ನಿಮಿಷ ಬೇಗ ತಲುಪುತ್ತಿದ್ದವು. ಇಂಧನವೂ ಉಳಿತಾಯವಾಗುತ್ತಿತ್ತು. ಪ್ರಯಾಣಿಕರ ಸಂಖ್ಯೆಯಲ್ಲೂ ಶೇ 4ರಷ್ಟು ಏರಿಕೆ ಆಗಿತ್ತು ಎಂದು ಬಿಎಂಟಿಸಿ ಮುಖ್ಯ ಸಂಚಾರ ವ್ಯವಸ್ಥಾಪಕ ಜಿ.ಟಿ.ಪ್ರಭಾಕರ್ ರೆಡ್ಡಿ ಮಾಹಿತಿ ಹಂಚಿಕೊಂಡರು. ಪ್ರಸ್ತುತ ಹೊರ ವರ್ತುಲ ರಸ್ತೆಯಲ್ಲಿ ಬಿಎಂಟಿಸಿ ಬಸ್‌ಗಳು ನಾಲ್ಕು ಸಾವಿರ ಟ್ರಿಪ್ ಸಂಚರಿಸುತ್ತಿವೆ. ಬಿಎಂಟಿಸಿ ವ್ಯವಸ್ಥಾಪಕ ನಿರ್ದೇಶಕ ಕೆ.ಬಿ.ಶಿವಕುಮಾರ್ ಮಾತನಾಡಿ, ಹೊರ ವರ್ತುಲ ರಸ್ತೆಯಲ್ಲಿ ಇರುವ ಕಂಪನಿಗಳಿಗೆ ವಿಶೇಷ ಬಸ್ ಸೇವೆ ಕಲ್ಪಿಸಲು ಬಿಎಂಟಿಸಿ ಸಂಪರ್ಕಿಸಬಹುದು ಎಂದು ಹೇಳಿದರು. ಕೋವಿಡ್‌ಗೂ ಮುನ್ನ ಐ.ಟಿ ಪಾರ್ಕ್‌ಗಳಿಗೆ ಮೀಸಲಾದ ಬಸ್ ವ್ಯವಸ್ಥೆಯನ್ನು ಮತ್ತೆ ಆರಂಭಿಸುವಂತೆಯೂ ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಜಿಬಿಎ ಆಯುಕ್ತ ಮಹೇಶ್ವರ ರಾವ್ ಮಾತನಾಡಿ, ಹೊರ ವರ್ತುಲ ರಸ್ತೆಯಲ್ಲಿ ಸುಧಾರಣೆ ತರಲು ಮತ್ತಷ್ಟು ಯೋಜನೆ ಜಾರಿಗೆ ತರಲಾಗುವುದು. ಮೂಲಸೌಕರ್ಯಗಳನ್ನೂ ಕಲ್ಪಿಸಲಾಗುವುದು ಎಂದು ಹೇಳಿದರು. ಇಬ್ಲೂರ್ ಜಂಕ್ಷನ್‌ನ ಸಂಪೂರ್ಣ ಮರು ವಿನ್ಯಾಸ ಮಾಡಲು ಚಿಂತಿಸಲಾಗಿದೆ. ಅಲ್ಲದೇ ಇಬ್ಲೂರ್ ಜಂಕ್ಷನ್‌ನಲ್ಲಿ ಹೆಚ್ಚುವರಿ ಮೇಲೇತುವೆ ಹಾಗೂ ಮಾರತಹಳ್ಳಿಯ ರೇನ್‌ಬೊ ಆಸ್ಪತ್ರೆ ಬಳಿ ಮತ್ತೊಂದು ಮೇಲೇತುವೆ ನಿರ್ಮಾಣಕ್ಕೂ ಚಿಂತಿಸಲಾಗಿದೆ ಎಂದು ಮಾಹಿತಿ ನೀಡಿದರು. ವಿವಿಧ ಐಟಿ ಕಂಪನಿಗಳ ಪ್ರತಿನಿಧಿಗಳು ತಮ್ಮ ಸಮಸ್ಯೆ ಗಳನ್ನು ಇದೇ ವೇಳೆ ಹೇಳಿಕೊಂಡರು.

## ಕಾಂಗ್ರೆಸ್‌ನಿಂದ ಎಸ್‌ಟಿಗಳಿಗೆ ಅನ್ಯಾಯ: ಬಿಜೆಪಿ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಸರ್ಕಾರ ಪರಿಶಿಷ್ಟ ಪಂಗಡಕ್ಕೆ ನೀಡಿದ್ದ ಮೀಸಲಾತಿ ಪ್ರಮಾಣ ಕಡಿಮೆ ಮಾಡಿ ಅನ್ಯಾಯ ಮಾಡಿದೆ ಎಂದು ಬಿಜೆಪಿ ನಾಯಕರು ಆರೋಪಿಸಿದರು. ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ ಮತ್ತು ಛಲವಾದಿ ನಾರಾಯಣಸ್ವಾಮಿ, ಬಿಜೆಪಿ ಸರ್ಕಾರ ಇದ್ದಾಗ ಪರಿಶಿಷ್ಟ ಪಂಗಡದ ಮೀಸಲಾತಿ ಪ್ರಮಾಣವನ್ನು ಶೇ 3ರಿಂದ ಶೇ. 7ಕ್ಕೆ ಹೆಚ್ಚಿಸಿತ್ತು. ಆದರೆ, ಕಾಂಗ್ರೆಸ್ ಸರ್ಕಾರ ಅದನ್ನು ರದ್ದು ಮಾಡಿ ದ್ರೋಹ ಎಸಗಿದೆ' ಎಂದು ದೂರಿದರು. ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿ ಆಗಿದ್ದಾಗ ಎಸ್‌ಸಿ ಮೀಸಲಾತಿಯನ್ನು ಶೇ 15ರಿಂದ ಶೇ 17ಕ್ಕೂ, ಎಸ್‌ಟಿ ಮೀಸಲಾತಿಯನ್ನು ಶೇ 3ರಿಂದ ಶೇ 7ಕ್ಕೂ ಹೆಚ್ಚಿಸಲಾಗಿತ್ತು. ಎಸ್‌ಟಿ ಸಮುದಾಯದ ನ್ಯಾಯಯುತ ಬೇಡಿಕೆಯನ್ನು ಈಡೇರಿಸಿದ್ದೆವು. ಮಾಧುಸ್ವಾಮಿ ವರದಿ, ಸದಾಶಿವ ಆಯೋಗದ ವರದಿ ಗಮನದಲ್ಲಿಟ್ಟುಕೊಂಡು ನಾವು ಮೀಸಲಾತಿ ಹೆಚ್ಚಳ ಮಾಡಿದ್ದೆವು ಎಂದು ಅಶೋಕ ವಿವರಿಸಿದರು.

ಮೀಸಲಾತಿ ಪ್ರಮಾಣ ಕಡಿಮೆ ಮಾಡಿದ್ದೇ ಸಿದ್ದರಾಮಯ್ಯ ಸರ್ಕಾರದ ಘನಂದಾರಿ ಕೆಲಸ. ಇದು ದಲಿತ ಪರ ನೀತಿಯೇ ಎಸ್‌ಟಿ ಸಮುದಾಯದ ಮೀಸಲಾತಿಯನ್ನು ಶೇ 7ರಿಂದ ಶೇ 3ಕ್ಕೆ ಇಳಿಸಲಾಗಿದೆ. ಎಸ್‌ಟಿ ಸಮುದಾಯ ಈಗ ನ್ಯಾಯ ಕೇಳುತ್ತಿದೆ. ಇದಕ್ಕೆ ನಿಮ್ಮ ಉತ್ತರವೇನು ಇವರು ನ್ಯಾಯ ಪಡೆಯಲು ಇನ್ನೆಷ್ಟು ವರ್ಷ ಹೋರಾಟ ಮಾಡಬೇಕು ಎಂದು ಪ್ರಶ್ನಿಸಿದರು.

ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಬಿಜೆಪಿ ಸರ್ಕಾರ ಇದ್ದಾಗ ಎಸ್‌ಸಿ,ಎಸ್‌ಟಿ ಸಮುದಾಯಗಳ ಬಹುದಿನಗಳ ಹೋರಾಟಕ್ಕೆ ತೆರೆ ಎಳೆಯಲು ಮೀಸಲಾತಿ ಪ್ರಮಾಣ ಹೆಚ್ಚಿಸಿತ್ತು.ಈ ಏರಿಕೆ ಬಳಿಕ ಸುಮಾರು ಮೂರುವರೆ ವರ್ಷಗಳ ಕಾಲ ಯಾವ ತೊಂದರೆ, ತೊಡಕು ಇಲ್ಲದೆ ಎಲ್ಲಾ ರೀತಿಯ ಸವಲತ್ತುಗಳು ಈ ಜನಾಂಗಕ್ಕೆ ಲಭಿಸಿವೆ' ಎಂದು ಹೇಳಿದರು. ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ರಾಜುಗೌಡ ನಾಯಕ್ ಮಾತನಾಡಿ, ಛತ್ತೀಸಗಢದಲ್ಲಿ ಎಸ್‌ಟಿಗೆ ಶೇ 32, ಎಸ್‌ಸಿಗೆ ಶೇ 10, ಒಬಿಸಿಗೆ ಶೇ 16 ಸೇರಿ ಒಟ್ಟು ಶೇ 58 ಮೀಸಲಾತಿ ನೀಡಲಾಗಿದೆ.

## ಕಾಲ್ತುಳಿತ: ಆರೋಪಿಗಳ ವಿದೇಶ ಪ್ರವಾಸಕ್ಕೆ ಹೈಕೋರ್ಟ್ ಅನುಮತಿ

• ಉದಯವಾಹಿನಿ, ಬೆಂಗಳೂರು




ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ಪ್ರಕರಣದ ಆರೋಪಿಗಳಾದ ಅಂದಿನ ಕಾರ್ಯಕ್ರಮ ಆಯೋಜಕ, 'ಡಿಎನ್‌ಎ ಎಂಟರ್‌ಟೈನ್‌ಮೆಂಟ್ ನೆಟ್‌ವರ್ಕ್ ಪ್ರೈವೇಟ್ ಲಿಮಿಟೆಡ್ ಕಂಪನಿ' ನಿರ್ದೇಶಕ ಸುನಿಲ್ ಮ್ಯಾಥ್ಯ ಮತ್ತು ಎಸ್.ಕಿರಣ್ ಕುಮಾರ್ ಅವರ ಹತ್ತು ದಿನಗಳ ಬ್ರೆಜಿಲ್ ಪ್ರವಾಸಕ್ಕೆ ಹೈಕೋರ್ಟ್ ಅನುಮತಿ ನೀಡಿದೆ. ಸುನಿಲ್ ಮ್ಯಾಥ್ಯ, ಕಿರಣ್ ಕುಮಾರ್ ಸಲ್ಲಿಸಿದ್ದ ರಿಟ್ ಅರ್ಜಿಯನ್ನು ನ್ಯಾಯಮೂರ್ತಿ ಎಸ್.ಆರ್.ಕೃಷ್ಣ ಕುಮಾರ್ ಅವರ ರಜಾಕಾಲದ ಏಕ ಸದಸ್ಯ ಪೀಠ ವಿಚಾರಣೆ ನಡೆಸಿ ಜಾಮೀನಿನ ಷರತ್ತು ಸಡಿಲಿಸಿ ಆದೇಶಿಸಿತು.

ಅರ್ಜಿದಾರರ ಪರ ಪದಾಂಕಿತ ಹಿರಿಯ ವಕೀಲ ಬಿ.ಕೆ.ಸಂಪತ್ ಕುಮಾರ್, ಈಗಾಗಲೇ ಪ್ರಕರಣದ ತನಿಖೆ ಮುಕ್ತಾಯಗೊಂಡಿದೆ. ವಿಚಾರಣಾ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿಸಲ್ಲಿಸಲಾಗಿದೆ. ಅರ್ಜಿದಾರರು 11 ತಿಂಗಳಿಂದ ಜಾಮೀನಿನ ಮೇಲೆ ಹೊರಗಿದ್ದಾರೆ. ನ್ಯಾಯಾಲಯ ವಿಧಿಸಿರುವ ಯಾವ ಷರತ್ತನ್ನೂ ಉಲ್ಲಂಘಿಸಿಲ್ಲ' ಎಂದು ನ್ಯಾಯಪೀಠಕ್ಕೆ ಮನವರಿಕೆ ಮಾಡಿದರು.

ಇದಕ್ಕೆ ಪ್ರಕರಣದ ವಿಶೇಷ ಪ್ರಾಸಿಕ್ಯೂಟರ್ ಬಿ.ಟಿ.ವೆಂಕಟೇಶ್, 'ದೋಷಾರೋಪ ಪಟ್ಟಿಯಲ್ಲಿ ಅರ್ಜಿದಾರರ ವಿರುದ್ಧ ಗಂಭೀರ ಆಪಾದನೆಗಳಿವೆ. ಈ ಹಂತದಲ್ಲಿ ಅರ್ಜಿ ದಾರರಿಗೆ ನೀಡಿರುವ ಜಾಮೀನು ಷರತ್ತುಗಳನ್ನು ಸಡಿಲಿಕೆ ಮಾಡುವುದು ಸರಿಯಲ್ಲ' ಎಂದು ಬಲವಾದ ಆಕ್ಷೇಪ ವ್ಯಕ್ತಪಡಿಸಿದರು. ವಾದ ಪ್ರತಿವಾದ ಆಲಿಸಿದ ನ್ಯಾಯ ಪೀಠ, ಅಂತಿಮವಾಗಿ ಅರ್ಜಿದಾರ ರಿಬ್ಬರೂ ನ್ಯಾಯಾಲಯಕ್ಕೆ ನೀಡಿದ ಮುಚ್ಚಳಿಕೆ ಹಾಗೂ ಪ್ರವಾಸದ ಪಟ್ಟಿಯನ್ನು ಪರಿಗಣಿಸಿ, 'ಜೂನ್ 1ರಿಂದ 10ರವರೆಗೆ ಬ್ರೆಜಿಲ್‌ನ ರಿಯೊ ಡಿ ಜನೈರೊಗೆ ಕರ್ತವ್ಯದ ನಿಮಿತ್ತ ಪ್ರವಾಸ ಕೈಗೊಳ್ಳಲು ಅನುಮತಿ ನೀಡಲಾಗಿದೆ' ಎಂದು ತಿಳಿಸಿ ವಿಚಾರಣೆಯನ್ನು ಜೂನ್ 12ಕ್ಕೆ ಮುಂದೂಡಿತು. ಸುನಿಲ್ ಮ್ಯಾಥ್ ಸೇರಿದಂತೆ ಪ್ರಕರಣದ ಇತರೆ ಆರೋಪಿಗಳಿಗೆ ಜಾಮೀನು ಮಂಜೂರು ಮಾಡುವಾಗ, 'ನ್ಯಾಯಾಲಯದ ಅನುಮತಿ ಪಡೆಯದೇ ವ್ಯಾಪ್ತಿ ಪ್ರದೇಶ ತೊರೆಯುವಂತಿಲ್ಲ' ಎಂಬ ಷರತ್ತು ವಿಧಿಸಲಾಗಿತ್ತು. ಷರತ್ತನ್ನು ಸಡಿಲಿಸುವಂತೆ ಸುನಿಲ್ ಮತ್ತು ಕಿರಣ್ ಕೋರಿದ್ದರು.

**ಪ್ರಕರಣವೇನು:** 2025ರ ಜೂನ್ 4ರಂದು ಐಪಿಎಲ್ ಟ್ರೋಫಿ ಫೈನಲ್ ಪಂದ್ಯದಲ್ಲಿ ಆರ್‌ಸಿಬಿ ತಂಡ ಜಯಗಳಿಸಿತ್ತು. ಮರುದಿನ (ಜೂ.5) ನಗರದಲ್ಲಿ ವಿಜಯೋತ್ಸವ ಹಮ್ಮಿಕೊಳ್ಳಲಾಗಿತ್ತು. ಲಕ್ಷಾಂತರ ಜನ ಚಿನ್ನಸ್ವಾಮಿ ಕ್ರೀಡಾಂಗಣದ ಮುಂದೆ ಜಮಾಯಿಸಿದ್ದರು. ಈ ವೇಳೆ ಕಾಲ್ತುಳಿತ ಉಂಟಾಗಿ 11 ಜನ ಮೃತಪಟ್ಟು, 56 ಜನ ಗಾಯಗೊಂಡಿದ್ದರು.

## ನೀರಿನ ಸಂಪರ್ಕ ಶುಲ್ಕ ಶೇ 50ರಷ್ಟು ತಗ್ಗಿಸಿ ಆಮ್ ಆದ್ಮಿ ಪಕ್ಷ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಜಲಮಂಡಳಿಯ ಕಾವೇರಿ 5ನೇ ಹಂತದ ಯೋಜನೆಯ ಅಡಿ ಸಂಪರ್ಕ ಪಡೆಯುವ ಬಳಕೆದಾರರ ಶುಲ್ಕವನ್ನು ಶೇ 50ರಷ್ಟು ತಗ್ಗಿಸಬೇಕು.

ಸಿಎಂ ಅವರು ಸಭೆ ಕರೆದು ಶೀಘ್ರ ತೀರ್ಮಾನ ಕೈಗೊಳ್ಳಬೇಕು ಎಂದು ಆಮ್ ಆದ್ಮಿ ಪಕ್ಷ ಆಗ್ರಹಿಸಿದೆ. ನಗರದ ಹೊರವಲಯದ 110 ಹಳ್ಳಿಗಳ 2.5 ಲಕ್ಷ ಮನೆಗಳಿಗೆ ಕುಡಿಯುವ ನೀರನ್ನು ಪೂರೈಸಲು ಜಾರಿಗೊಳಿಸಿರುವ ಯೋಜನೆ ನಾಗರಿಕರಿಗೆ ನೀರನ್ನು ತಲುಪಿಸುವಲ್ಲಿ ವಿಫಲವಾಗಿದೆ.

ಜಲ ಮಂಡಳಿ ವಿಧಿಸುತ್ತಿರುವ ಬಳಕೆದಾರರ ಶುಲ್ಕ ದುಬಾರಿ ಆಗಿದೆ ಎಂದು ಪಕ್ಷದ ರಾಜ್ಯ ಸಂಘಟನಾ ಕಾರ್ಯದರ್ಶಿ ಸತೀಶ್ ಕುಮಾರ್ ತಿಳಿಸಿದ್ದಾರೆ. ಯೋಜನೆಗೆ ಈಗಾಗಲೇ 5,500 ಕೋಟಿ ವೆಚ್ಚ ಮಾಡಲಾಗಿದೆ. ಯೋಜನೆ ಮುಗಿದು 2 ವರ್ಷ ಆಗುತ್ತಿದೆ. ಆದರೆ, ಸಾರ್ವಜನಿಕರು ಜಲಮಂಡಳಿ ಶುಲ್ಕ ಭರಿಸಲಾಗದೇ ಸಂಪರ್ಕ ತೆಗೆದುಕೊಳ್ಳುತ್ತಿಲ್ಲ. ಸರ್ಕಾರ ಕುಡಿಯುವ ನೀರಿನ ಯೋಜನೆಗೆ ವಿದೇಶದಲ್ಲಿ ಸಾಲ ಮಾಡಿದೆ. ಸಾಲವ ತೀರಿಸಬೇಕೆಂಬ ನೆಪದಲ್ಲಿ ನಾಗರಿಕರಿಂದ ಕೋಟ್ಯಂತರ ರೂಪಾಯಿ ಕೊಳ್ಳೆ ಹೊಡೆಯುವ ಹುನ್ನಾರದಲ್ಲಿ ತೊಡಗಿದೆ' ಎಂದು ಟೀಕಿಸಿದ್ದಾರೆ.

## ಮೇ.20 ರಿಂದ ಸಾರಿಗೆ ನೌಕರರ ಅನಿರ್ದಿಷ್ಟ ಮುಷ್ಕರ: 4 ನಿಗಮಗಳ ಬಸ್ ಸಂಚಾರ ಸ್ಥಗಿತ

• ಉದಯವಾಹಿನಿ, ಬೆಂಗಳೂರು

ಹೊರಮಾವು ಸಮೀಪದ ಸಾಯಿ ಬಡಾವಣೆ ಸವಿಸಾರಿಗೆ ನೌಕರರ ವೇತನ ಕುರಿತಾದ ಸರಕಾರದ ಆದೇಶವನ್ನು ಕರ್ನಾಟಕ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ತಿರಸ್ಕರಿಸಿದ್ದು, ಈಗಾಗಲೇ ಘೋಷಿಸಿರುವಂತೆ ಮೇ 20ರಿಂದ ಅನಿರ್ದಿಷ್ಟಾವಧಿ ಮುಷ್ಕರ ನಡೆಸುವುದಾಗಿ ಘೋಷಿಸಿದೆ.



ಸಾರಿಗೆ ನೌಕರರು ಶೇ. 25ರಷ್ಟು ವೇತನ ಹೆಚ್ಚಳಕ್ಕೆ ಬೇಡಿಕೆ ಇಟ್ಟಿದ್ದರು. ಆದರೆ, ಸರಕಾರ ಶೇ. 12.50ರಷ್ಟು ವೇತನ ಪರಿಷ್ಕರಣೆ ಮತ್ತು 38 ತಿಂಗಳ ಬದಲಿಗೆ 26 ತಿಂಗಳ ಹಿಂಬಾಕಿ ವೇತನ ಪಾವತಿಗೆ ಆದೇಶ ಹೊರಡಿಸಿದೆ. ರಾಜ್ಯ ಸರಕಾರದ ನಿರ್ಧಾರವನ್ನು ನೌಕರರು ಏಕಪಕ್ಷೀಯ ಎಂದು ತಿರಸ್ಕರಿಸಿದ್ದಾರೆ. ಮೇ. 20ರಂದು ಬೆಳಗ್ಗೆ 6ರಿಂದಲೇ ಬಿಎಂಟಿಸಿ, ಕೆಎಸ್‌ಆರ್‌ಟಿಸಿ, ವಾಯವ್ಯ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ನೌಕರರು ಬಸ್‌ಗಳನ್ನು ರಸ್ತೆಗಿಳಿಸದಿರಲು ನಿರ್ಧರಿಸಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಬಸ್ ಸಂಚಾರ ಸ್ಥಗಿತಗೊಳ್ಳುವ ಸಾಧ್ಯತೆಯಿದೆ. ಸರಕಾರದ ಉದ್ಧಟತನದ ವಿರುದ್ಧದ ಈ ಹೋರಾಟಕ್ಕೆ ಸಾರ್ವಜನಿಕರು ಕೈಜೋಡಿಸಬೇಕು ಮತ್ತು ಜನಸಾಮಾನ್ಯರೇ ಸರಕಾರಕ್ಕೆ ಛೀಮಾರಿ ಹಾಕಬೇಕು ಎಂದು ಸಮಿತಿಯು ಮನವಿ ಮಾಡಿದೆ.

ಇತ್ತೀಚೆಗೆ ರಾಜ್ಯ ಸರಕಾರವು ಸಾರಿಗೆ ನೌಕರರಿಗೆ ಶೇ.12.5ರಷ್ಟು ವೇತನ ಹೆಚ್ಚಳ ಮಾಡಿ ಆದೇಶ ಹೊರಡಿಸಿದೆ. ಆದರೆ, ಶೇ. 25ರಷ್ಟು ಹೆಚ್ಚಳಕ್ಕೆ ಬೇಡಿಕೆ ಮುಂದಿಟ್ಟಿದ್ದ ನೌಕರರು ಈ ಆದೇಶ ಒಪ್ಪಿಲ್ಲ. ಈ ಹಿಂದೆ ಶೇ. 15ರಷ್ಟು ಹೆಚ್ಚಳ ಮಾಡಿದ್ದ ಸರಕಾರ, ಈ ಬಾರಿ ಅದಕ್ಕಿಂತಲೂ ಕಡಿಮೆ ಮಾಡಿ, ನೌಕರರ ಮೇಲೆ ದೌರ್ಜನ್ಯವೆಸಗಿದೆ. ಇದಲ್ಲದೆ, 38 ತಿಂಗಳ ಬದಲಿಗೆ 26 ತಿಂಗಳ ಹಿಂಬಾಕಿ ವೇತನ ಪಾವತಿಸುವುದಾಗಿ ಆದೇಶಿಸಿರುವ ಸರಕಾರದ ವಿರುದ್ಧ ನೌಕರರು ಕಂಗಾಲಾಗಿದ್ದಾರೆ. ಏಕಪಕ್ಷೀಯ ನಿರ್ಧಾರವು ಕಾರ್ಮಿಕ ಸಂಘಟನೆಗಳ ಹತ್ತಿಕ್ಕುವ ಪ್ರಯತ್ನವಾಗಿದೆ. ಈ ಎಲ್ಲಾ ಕಾರಣಗಳಿಂದ ಮುಷ್ಕರ ಅನಿವಾರ್ಯವಾಗಿದೆ ಎಂದು ಕೆಎಸ್‌ಆರ್‌ಟಿಸಿ ಸ್ಟಾಫ್ ವರ್ಕರ್ಸ್ ಫೆಡರೇಷನ್ ಮುಖಂಡ ವಿಜಯ್ ಭಾಸ್ಕರ್ ಬುಧವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಕಳೆದ ಬಾರಿ ಶೇ. 15ರಷ್ಟು ಹೆಚ್ಚಳ ಮಾಡಿದ್ದ ಸರಕಾರ, ಈ ಬಾರಿ ಅದಕ್ಕಿಂತಲೂ ಕಡಿಮೆ ಮಾಡಿ ಅನ್ಯಾಯವೆಸಗಿದೆ. ಸರಕಾರಿ ನೌಕರರಿಗೆ ಶೇ. 27.5 ರಷ್ಟು ವೇತನ ಹೆಚ್ಚಳಕ್ಕೆ ಸಮ್ಮತಿ ಸೂಚಿಸಿರುವ ಸರಕಾರ, ಸಾರಿಗೆ ನೌಕರರನ್ನು ಕಡೆಗಣಿಸಿದೆ. ಈ ಬಾರಿ ನೌಕರರು ವಿಭಿನ್ನ ಹಾದಿಯಲ್ಲಿ ಹೋರಾಟಕ್ಕೆ ಮುಂದಾಗಿದ್ದಾರೆ. ನೌಕರರು ಕೆಲಸಕ್ಕೂ ಬರಲ್ಲ. ರಸ್ತೆಗೂ ಇಳಿಯದೇ ಮನೆಯಲ್ಲೇ ಉಳಿದು ಹೋರಾಟ ಮಾಡಲು ನೌಕರರು ನಿರ್ಧರಿಸಿದ್ದಾರೆ. ಈ ಬಾರಿ ಎಲ್ಲಾ 1.15 ಲಕ್ಷ ಸಿಬ್ಬಂದಿಯೂ ಮುಷ್ಕರದಲ್ಲಿ ಭಾಗಿಯಾಗಲಿದ್ದು, ನಾಲ್ಕು ಸಾರಿಗೆ ನಿಗಮಗಳ ಬಸ್ ಸಂಚಾರ ಸಂಪೂರ್ಣ ಸ್ಥಗಿತಗೊಳ್ಳಲಿದೆ, ಎಂದು ಅವರು ಮಾಹಿತಿ ನೀಡಿದರು.

# ನಿಲ್ದಾಣದ ಆವರಣದಲ್ಲಿ ದಿನದ 24 ಗಂಟೆಯೂ ಹದ್ದಿನ ಕಣ್ಣು

### ಕೆಎಸ್‌ಆರ್ ಬೆಂಗಳೂರು ರೈಲು ನಿಲ್ದಾಣದಲ್ಲಿ ಅತ್ಯಾಧುನಿಕ ವಿಡಿಯೋ ಕಣ್ಗಾವಲು ವ್ಯವಸ್ಥೆ

• ಉದಯವಾಹಿನಿ, ಬೆಂಗಳೂರು

ನಗರದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲ್ವೆ ನಿಲ್ದಾಣದಲ್ಲಿ ಅತ್ಯಾಧುನಿಕ ವಿಡಿಯೋ ಕಣ್ಗಾವಲು ವ್ಯವಸ್ಥೆ (ವಿಎಸ್‌ಎಸ್) ಕಾರ್ಯಾರಂಭ ಮಾಡಿದೆ. ಕೇಂದ್ರೀಕೃತ ಮೇಲ್ವಿಚಾರಣಾ ವ್ಯವಸ್ಥೆ ಇದಾಗಿದ್ದು, ಭದ್ರತೆ ಹೆಚ್ಚಿಸಿದೆ. 168 ಐಪಿ-ಆಧಾರಿತ ಹೈ-ಡೆಫಿನಿಷನ್ ಸಿಸಿಟಿವಿ ಕ್ಯಾಮೆರಾ ಇದಾಗಿದ್ದು, ರೈಲ್ವೆ ಭದ್ರತಾ ಮೂಲಸೌಕರ್ಯ ಮತ್ತು ಪ್ರಯಾಣಿಕರ ಸುರಕ್ಷತೆಗೆ ಈ ಸುಧಾರಣಾ ತಂತ್ರಜ್ಞಾನ ನಿಗಾ ವ್ಯವಸ್ಥೆ ಅಳಡಿಸಲಾಗಿದೆ. ಇದರಿಂದ ದಿನದ 24 ಗಂಟೆಯೂ ಪ್ರಯಾಣಿಕರ ಓಡಾಟ ಮತ್ತು ನಿಲ್ದಾಣದ ಚಟುವಟಿಕೆಗಳನ್ನು ಮೇಲ್ವಿಚಾರಣೆ ಮಾಡಲು ಅನುಕೂಲವಾಗಲಿದೆ.

**ವಿಡಿಯೋ ಅನಾಲಿಟಿಕ್ ವೈಶಿಷ್ಟ್ಯ:** ಈ ವ್ಯವಸ್ಥೆಯನ್ನು ಸುಧಾರಿತ ವಿಡಿಯೋ ಮ್ಯಾನೇಜ್‌ಮೆಂಟ್ ಸಿಸ್ಟಮ್ ಮತ್ತು ವಿಡಿಯೋ ಅನಾಲಿಟಿಕ್ಸ್ ವೈಶಿಷ್ಟ್ಯಗಳೊಂದಿಗೆ ಸಂಯೋಜಿಸಲಾಗಿದೆ ವಿಡಿಯೋ ಅನಾಲಿಟಿಕ್ ವೈಶಿಷ್ಟ್ಯವು ಭದ್ರತೆಗೆ ಸಂಬಂಧಿಸಿ ಅಸಹಜ ಚಟುವಟಿಕೆಗಳನ್ನು ಸ್ವಯಂಚಾಲಿತವಾಗಿ ಪತ್ತೆಹಚ್ಚಲು ಮತ್ತು ಎಚ್ಚರಿಕೆ ನೀಡಲು ಸಹಕಾರಿಯಾಗಿದೆ. ಇದರಿಂದಾಗಿ ಭದ್ರತಾ ಸಿಬ್ಬಂದಿಗೆ ಪೂರ್ವಭಾವಿ ಮೇಲ್ವಿಚಾರಣೆ ಮತ್ತು ತುರ್ತು ಸಂದರ್ಭದಲ್ಲಿ




ಉದಯವಾಹಿನಿ ಚಿತ್ರ

ಎಚ್ಚರಿಕೆ ನೀಡಲು ಸಹಕಾರಿ

ವೇಗವಾಗಿ ಸ್ಪಂದಿಸಲು ಸಾಧ್ಯವಾಗಲಿದೆ. ವಿಶೇಷವಾಗಿ ಕಣ್ಗಾವಲು ವ್ಯವಸ್ಥೆಯನ್ನು ಮುಖ ಗುರುತಿಸುವಿಕೆ ತಂತ್ರಾಂಶದೊಂದಿಗೆ (ಫೇಶಿಯಲ್ ರೆಕಗ್ನಿಶನ್ ಸಾಫ್ಟ್‌ವೇರ್- ಎಫ್‌ಆರ್‌ಎಸ್) ಸಂಯೋಜಿಸಲಾಗಿದೆ. ಇದರ ಭಾಗವಾಗಿ, ಅನುಮಾನಾಸ್ಪದ ವ್ಯಕ್ತಿಗಳ ಮೇಲ್ವಿಚಾರಣೆ, ಗುರುತಿಸುವಿಕೆಯಲ್ಲಿಭದ್ರತಾ ಏಜೆನ್ಸಿಗಳಿಗೆ ಬೆಂಬಲ ನೀಡಲು 1086 ಅಪರಾಧ ದಾಖಲೆಗಳನ್ನು ಒಳಗೊಂಡಿರುವ ಡೇಟಾಬೇಸ್ ಎಫ್‌ಆರ್‌ಎಸ್ ಪ್ಲಾಟ್ ಫಾರ್ಮ್‌ನಲ್ಲಿಅಳವಡಿಕೆ ಮಾಡಲಾಗಿದೆ ಎಂದು ನೈಋತ್ಯ ರೈಲ್ವೆ ಬೆಂಗಳೂರು ವಿಭಾಗ ತಿಳಿಸಿದೆ.

**ಕೇಂದ್ರೀಕೃತ ಮೇಲ್ವಿಚಾರಣಾ ವ್ಯವಸ್ಥೆ:** ರೈಲ್ವೆ ಸುರಕ್ಷತಾ ದಳದ ಸಿಬ್ಬಂದಿ ನೈಜ-ಸಮಯದ ಕಣ್ಗಾವಲು ನಡೆಸಲು ಮೇಲ್ವಿಚಾರಣಾ ಕೇಂದ್ರದಲ್ಲಿ ಆಧುನಿಕ 20 - 9 ಅಡಿ ಸ್ಕ್ರೀನ್ ಸ್ಥಾಪಿಸಲಾಗಿದೆ. ಈ ಕೇಂದ್ರೀಕೃತ ಮೇಲ್ವಿಚಾರಣಾ ವ್ಯವಸ್ಥೆಯು ನಿಲ್ದಾಣದ ಚಟುವಟಿಕೆಗಳ ದಕ್ಷ ಮೇಲ್ವಿಚಾರಣೆ ಮತ್ತು ಘಟನೆಗಳಿಗೆ ತ್ವರಿತವಾಗಿ ಸ್ಪಂದಿಸಲು ಅನುವು ಮಾಡಿಕೊಡುತ್ತದೆ.

**ಎಲ್ಲೆಲ್ಲಿ ವಿಡಿಯೋ ಕಣ್ಗಾವಲು**

- ನಿಲ್ದಾಣದ ಪ್ರವೇಶ ಮತ್ತು ನಿರ್ಗಮನ ದ್ವಾರ
- ಸಂಚರಿಸುವ ಪ್ರದೇಶ
- ಟಿಕೆಟ್ ಕೌಂಟರ್
- ಕಾನ್‌ಕೋರ್ಸ್, ಪ್ಲಾಟ್‌ಫಾರ್ಮ್9
- ಸುರಂಗ ಮಾರ್ಗ
- ಪಾದಚಾರಿ ಮೇಲ್ಸೇತುವೆ
- ಕಾಯುವ ಹಾಲ್

**ವಿಡಿಯೋ ಕಣ್ಗಾವಲು ವ್ಯವಸ್ಥೆ**

**ಬೆಂಗಳೂರಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲ್ವೆ ನಿಲ್ದಾಣದಲ್ಲಿ ಪ್ರಯಾಣಿಕರ ಸುರಕ್ಷತೆ ಮತ್ತು ಭದ್ರತೆಯನ್ನು ಹೆಚ್ಚಿಸುವ ಸಲುವಾಗಿ ಬುಧವಾರದಿಂದ ಅತ್ಯಾಧುನಿಕ 'ವಿಡಿಯೋ ಕಣ್ಗಾವಲು ವ್ಯವಸ್ಥೆ' ಜಾರಿಗೆ ಬಂದಿದೆ. ಕೇಂದ್ರಿಕೃತ ಮೇಲ್ವಿಚಾರಣೆಯಡಿ ಕಾರ್ಯನಿರ್ವಹಿಸುವ ಈ ವ್ಯವಸ್ಥೆಯು 168 ಹೈ-ಡೆಫಿನಿಷನ್ ಐಪಿ ಕ್ಯಾಮೆರಾಗಳನ್ನು ಒಳಗೊಂಡಿದ್ದು, ನಿಲ್ದಾಣದ ಆವರಣದಲ್ಲಿ ದಿನದ 24 ಗಂಟೆಯೂ ಹದ್ದಿನ ಕಣ್ಣಿಡಲಿದೆ.**

ಸಂಪೂರ್ಣ ವಿಎಸ್‌ಎಸ್ ನೆಟ್‌ವರ್ಕ್ ಮತ್ತು ಸಂಬಂಧಿತ ವ್ಯವಸ್ಥೆಗಳು ಎಲೆಕ್ಟ್ರಾನಿಕ್ಸ್, ಮಾಹಿತಿ ತಂತ್ರಜ್ಞಾನದ ಸಚಿವಾಲಯದ ಎಸ್‌ಟಿಕ್ಯುಸಿ ಬೆಂಗಳೂರು ಸಂಸ್ಥೆಯಿಂದ ತಪಾಸಣೆ ಮತ್ತು ಗುಣಮಟ್ಟ ಪ್ರಮಾಣೀಕರಣ ಪಡೆದಿದ್ದು, ಸಮಗ್ರ ಸೈಬರ್ ಭದ್ರತಾ ತಪಾಸಣೆಗೆ ಒಳಪಟ್ಟಿವೆ. ಶೂನ್ಯ ದುರ್ಬಲತೆ ವರದಿ ದೃಢೀಕರಣ ಹೊಂದಿದೆ ಎಂದು ವಿಭಾಗದ ಪ್ರಕಟಣೆ ತಿಳಿಸಿದೆ.

## ಮೋದಿ ಹೇಳಿದ್ದಾರೆ ಅಂತ ನಮ್ಮ ಹೆಣ್ಣುಮಕ್ಕಳು ಅರಿಸಿನದ ಕೊಂಬು ಧರಿಸಬೇಕೇ: ಉಗ್ರಪ್ಪ


ಉದಯವಾಹಿನಿ ಚಿತ್ರ

• ಉದಯವಾಹಿನಿ, ರಾಮನಗರ

ಪ್ರಧಾನಿ ಮೋದಿ ಹೇಳಿದ್ದಾರೆಂದು ನಮ್ಮ ಹೆಣ್ಣು ಮಕ್ಕಳು ಚಿನ್ನದ ತಾಳಿ ಬದಲು ಅರಿಸಿನದ ಕೊಂಬು ಧರಿಸಬೇಕೇ? ತನ್ನ ಆಡಳಿತ ವೈಫಲ್ಯ ಮುಚ್ಚಿಕೊಳ್ಳಲು ಮೋದಿ ದೇಶದ ಜನರಿಗೆ ಚಿನ್ನ ಖರೀದಿಸಬೇಡಿ ಎಂಬುದು ಸೇರಿದಂತೆ ಮಿತವ್ಯಯದ ಪಾಠ ಹೇಳುತ್ತಿದ್ದಾರೆ' ಎಂದು ಕಾಂಗ್ರೆಸ್ ಉಪಾಧ್ಯಕ್ಷ ವಿ.ಎಸ್. ಉಗ್ರಪ್ಪ ಕಿಡಿಕಾರಿದರು. 'ಮದುವೆ ಸೇರಿದಂತೆ ಇತರ ಸಮಾರಂಭಗಳಿಗೆ ಹೆಣ್ಣು ಮಕ್ಕಳು ಚಿನ್ನ ಖರೀದಿಸುವುದು ಸಾಮಾನ್ಯ. ಆದರೆ, ನಮ್ಮ ಪ್ರಧಾನಿಗೆ ಹೆಣ್ಣು ಮಕ್ಕಳ ಸ್ಥಿತಿಯೇ ಅರ್ಥವಾಗುವುದಿಲ್ಲ ಬಿಡಿ' ಎಂದು ನಗರದ ಚೈತನ್ಯ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ವ್ಯಂಗ್ಯವಾಡಿದರು. 'ಕೋವಿಡ್ ನಿರ್ವಹಣೆಯಲ್ಲೂ ವಿಫಲರಾಗಿದ್ದ ಮೋದಿ, ಆಗ ಜನರಿಗೆ ದೀಪ ಹಚ್ಚಲು ಮತ್ತು ತಟ್ಟೆ ಬಡಿಯಲು ಹೇಳಿ ನಗೆಪಾಟಲಿಗೆ ಈಡಾಗಿದ್ದರು. ಈಗ ಡಾಲರ್ ಎದುರು ರೂಪಾಯಿ ಮೌಲ್ಯ ಸಾರ್ವಕಾಲಿಕ ಕುಸಿತ ಕಂಡಿದೆ. ಚಿನ್ನ ಮತ್ತು ಇಂಧನ ದರ ಗಗನಕ್ಕೇರಿದೆ. 11 ವರ್ಷಕ್ಕೆ ಮುಂಚೆ 52 ಲಕ್ಷ ಕೋಟಿ ಇದ್ದ ದೇಶದ ಸಾಲ, ಮೋದಿ ಪ್ರಧಾನಿಯಾದ ಬಳಿಕ 216 ಲಕ್ಷ ಕೋಟಿಗೆ ಏರಿಕೆಯಾಗಿದೆ' ಎಂದು ಆಕ್ರೋಶ ವ್ಯಕ್ತಪಡಿಸಿದರು. ಇದ್ದಕ್ಕಿದ್ದಂತೆ ಪ್ರಧಾನಿ ಮಿತವ್ಯಯದ ಸಂದೇಶ ನೀಡಲು ಕಾರಣವೇನು? ಅದಕ್ಕೆ ಮುಂಚೆ ಸಂಸತ್ತಿನಲ್ಲಿ ಈ ಬಗ್ಗೆ ವಿಶೇಷ ಅಧಿವೇಶನ ಕರೆಯಬೇಕಿತ್ತು. ಸರ್ವಪಕ್ಷಗಳ ಜೊತೆ ಚರ್ಚಿಸಬೇಕಿತ್ತು. ಆರ್ಥಿಕ ತಜ್ಞರ ಜೊತೆ ಸಮಾಲೋಚನೆ ನಡೆಸಬೇಕಿತ್ತು. ಅದ್ಯಾವುದನ್ನೂ ಮಾಡದ ಪ್ರಧಾನಿ, ನಾಗಪುರದ ಆರ್‌ಎಸ್‌ಎಸ್ ಕಚೇರಿಯಿಂದ ಬಂದ ಸೂಚನೆಯನ್ನು ಯಥಾ ಹೇಳಿದರೆ ಹೇಗೆ? ಎಂದು ಕುಹುಕವಾಡಿದರು.

ತೀವ್ರ ಬಿಸಿಲು, ಮುಂಗಾರು ಪೂರ್ವ ಮಳೆಯ ವೈಫಲ್ಯದಿಂದಾಗಿ ಕಾವೇರಿ ನದಿಯ ಉಪನದಿಯಾದ ಶಿಂಷಾ ಈಗ ಸಂಪೂರ್ಣವಾಗಿ ಬತ್ತಿ ಹೋಗಿದೆ. ವಿಶ್ವೇಶ್ವರಯ್ಯ ನಾಲೆಯ ಸೋರಿಕೆ ನೀರು ನಿಂತಿರುವುದು ಈ ಪರಿಸ್ಥಿತಿಯನ್ನು ಮತ್ತಷ್ಟು ಬಿಗಡಾಯಿಸಿದ್ದು, ನದಿ ಪಾತ್ರದ ಕುಣಿಗಲ್, ಮದ್ದೂರು, ಮಳವಳ್ಳಿ ಭಾಗಗಳಲ್ಲಿ ಅಂತರ್ಜಲ ಮಟ್ಟ ಕುಸಿದು ತೀವ್ರ ಜಲಕ್ಷಾಮದ ಭೀತಿ ಎದುರಾಗಿದೆ.

# ಬಿಸಿಲಿಗೆ ಬತ್ತಿದ ಶಿಂಷಾ ಒಡಲು

● ಮಳೆಯಾಗದಿದ್ದರೆ ಜಲಕ್ಷಾಮ ಭೀತಿ ● ಶಿಂಷಾ ನದಿಯಲ್ಲಿ ನೀರಿನ ಕೊರತೆ

• ಉದಯವಾಹಿನಿ, ಮದ್ದೂರು

ಬಿರು ಬೇಸಿಗೆಗೆ ಕಾವೇರಿ ನದಿಯ ಉಪನದಿ ಶಿಂಷಾದಲ್ಲಿ ನೀರಿನ ಹರಿವು ಸಂಪೂರ್ಣ ಕಡಿಮೆಯಾಗಿದ್ದು, ಮಳೆಯಾಗದಿದ್ದರೆ ಜಲಕ್ಷಾಮ ಭೀತಿ ಎದುರಾಗಿವೆ.

**ಅಂತರ್ಜಲ ಮಟ್ಟವೂ ಕುಸಿತ**

ವಿಶ್ವೇಶ್ವರಯ್ಯ ನಾಲೆಯ ಸೋರಿಕೆ ನೀರು ಸ್ಥಗಿತವಾಗಿರುವುದು ಹಾಗೂ ಪೂರ್ವ ಮುಂಗಾರು ಮಳೆಯ ವೈಫಲ್ಯದಿಂದ ನದಿಯಲ್ಲಿ ನೀರಿನ ಹರಿವು ಸಂಪೂರ್ಣ ಕಡಿಮೆಯಾಗಿದೆ. ಇದರಿಂದ ನದಿ ಇಕ್ಕೆಲಗಳ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟವೂ ಕುಸಿಯುತ್ತಿದೆ.

ತುಮಕೂರು ಜಿಲ್ಲೆ ಕುಣಿಗಲ್ ತಾಲ್ಲೂಕು ದೇವರಾಯನದುರ್ಗ ಪ್ರದೇಶದಲ್ಲಿ ಹುಟ್ಟಿ ಕುಣಿಗಲ್, ಮದ್ದೂರು, ಮಳವಳ್ಳಿ ತಾಲ್ಲೂಕು ವ್ಯಾಪ್ತಿಯಲ್ಲಿ ಹರಿಯುವ ಶಿಂಷಾ ನದಿಯು 221 ಕಿ.ಮೀ. ಉದ್ದವಿದೆ. ಮಳೆಗಾಲದಲ್ಲಿ ಉಕ್ಕಿ ಹರಿಯುವ ನದಿಯು, ಕೆಲವೊಮ್ಮೆ ಪ್ರವಾಹ ಪರಿಸ್ಥಿತಿಯ ಆತಂಕವನ್ನೂ ತಂದೊಡ್ಡುತ್ತದೆ. ಆದರೆ ಈ ಬಾರಿ ರಣ ಬಿಸಿಲಿಗೆ ನದಿಯಲ್ಲಿ ನೀರು ಸಂಪೂರ್ಣ ಬರಿದಾಗಿದೆ.

**ನದಿ ಬಹುತೇಕ ಬತ್ತಿದೆ:** ಮೇ ಮೊದಲ ವಾರದಲ್ಲೇ ನದಿ ಬಹುತೇಕ ಬತ್ತಿ ಹೋಗಿದೆ. ನದಿಯಲ್ಲಿ ನೀರಿಲ್ಲದೆ ಜಲಚರಗಳು ಸಹ ಕಾಣೆಯಾಗಿದ್ದು, ಕೊಕ್ಕರೆ ಬೆಳ್ಳೂರಿಗೆ ದೇಶ-ವಿದೇಶಗಳಿಂದ ಬಂದಿರುವ ಬಾನಾಡಿಗಳು ಆಹಾರ ಇಲ್ಲದೆ(ಸಣ್ಣಪುಟ್ಟ ಮೀನು, ಇತರ ಜಲಚರ) ಪರಿತಪಿಸುತ್ತಿವೆ.

ವಿಶ್ವವಿಖ್ಯಾತ ಕೊಕ್ಕರೆ ಬೆಳ್ಳೂರು ಪಕ್ಷಿಧಾಮಕ್ಕೆ ಸಂತಾನೋತ್ಪತ್ತಿಗಾಗಿ ನೆರೆಯ ಬರ್ಮಾ, ಶ್ರೀಲಂಕಾ, ಪಾಕಿಸ್ತಾನ ಹಾಗೂ ದೇಶದ ನಾನಾ ಭಾಗದಿಂದ ಆಗಮಿಸುವ ವಿವಿಧ ಪ್ರಭೇದದ ಪಕ್ಷಿ ಸಂಕುಲಕ್ಕೂ ಶಿಂಷಾ ನದಿಯ ನೀರಿನ ಕೊರತೆ ಬಿಸಿ ತಟ್ಟಿದೆ. ಮತ್ತೊಂದೆಡೆ ಮದ್ದೂರು ನಗರದ ಕಲುಷಿತ ನೀರು ನೇರವಾಗಿ ಶಿಂಷಾ ನದಿಗೆ ಸೇರುತ್ತಿರುವುದರಿಂದ ಜಲಚರಗಳು, ಪಕ್ಷಿಗಳಿಗೆ ಕಂಟಕವಾಗಿದೆ.

**ಬರಿದಾಗಿವೆ ಕೆರೆ-ಕಟ್ಟೆಗಳು**

ಮದ್ದೂರು ತಾಲ್ಲೂಕು ವ್ಯಾಪ್ತಿಯಲ್ಲಿ ಸುಮಾರು 40-50 ಕಿ.ಮೀ. ದೂರದವರೆಗೆ ಹರಿಯುವ ಶಿಂಷಾ ನದಿಯು, ಮಳವಳ್ಳಿ ತಾಲ್ಲೂಕಿನ ಬೆಂಕಿ ಫಾಲ್ಸ್ ಮೂಲಕ ಕಾವೇರಿ ನದಿಯೊಡಲು ಸೇರಲಿದೆ. ನದಿ ಹರಿಯುವ 221 ಕಿ.ಮೀ. ವ್ಯಾಪ್ತಿಯಲ್ಲಿ ಚೆಕ್‌ಡ್ಯಾಂಗಳು, ಏತನೀರಾವರಿ, ಧಾರ್ಮಿಕ ಪುಣ್ಯಕ್ಷೇತ್ರಗಳು, ಪಕ್ಷಿಧಾಮ ಇವೆ. ಪ್ರಾಕೃತಿಕ ಸೆಲೆಯಾಗಿರುವ ಶಿಂಷಾ ನದಿ ನೀರು ನೂರಾರು ಕೆರೆ-ಕಟ್ಟೆಗಳ ಜಲಮೂಲವೂ ಆಗಿದೆ. ಆದರೆ, ಮಳೆ ವೈಫಲ್ಯದ ಹಿನ್ನೆಲೆಯಲ್ಲಿ ಮೇಲ್ಕಂಡ ಎಲ್ಲಾ ಪ್ರಕಾರಗಳಿಗೂ ನೀರಿನ ಕೊರತೆಯಾಗಿದೆ. ಶಿಂಷಾ ನದಿಗೆ ಮಳೆಯೇ ಮೂಲಾಧಾರವಾಗಿದೆ. ಆದರೆ ಮಳೆ ಇಲ್ಲದ ಕಾರಣ ಉಗಮ ಸ್ಥಾನ ತುಮಕೂರು ಜಿಲ್ಲೆಯ ಕುಣಿಗಲ್ ತಾಲ್ಲೂಕು, ಯಡಿಯೂರು, ಹುಲಿಯೂರು ದುರ್ಗಾ, ಮದ್ದೂರು ತಾಲ್ಲೂಕಿನ ಕೊಪ್ಪ, ಕೌಡ್ಲೆವ್ಯಾಪ್ತಿಯ ಕೆರೆ-ಕಟ್ಟೆಗಳು ಬರಿದಾಗಿವೆ.


ಉದಯವಾಹಿನಿ ಚಿತ್ರ

## ಮಿನಿ ನ್ಯೂಸ್

### ಗಡಿನಾಡು ರಕ್ಷಣಾ ಸೇನೆ ಸಂಘಟನೆ ಪದಾಧಿಕಾರಿಗಳ ನೇಮಕ


ಉದಯವಾಹಿನಿ ಚಿತ್ರ


• ಉದಯವಾಹಿನಿ, ಗುಂಡ್ಲುಪೇಟೆ

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಗಡಿನಾಡು ರಕ್ಷಣಾ ಸೇನೆ ಸಂಘಟನೆಯ ನೂತನ ಪದಾಧಿಕಾರಿಗಳನ್ನ ಆಯ್ಕೆ ಮಾಡುವ ಮೂಲಕ ನೇಮಕಾತಿ ಪತ್ರ ವಿತರಣೆ ಮಾಡಲಾಯಿತು. ರಾಜ್ಯ ಗೌರವಾದ್ಯಕ್ಷರಾಗಿ ಆರ್. ಡಿ.ಉಲ್ಲಾಸ್, ರಾಜ್ಯ ಯುವಘಟಕ ಅದ್ಯಕ್ಷರಾಗಿ ಇಲಿಯಾಸ್ ಅಹಮದ್, ರಾಜ್ಯ ಉಪಾಧ್ಯಕ್ಷರಾಗಿ ಅಲೀಮ್ ಪಾಷಾ, ಕಾರ್ಯದರ್ಶಿ ಎಚ್.ರಾಜು, ಮುತ್ತಣ್ಣ, ಜಿಲ್ಲಾಧ್ಯಕ್ಷ ಅಬ್ದುಲ್ ರಶೀದ್, ತಾಲ್ಲೂಕು ಅದ್ಯಕ್ಷ ವಿಜಯ್ ಅವರಿಗೆ ಸಂಘಟನೆ ಸಂಸ್ಥಾಪಕ ಅಧ್ಯಕ್ಷ ಮುನೀರ್ ಪಾಷಾ ನೇಮಕಾತಿ ಪತ್ರ ವಿತರಣೆ ಮಾಡಿದರು.

ನಾಡುನುಡಿ ಜಲ ಸಂರಕ್ಷಣೆಗಾಗಿ ಸಂಘಟನೆಯನ್ನ ಸ್ಥಾಪನೆ ಮಾಡಲಾಗಿದೆ, ಕನ್ನಡತನ, ನಾಡಿನ ರಕ್ಷಣೆಗಾಗಿ ಎಲ್ಲರೂ ಸದಾ ಕಾಲ ಸಿದ್ಧರಿರಬೇಕು ಎಂದು ತಿಳಿಸಿದರು. ಸಾಹಿತಿ ಕಾಳಿಂಗಸ್ವಾಮಿ ಸಿದ್ದಾರ್ಥ ಮಾತನಾಡಿ ಕನ್ನಡ ನೆಲಜಲ ಭಾಷೆ ಉಳಿವಿನಲ್ಲಿ ಸಂಘಟನೆಗಳ ಪಾತ್ರ ಬಹುಮುಖ್ಯವಾಗಿದೆ ಹಾಗಾಗಿ ಸ್ಥಾಪಿತವಾದ ಸಂಘವನ್ನ ಉತ್ತಮವಾದ ರೀತಿಯಲ್ಲಿ ನಿರ್ವಹಿಸಿಕೊಂಡು ಹೋದರೆ ನೊಂದವರ ದನಿಯಾಗಿ ನಿಲ್ಲಲು ಸಾಧ್ಯ ಎಂದು ಸಲಹೆ ನೀಡಿದರು. ಈ ಸಂಧರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಉಪಾಧ್ಯಕ್ಷ ರಾಜೇಂದ್ರ ನಾಯಕ್, ತಾಲ್ಲೂಕು ಅದ್ಯಕ್ಷ ರಮೇಶ್ ನಾಯಕ್, ಎಂ.ಸಾಧಿಕ್, ನವೀನ್ ಕುಮಾರ್ ಸೇರಿದಂತೆ ಹಲವರು ಹಾಜರಿದ್ದರು.

## ಜಿಬಿಐಟಿ ಯೋಜನೆ ತ್ವರಿತ ಅನುಷ್ಠಾನಕ್ಕೆ ಒತ್ತಾಯ

• ಉದಯವಾಹಿನಿ, ರಾಮನಗರ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಬಿಡದಿಯಲ್ಲಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ (ಜಿಬಿಡಿಎ) ಅನುಷ್ಠಾನಗೊಳ್ಳುತ್ತಿರುವ ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ (ಜಿಬಿಐಟಿ) ಯೋಜನೆಗೆ ಸಂಬಂಧಿಸಿದಂತೆ ಭೂ ಸ್ವಾಧೀನ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಿ ಯೋಜನೆ ಅನುಷ್ಠಾನಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಯೋಜನೆ ಪರವಾಗಿರುವ ರೈತರ ನಿಯೋಗವು ಜಿಲ್ಲಾಧಿಕಾರಿಯನ್ನು ಒತ್ತಾಯಿಸಿದೆ.

ಯೋಜನಾ ಪ್ರದೇಶದ ವ್ಯಾಪ್ತಿಯ ಬೈರಮಂಗಲ ಮತ್ತು ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಒಂಬತ್ತು ಗ್ರಾಮಗಳ ರೈತರ ನಿಯೋಗ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿತು. ನಮ್ಮ ಭಾಗದ ಅಭಿವೃದ್ಧಿಗೆ ಪೂರಕವಾಗಿರುವ ಯೋಜನೆ ವಿರುದ್ಧ ಅಪಪ್ರಚಾರ ನಡೆಯುತ್ತಿದೆ. ಹಾಗಾಗಿ, ಗೊಂದಲಕ್ಕೆ ಅವಕಾಶ ನೀಡದೆ ಯೋಜನೆ ಅನುಷ್ಠಾನಗೊಳಿಸಬೇಕು' ಎಂದು ನಿಯೋಗ ಆಗ್ರಹಿಸಿತು.

ಬಳಿಕ ಸುದ್ದಿಗಾರರ ಜೊತೆ ಮಾತನಾಡಿದ ನಿಯೋಗದ ಎಚ್.ಸಿ. ರಾಜಣ್ಣ, ಎರಡು ದಶಕದಿಂದ ನನೆಗುದಿಗೆ ಬಿದ್ದಿದ್ದ ಯೋಜನೆಯಿಂದಾಗಿ ಇಡೀ ಪ್ರದೇಶವು ಕೆಂಪು ವಲಯಕ್ಕೆ ಸೇರಿ, ಅಭಿವೃದ್ಧಿಯಿಂದ ವಂಚಿತವಾಗಿದೆ. ಮುಂದೆಯೂ ಅಂತಹದ್ದೇ ಸ್ಥಿತಿ ಮುಂದುವರಿಯುವುದು ಬೇಡ. ಜಿಬಿಐಟಿ ಯೋಜನೆಯಿಂದಾಗಿ ಈ ಭಾಗದ ಅಭಿವೃದ್ಧಿಯ ಬಾಗಿಲು ತೆರೆಯಲಿದೆ ಎಂದು ಹೇಳಿದರು. ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಇನ್ನು ವಿಳಂಬ ಮಾಡುವುದು ಸರಿಯಲ್ಲ. ಯೋಜನೆಗೆ ಬಹುತೇಕ ರೈತರು ಒಪ್ಪಿಗೆ ನೀಡಿದ್ದಾರೆ. ಹಾಗಾಗಿ, ಅಂತಿಮ ಅಧಿಸೂಚನೆಯನ್ನು ಹೊರಡಿಸಬೇಕು. ಭೂ ಸ್ವಾಧೀನ ಪ್ರಕ್ರಿಯೆಗಳನ್ನು ಬೇಗನೆ ಮುಗಿಸಬೇಕು. ಜಮೀನು ನೀಡುವವರಿಗೆ ಸೂಕ್ತ ಪರಿಹಾರ ಮತ್ತು ಅಭಿವೃದ್ಧಿಪಡಿಸಿದ ನಿವೇಶನಗಳನ್ನು ಹಂಚಬೇಕು. ತಡ ಮಾಡಿದರೆ ನಾವೂ ಸಹ ಹೋರಾಟ ಮಾಡಬೇಕಾಗುತ್ತದೆ ಎಂದರು.

ಕೈಗಾರಿಕಾ ಪ್ರದೇಶದ ಅಕ್ಕಪಕ್ಕವಿದ್ದರೂ ನಮ್ಮ ಗ್ರಾಮಗಳು ಎರಡು ದಶಕಗಳಿಂದ ಅಭಿವೃದ್ಧಿ ಕಂಡಿಲ್ಲ. ಎರಡೂ ಪಂಚಾಯಿತಿ ವ್ಯಾಪ್ತಿಯಲ್ಲಿ ಕನಿಷ್ಠ ಒಂದು ಪೆಟ್ರೋಲ್ ಬಂಕ್ ಇಲ್ಲ. ಬೆಂಗಳೂರು ಪಕ್ಕವಿದ್ದರೂ ಕನಿಷ್ಠ ಮೂಲಸೌಕರ್ಯಗಳಿಲ್ಲದೆ ಬದುಕುತ್ತಿದೇನೆ. ಜಿಬಿಐಟಿ ನಿರ್ಮಾಣದಿಂದ ಎರಡು ದಶಕಗಳ ವನವಾಸಕ್ಕೆ ಮುಕ್ತಿ ಸಿಗಲಿದೆ ಎಂದು ನಿಯೋಗದ ಸದಸ್ಯ ಎಚ್. ಎಸ್. ಸಿದ್ದರಾಜು ಅಭಿಪ್ರಾಯಪಟ್ಟರು.

ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಾವೆಲ್ಲರೂ ಅಗತ್ಯ ಸಹಕಾರ ನೀಡುತ್ತೇವೆ. ಹಾಗಾಗಿ, ಭೂ ಸ್ವಾಧೀನ ಪ್ರಕ್ರಿಯೆ ಮುಗಿಸಬೇಕು. ಪರಿಹಾರ ಪಾವತಿ ಅಥವಾ ನಿವೇಶನ ಹಂಚಿಕೆಯಲ್ಲಿ ಮಧ್ಯವರ್ತಿಗಳಿಗೆ ಅವಕಾಶವಿಲ್ಲದೆ, ಎಲ್ಲವೂ ಪಾರದರ್ಶಕವಾಗಿ ನಡೆಯಬೇಕು. ಪ್ರತಿ ಹಂತದಲ್ಲಿ ಭೂ ಮಾಲೀಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು ಎಂದು ಮನವಿ ಮಾಡಿದರು.

## 12 ನೇ ತರಗತಿಯವರೆಗೆ ಧಾರ್ಮಿಕ ಸಂಕೇತಗಳನ್ನು ವಿದ್ಯಾರ್ಥಿಗಳು ಧರಿಸಬಹುದು: ಮುಖ್ಯಮಂತ್ರಿ

• ಉದಯವಾಹಿನಿ, ಮೈಸೂರು

ಪ್ರಾಥಮಿಕ ತರಗತಿಯಿಂದ 12ನೇ ತರಗತಿಯವರೆಗೆ ಜನಿವಾರ, ಹಿಜಾಬ್, ಉಡುದಾರ, ರುದ್ರಾಕ್ಷಿ ಹಾಕಿಕೊಳ್ಳಬಹುದು.

ಈಗಾಗಲೇ ಸಾಂಪ್ರದಾಯಿಕವಾಗಿ ಅನುಸರಿಸುವ ಧಾರ್ಮಿಕ ಸಂಕೇತಗಳನ್ನು ಧರಿಸಬಹುದು. ಹೊಸದಾಗಿ ಮಾಡುವಂತಿಲ್ಲ ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಿಳಿಸಿದರು. ಅವರು ಗುರುವಾರ ಮೈಸೂರಿನ ತಮ್ಮ ನಿವಾಸದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಧಾರ್ಮಿಕ ಸಂಕೇತಗಳ ವಿಚಾರದಲ್ಲಿ ಬಿಜೆಪಿ ಎತ್ತಿರುವ ತಕರಾರಿಗೆ ಸಂಬಂಧಿಸಿದಂತೆ ಸುದ್ದಿಗಾರರ ಪ್ರಶ್ನೆಗೆ ಮುಖ್ಯಮಂತ್ರಿಗಳು ಮೇಲಿನಂತೆ ಪ್ರತಿಕ್ರಿಯೆ ನೀಡಿದರು.

**ಕೇಂದ್ರ ಸರ್ಕಾರ ನೀಟ್ ಪರೀಕ್ಷೆಯನ್ನು ಸರಿಯಾಗಿ ನಿರ್ವಹಿಸಿಲ್ಲ**

**ನೀಟ್ ಪ್ರಶ್ನೆ ಪತ್ರಿಕೆ ಉತ್ತರ ಪತ್ರಿಕೆ ಸೋರಿಕೆಯಾಗಿರುವ ಬಗ್ಗೆ ಮಾತನಾಡಿ ನೀಟ್ ಕೇಂದ್ರ ಸರ್ಕಾರ ಪರೀಕ್ಷೆಯನ್ನು ಸರಿಯಾಗಿ ನಿರ್ವಹಣೆ ಮಾಡಿಲ್ಲ. ಇದರಿಂದ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದೆ ಎಂದರು.**

**ಪ್ರಧಾನಿಗಳ ಹೇಳಿಕೆ ಸರಿಯಿಲ್ಲ:** ಪ್ರಧಾನಿ ನರೇಂದ್ರ ಮೋದಿಯವರು ಡೀಸಲ್ ಬಳಕೆ ಕಡಿತಗೊಳಿಸಲು ತಮ್ಮ ಬೆಂಗಾವಲನ್ನು ಕಡಿತಗೊಳಿಸಿದ್ದು ಈ ಬಗ್ಗೆ ಕರ್ನಾಟಕದಲ್ಲಿಯೂ ಮಾಡಬಹುದೇ ಎಂಬ ಪ್ರಶ್ನೆಗೆ ಉತ್ತರಿಸಿದ ಸಿಎಂ, ಅದು ಕೇವಲ ತಾತ್ಕಾಲಿಕ ಕ್ರಮವಷ್ಟೇ. ಪ್ರಧಾನಿಗಳು ಹೇಳಿರುವುದು ಸರಿಯಾದ ಕ್ರಮವಲ್ಲ. ಅದಕ್ಕೆ ಬದಲು ಬೇರೆ ದೇಶಗಳೊಂದಿಗೆ ಮಾತನಾಡಿ ಒಮ್ಮತಕ್ಕೆ ಬರುವುದು ಸೂಕ್ತ ಎಂದರು.



**ಸಂಪುಟ ಪುನರ್ ರಚನೆ ಮಾಡುವ ಉದ್ದೇಶವಿದೆ:** ಸಂಪುಟ ಪುನರ್ ರಚನೆಗೆ ಸಂಬಂಧಿಸಿದಂತೆ ದೆಹಲಿಗೆ ಪ್ರಯಾಣ ಬೆಳಸುತ್ತೀರಾ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿ ಸಂಪುಟ ಪುನರ್ ರಚನೆ ಮಾಡುವ ಉದ್ದೇಶವಿದೆ ಎಂದರು.

### ಎಲ್ಲದರಲ್ಲೂ ರಾಜಕೀಯ; ಕಾಂಗ್ರೆಸ್‌ಗೆ ನಾಚಿಕೆಯಾಗಬೇಕು: ಸಂಸದ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಕೇಂದ್ರದಲ್ಲಿ ಯುಪಿಎ ಅಧಿಕಾರದಲ್ಲಿ ಇದ್ದ ವೇಳೆ ಎಷ್ಟು ಬಾರಿ ಪ್ರಶ್ನೆ ಪತ್ರಿಕೆ ಸೋರಿಕೆ ಆಗಿದೆ. ರಾಜ್ಯದಲ್ಲಿ ಕೆಪಿಎಸ್‌ಸಿ ಪ್ರಶ್ನೆ ಪತ್ರಿಕೆ ಸೋರಿಕೆ ಆಗಿಲ್ಲವೇ? ಎಲ್ಲದರಲ್ಲಿಯೂ ರಾಜಕೀಯ ಹುಡುಕುವ ಕಾಂಗ್ರೆಸ್‌ನವರಿಗೆ ನಾಚಿಕೆ ಆಗಬೇಕು ಎಂದು ಸಂಸದ ಡಾ.ಕೆ. ಸುಧಾಕರ್ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯುಪಿಎ ಸರ್ಕಾರದ ಅವಧಿಯಲ್ಲಿ ಎಷ್ಟು ಬಾರಿ ಪ್ರಶ್ನೆ ಪತ್ರಿಕೆ ಸೋರಿಕೆ ಆಗಿದೆ. ಕಾಂಗ್ರೆಸ್‌ನವರು ಕುರುಡರಿದ್ದಾರಾ. ಇದೇ ಮೊದಲ ಬಾರಿಗೆ ಪ್ರಶ್ನೆ ಪತ್ರಿಕೆ ಸೋರಿಕೆ ಆಗಿರುವುದೇ? ಈ ವಿಚಾರದಲ್ಲಿ ರಾಜಕಾರಣ ಮಾಡಬಾರದು ಎಂದರು. ನಮ್ಮ ಕಚೇರಿ, ಮನೆಗಳ ಎದುರು ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟಿಸಿದ್ದಾರೆ. ಇವರಿಗೆ ನಾಚಿಕೆ ಮಾನ ಮರ್ಯಾದೆ ಇದೆಯಾ. ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಆಗಿರುವುದು ವಿಷಾದದ ವಿಚಾರ. ಕೇಂದ್ರ ಸರ್ಕಾರ ತ್ವರಿತವಾಗಿ ಸಿಬಿಐ ತನಿಖೆಗೆ ಆದೇಶಿಸಿದೆ. ಈ ವಿಚಾರದಲ್ಲಿ ಸರ್ಕಾರವನ್ನು ದೂರುವುದು ಸಲ್ಲದು. ಆತಂಕದಲ್ಲಿರುವ ಮಕ್ಕಳ ಜೊತೆ ನೈತಿಕವಾಗಿ ನಿಲ್ಲಬೇಕು ಎಂದು ಹೇಳಿದರು. ಕೋವಿಡ್ ಸಮಯದಲ್ಲಿ ನರೇಂದ್ರ ಮೋದಿ ಅವರು ದೇಶಕ್ಕೆ ಮಾರ್ಗದರ್ಶನ ನೀಡಿದ್ದರು. ಈಗ ಯುದ್ಧದ ಪರಿಸ್ಥಿತಿಯಲ್ಲಿ ಮಾರ್ಗದರ್ಶನ ನೀಡುತ್ತಿದ್ದಾರೆ. 8 ಲಕ್ಷ ಕೋಟಿ ಕಚ್ಚಾತೈಲ ಆಮದು ಮಾಡಿಕೊಳ್ಳುತ್ತಿದ್ದೇವೆ. ಹೀಗಾಗಿ ಕಡಿಮೆ ಬಳಕೆ ಮಾಡಿ ಎನ್ನುವುದು ದೊಡ್ಡ ತಪ್ಪೇ ಎಂದರು. ಅತಿ ಹೆಚ್ಚುವರಿ ಬಂಗಾರ ಖರೀದಿಸುವ ಎರಡನೇ ದೇಶ ಭಾರತ. 1 ವರ್ಷದಲ್ಲಿ ನಾಲ್ಕೂವರೆ ಕೋಟಿ ಜನರು ವಿದೇಶ ಪ್ರವಾಸ ಹೋಗಿದ್ದಾರೆ. ಹೀಗಾಗಿ ದೇಶ ಉಳಿಯಲಿ ಎಂದು ಮೋದಿ ಹೇಳಿದ್ದಾರೆ ಎಂದರು.

## ಕಾಡಾನೆ ದಾಳಿಗೆ ಬಾಳೆ ಫಸಲು ನಾಶ : ಓಂಕಾರ್ ವಲಯದಲ್ಲಿ ತಪ್ಪದ ಉಪಟಳ

• ಉದಯವಾಹಿನಿ, ಗುಂಡ್ಲುಪೇಟೆ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ ವ್ಯಾಪ್ತಿಯ ಓಂಕಾರ ವಲಯದ ಮಂಚಹಳ್ಳಿ ಗ್ರಾಮದ ರೈತರೊಬ್ಬರ ಜಮೀನಿನ ಮೇಲೆ ದಾಳಿ ನಡೆಸಿದ ಕಾಡಾನೆ ಬಾಳೆ ಫಸಲನ್ನ ತುಳಿದು ನಾಶಪಡಿಸಿರುವ ಘಟನೆ ಬುಧವಾರ ತಡರಾತ್ರಿ ನಡೆದಿದೆ. ತಾಲ್ಲೂಕಿನ ಮಂಚಹಳ್ಳಿ ಗ್ರಾಮದ ರವಿ ಎಂಬವರಿಗೆ ಸೇರಿದ ಜಮೀನಿಗೆ ನುಗ್ಗಿದ ಕಾಡಾನೆ ಒಂದು ಎಕರೆ ಪ್ರದೇಶದಲ್ಲಿ ಬೆಳೆದಿದ್ದ ಬಾಳೆ ಬೆಳೆಯನ್ನು ತುಳಿದು ನಾಶಪಡಿಸಿದೆ ಇದರಿಂದ ರೈತನಿಗೆ ಅಪಾರ ನಷ್ಟ ಉಂಟಾಗಿದೆ.

**ಹೆಚ್ಚಿದ ಕಾಡಾನೆ ಉಪಟಳ:** ಮಂಚಹಳ್ಳಿ ಕಾಡಂಚಿನ ಗ್ರಾಮವಾಗಿದ್ದು ಕಾಡಾನೆಗಳ ಹಾವಳಿ ಮೀತಿ ಮೀರಿದೆ. ಆಗಾಗ್ಗೆ ದಾಳಿ ಮಾಡುವ ಆನೆಗಳು ರೈತರು ಬೆಳೆದಿರುವ ಫಸಲನ್ನು ತಿಂದು ನಾಶಪಡಿಸುತ್ತಿವೆ. ಇದರಿಂದ ಸಾಲ ಮಾಡಿ ಕೃಷಿ ಚಟುವಟಿಕೆ ಮಾಡುವ ರೈತರು ಕಂಗಲಾಗಿದ್ದು, ಅರಣ್ಯ ಇಲಾಖೆಯವರು ಕಾಡಾನೆಗಳ ಹಾವಳಿಯನ್ನು ನಿಯಂತ್ರಿಸಿ ರೈತರು ಬೆಳೆದಿರುವ ಫಸಲುಗಳಿಗೆ ಸೂಕ್ತ ರಕ್ಷಣೆ ನೀಡುವಂತೆ ಒತ್ತಾಯಿಸಿದ್ದಾರೆ.

**ಪರಿಹಾರಕ್ಕೆ ಒತ್ತಾಯ:** ಬುಧವಾರ ತಡರಾತ್ರಿ ಕಾಡಾನೆ ದಾಳಿಗೆ ನಾಶವಾಗಿರುವ ರೈತನ ಜಮೀನಿಗೆ ಅರಣ್ಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿ ನಿಗಧಿತ ಸಮಯಕ್ಕೆ ಸೂಕ್ತ ಪರಿಹಾರ ನೀಡುವಂತೆ ರೈತ ಮುಖಂಡ ಮಂಚಹಳ್ಳಿ ಲೋಕೇಶ್ ಒತ್ತಾಯಿಸಿದ್ದಾರೆ.

## ನಾಗಮಂಗಲ: ಸರ್ಕಾರಿ ಜಾಗಕ್ಕೆ ತಂತಿಬೇಲಿ; ತೆರವು

• ಉದಯವಾಹಿನಿ, ನಾಗಮಂಗಲ


ಉದಯವಾಹಿನಿ ಚಿತ್ರ

ನಕಲಿ ದಾಖಲೆಗಳನ್ನು ಸೃಷ್ಟಿಸಿ ನೂರಾರು ಕೋಟಿ ಮೌಲ್ಯದ ಸಾವಿರಾರು ಎಕರೆ ಸರ್ಕಾರಿ ಭೂಮಿಯನ್ನು ಅಕ್ರಮವಾಗಿ ಕಬಳಿಸಿರುವ ಪ್ರಕರಣ ತನಿಖೆ ಹಂತದಲ್ಲಿ ಇರುವಾಗಲೇ ತಾಲ್ಲೂಕಿನಲ್ಲಿ ಮತ್ತೊಂದು ಭೂ ಕಬಳಿಕೆ ಪ್ರಕರಣ ಗರಿಗೆದರಿದೆ.

ತಾಲ್ಲೂಕಿನ ಬೆಳ್ಳೂರು ಹೋಬಳಿಯ ಕತ್ತರಗುಪ್ಪೆ ಗ್ರಾಮದ ಸರ್ವೆ ನಂ.19ರ ಸರ್ಕಾರಿ ಗೋಮಾಳದ ಭೂಮಿಯಲ್ಲಿ ಸ್ಥಳೀಯರಲ್ಲದ ವ್ಯಕ್ತಿಯೊಬ್ಬರು ಅಕ್ರಮವಾಗಿ ತಂತಿಬೇಲಿ ಹಾಕಿ ಶೆಡ್ ನಿರ್ಮಿಸಿರುವ ಹಿನ್ನೆಲೆಯಲ್ಲಿ ಗ್ರಾಮಸ್ಥರು ಪ್ರತಿಭಟಿಸಿ ಸರ್ಕಾರಿ ಗೋಮಾಳದ ಭೂಮಿಯನ್ನು ರಕ್ಷಿಸುವಂತೆ ತಹಶೀಲ್ದಾರ್ ಅವರಿಗೆ ದೂರು ಸಲ್ಲಿಸಿದ್ದರು.

ಕತ್ತರಗುಪ್ಪೆ ಗ್ರಾಮದ ಸರ್ವೆ ನಂ.19 ರಲ್ಲಿ ಒಟ್ಟು 60.3 ಎಕರೆ ಸರ್ಕಾರಿ ಗೋಮಾಳವಿದೆ. ಈ ಭೂಮಿಯಲ್ಲಿ ಜಮೀನು ಮಂಜೂರು ಮಾಡಿಕೊಡುವಂತೆ 1988-89ರಲ್ಲಿ ಬಗರ್‌ಹುಕುಂ ಸಾಗುವಳಿ ಸಮಿತಿಗೆ ಅರ್ಜಿ ಸಲ್ಲಿಸಿದ್ದ ಹಿನ್ನೆಲೆಯಲ್ಲಿ ಕಂದಾಯ ಅರಣ್ಯ ಇಲಾಖೆ ವತಿಯಿಂದ ಜಂಟಿ ಸರ್ವೆ ಕಾರ್ಯ ನಡೆಸಿ ಗ್ರಾಮದ 20ಕ್ಕೂ ಹೆಚ್ಚು ರೈತರಿಗೆ ತಲಾ 2 ರಿಂದ 2.5 ಎಕರೆಯಂತೆ ಕಳೆದ 2022ರಲ್ಲಿ ಕಿಮ್ಮತ್ತು ಕಟ್ಟಿಸಿಕೊಂಡು ಜಮೀನು ಮಂಜೂರು ಮಾಡಿಕೊಟ್ಟಿದ್ದಾರೆ ಎನ್ನಲಾಗಿದೆ.

ಇದೇ ಸರ್ವೆ ನಂಬರ್‌ನ ಸರ್ಕಾರಿ ಗೋಮಾಳದಲ್ಲಿ ಯಾವುದೇ ದಾಖಲೆಗಳು ಇಲ್ಲದಿದ್ದರೂ ಸಹ ಸ್ಥಳೀಯರಲ್ಲದ ವ್ಯಕ್ತಿಯೊಬ್ಬರು 30 ಎಕರೆಗೂ ಹೆಚ್ಚು ವಿಸ್ತೀರ್ಣದಲ್ಲಿ ಅಕ್ರಮವಾಗಿ ತಂತಿ ಬೇಲಿ ಹಾಕಿ ಶೆಡ್ ನಿರ್ಮಿಸಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಸ್ಥಳೀಯ ಸಾರ್ವಜನಿಕರ ದೂರಿನನ್ವಯ ತಹಶೀಲ್ದಾರ್ ಜಿ.ಆದರ್ಶ ಸ್ಥಳಕ್ಕೆ ಭೇಟಿಕೊಟ್ಟು ಪರಿಶೀಲನೆ ನಡೆಸಿದರು. ನಿಮಗೆ ಐದು ಎಕರೆ ಜಮೀನು ಮಂಜೂರಾಗಿದೆಯೇ ಎಂದು ಪ್ರಶ್ನಿಸಿ ಸೂಕ್ತ ದಾಖಲಾತಿಗಳಿದ್ದರೆ ಹಾಜರು ಪಡಿಸುವಂತೆ ಸೂಚಿಸಿದರು.

**ತೆರವು:** ಕತ್ತರಗುಪ್ಪೆ ಗ್ರಾಮದ ಸರ್ವೆ ನಂ.19ರಲ್ಲಿ ನಮಗೆ 25 ಎಕರೆ ಭೂಮಿ ಮಂಜೂರಾಗಿದೆ ಎಂದು ತಹಶೀಲ್ದಾರ್ ಎದುರು ಮೊಂಡುವಾದ ಮಾಡುತ್ತಿದ್ದ ಮಹಿಳೆಯೊಬ್ಬರು ಯಾವುದೇ ದಾಖಲಾತಿಗಳನ್ನು ಒದಗಿಸಲಾಗದೆ ಸ್ಥಳದಿಂದ ಕಾಲ್ಕಿತ್ತಿದ್ದಾರೆ. ಸರ್ಕಾರಿ ಗೋಮಾಳದಲ್ಲಿ ಅಕ್ರಮವಾಗಿ ನಿರ್ಮಿಸಿದ್ದ ಶೆಡ್ ಮತ್ತು ತಂತಿ ಬೇಲಿಯನ್ನು ಪೊಲೀಸರ ನೆರವಿನೊಂದಿಗೆ ಕಂದಾಯ ಇಲಾಖೆಯ ಅಧಿಕಾರಿಗಳು ಸಂಪೂರ್ಣ ತೆರವುಗೊಳಿಸಿದ್ದಾರೆ.

### ಸರ್ಕಾರಿ ಜಾಗದಲ್ಲಿ ನಕಲಿ ಖಾತೆ: ಕ್ರಮಕ್ಕೆ ಶಾಸಕ ಸೂಚನೆ

• ಉದಯವಾಹಿನಿ, ಮಧುಗಿರಿ

ಪಟ್ಟಣದ ತಾಲ್ಲೂಕು ಪಂಚಾಯಿತಿ ಕಚೇರಿ ಆವರಣದಲ್ಲಿ ಡಿ. ದೇವರಾಜ ಅರಸು ಅಭಿವೃದ್ಧಿ ನಿಗಮದಿಂದ ಬುಧವಾರ 20 ಅರ್ಹ ಫಲಾನುಭವಿಗಳಿಗೆ ಹೊಲಿಗೆ ಯಂತ್ರಗಳನ್ನು ವಿತರಿಸಲಾಯಿತು. ಶಾಸಕ ಕೆ.ಎನ್.ರಾಜಣ್ಣ ಮಾತನಾಡಿ, ಸರ್ಕಾರಿ ಹಾಗೂ ಗೋಮಾಳದ ಜಾಗಗಳನ್ನು ನಕಲಿ ದಾಖಲೆಗಳನ್ನು ಸೃಷ್ಟಿ ಮಾಡಿಕೊಂಡಿರುವ ಕಾರಣಕ್ಕೆ ಸರ್ಕಾರಿ ಕಚೇರಿಗಳಿಗೆ ಜಾಗವೇ ಇಲ್ಲದಂತಾಗಿದೆ. ಸರ್ಕಾರಿ ಜಾಗವನ್ನು ಅಕ್ರಮವಾಗಿ ಖಾತೆಗಳನ್ನು ಮಾಡಿಕೊಂಡಿರುವವರನ್ನು ಪತ್ತೆ ಹಚ್ಚಬೇಕು ಎಂದು ಅಧಿಕಾರಿಗಳಿಗೆ ಆದೇಶಿಸಿದರು.

ತಾಲ್ಲೂಕಿನ ಕೊಡಿಗೇನಹಳ್ಳಿ ಹೋಬಳಿ ಅಡವಿನಾಗೇನಹಳ್ಳಿಯಲ್ಲಿ 18 ಎಕರೆ ಗೋಮಾಳವನ್ನು ಗಂಗಮ್ಮ ಎಂಬುವವರಿಗೆ ಖಾತೆ ಮಾಡಿಕೊಟ್ಟಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಉಪವಿಭಾಗಾಧಿಕಾರಿ ಹಾಗೂ ತಹಶೀಲ್ದಾರ್‌ಗೆ ಸೂಚಿಸಿದರು.

ಪಟ್ಟಣದಲ್ಲಿ ನಡೆಯುತ್ತಿರುವ ರಸ್ತೆ, ಚರಂಡಿ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಬೇಕು. ಸಾರ್ವಜನಿಕರಿಗೆ ತೊಂದರೆಯಾಗದಂತೆ ಕೆಲಸ ಮಾಡಬೇಕು ಎಂದರು. ತುಮಕೂರಿನಲ್ಲಿ ಮೇ 20ರಂದು ನಡೆಯುವ ಕಾಂಗ್ರೆಸ್ ಸರ್ಕಾರದ ಸಾಧನಾ ಸಮಾವೇಶಕ್ಕೆ ತಾಲ್ಲೂಕಿನಿಂದ 250ಕ್ಕೂ ಹೆಚ್ಚು ಬಸ್‌ಗಳ ಆಯೋಜನೆ ಮಾಡಲಾಗಿದೆ ಎಂದು ತಿಳಿಸಿದರು.

## ಮದ್ದೂರು ಕ್ಷೇತ್ರಕ್ಕೆ 2 ಸಾವಿರ ಕೋಟಿ: ಶಾಸಕ ಕೆ, ಎಂ ಉದಯ್

• ಉದಯವಾಹಿನಿ, ಮದ್ದೂರು


ಉದಯವಾಹಿನಿ ಚಿತ್ರ

ಕಾಂಗ್ರೆಸ್ ಪಕ್ಷವು ಅಧಿಕಾರಕ್ಕೆ ಬಂದು ಮೂರು ವರ್ಷಗಳು ತುಂಬಿದ್ದು, ಈ ಅವಧಿಯಲ್ಲಿ ಮದ್ದೂರು ಕ್ಷೇತ್ರಕ್ಕೆ 2 ಸಾವಿರ ಕೋಟಿ ರೂಗಳಿಗೂ ಹೆಚ್ಚು ಅನುದಾನ ತಂದು ಹಲವು ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗಿದೆ ಎಂದು ಶಾಸಕ ಕೆ, ಎಂ ಉದಯ್ ತಿಳಿಸಿದರು. ತಾಲ್ಲೂಕಿನ ಕೊಪ್ಪ ಹೋಬಳಿಯ ಮಾರಸಿಂಗನಹಳ್ಳಿ ಗ್ರಾಮದಲ್ಲಿ 12.75 ಕೋಟಿ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ ಬಳಿಕ ವೇದಿಕೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮನವಿಗೆ ಸ್ಪಂದಿಸಿ ಅನುದಾನ ನೀಡಿದ್ದಾರೆ. ಕ್ಷೇತ್ರದ ನೀರಾವರಿ ಯೋಜನೆಗಳ ಸಮಗ್ರ ಅಭಿವೃದ್ಧಿಗೆ 800 ಕೋಟಿಗೂ ಹೆಚ್ಚಿನ ಅನುದಾನ ಬಿಡುಗಡೆಯಾಗಿದ್ದು, ಮುಂದಿನ ಒಂದು ತಿಂಗಳಲ್ಲಿ 500 ಕೋಟಿ ಅನುದಾನ ಬಿಡುಗಡೆಯಾಗುವ ನಿರೀಕ್ಷೆಯಿದೆ ಎಂದರು. ಶಿಂಷಾ ನದಿಯ ಏತ ನೀರಾವರಿ ಯೋಜನೆಗಳಲ್ಲಿ ಯಂತ್ರಗಳು ಶಿಥಿಲಗೊಂಡಿದ್ದು, ಹೊಸ ತಂತ್ರಜ್ಞಾನದ ಯಂತ್ರೋಪಕರಣಗಳನ್ನು 130 ಕೋಟಿ ವೆಚ್ಚದಲ್ಲಿ ಅಳವಡಿಸಲಾಗುತ್ತಿದೆ. ಬನ್ನಹಳ್ಳಿ ಏತ ನೀರಾವರಿ ಯೋಜನೆಯೂ ಎರಡು ಮೂರು ತಿಂಗಳಲ್ಲಿ ಉದ್ಘಾಟನೆಗೊಂಡು ಇದರಿಂದ ರೈತರ ಬೇಸಾಯಕ್ಕೆ ಶಾಶ್ವತ ಪರಿಹಾರ ಒದಗಿಸಲಾಗಿದೆ ಎಂದು ತಿಳಿಸಿದರು. ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಮಾತನಾಡಿ, ನಮ್ಮ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷಗಳು ತುಂಬಿದೆ. ರಾಜ್ಯದಲ್ಲಿ ಮೊದಲ ಬಾರಿಗೆ ಶಾಸಕರಾಗಿ 38 ಮಂದಿ ಆಯ್ಕೆಯಾಗಿದ್ದಾರೆ. ಅದರಲ್ಲಿ ಶಾಸಕ ಕೆ.ಎಂ. ಉದಯ್ ಅವರು ಈಗಾಗಲೇ 2 ಸಾವಿರ ಕೋಟಿ ಅನುದಾನ ತಂದು ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡುತ್ತಿರುವುದು ಶ್ಲಾಘನೀಯ ಸಂಗತಿಯಾಗಿದೆ ಎಂದರು.

## ಜಿಎಫ್ ವಿಧಾನಸಭಾ ಕ್ಷೇತ್ರದ: ಯಾರಾಗಲಿದ್ದಾರೆ ಬಿಜೆಪಿ ಹೊಸ ಸಾರಥಿ?

• ಉದಯವಾಹಿನಿ, ಬೇತಮಂಗಲ



ಕೆಜಿಎಫ್ ವಿಧಾನಸಭಾ ಕ್ಷೇತ್ರದ ಬಿಜೆಪಿ ಗ್ರಾಮಾಂತರ ಘಟಕದ ಅಧ್ಯಕ್ಷ ಯಾರಾಗಲಿದ್ದರೆ ಎಂಬುವುದು ಕುತೂಹಲ ಕೆರಳಿಸಿದೆ. ಹಾಲಿ ಅಧ್ಯಕ್ಷ ಸುಂದರಪಾಳ್ಯ ಗ್ರಾಮದ ಲಕ್ಷ್ಮೀ ನಾರಾಯಣ್ ಶರ್ಮಾ ಮೂರು ವರ್ಷದ ಅಧಿಕಾರ ಅವಧಿ ಮುಗಿದಿದ್ದು, ಬಿಜೆಪಿ ಸಾರಥಿ ಯಾರಾಗಲಿದ್ದಾರೆ ಎಂಬ ಚರ್ಚೆ ಬಿಜೆಪಿ ಪಡಸಾಲೆಯಲ್ಲಿ ನಡೆಯುತ್ತಿದೆ. ಮುಂದಿನ ಅವಧಿಗೂ ತಾವೇ ಮುಂದುವರಿಯುವ ಆಸಕ್ತಿಯನ್ನು ಶರ್ಮಾ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.


ಗ್ರಾಮಾಂತರ ಭಾಗದಲ್ಲಿ ಪಕ್ಷದ ಬಲವರ್ಧನೆಗೆ ಜಾತಿ ಸಮೀಕರಣ ಬಹಳ ಮುಖ್ಯವಾಗಿದೆ. ಈ ಬಾರಿಯ ಆಯ್ಕೆಯಲ್ಲಿ ಬಿಜೆಪಿ ವರಿಷ್ಠರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ.

ಗ್ರಾಮಾಂತರ ಭಾಗದಲ್ಲಿ ಕುರುಬ, ಬಲಿಜ, ಪರಿಶಿಷ್ಟ ಸಮುದಾಯಗಳ ಮತಗಳು ನಿರ್ಣಾಯಕವಾಗಿವೆ. ಅದ್ದರಿಂದ ಮುಂಬರುವ ಚುನಾವಣೆಗಳನ್ನು ದೃಷ್ಟಿಯಲ್ಲಿಟ್ಟುಕೊಂಡು ಈ ಪ್ರಬಲ ಸಮುದಾಯಗಳ ಪೈಕಿ ಯಾವ ಸಮುದಾಯದವರಿಗೆ ಅಧ್ಯಕ್ಷ ಪಟ್ಟ ನೀಡಿದರೆ ಪಕ್ಷಕ್ಕೆ ಹೆಚ್ಚಿನ ಲಾಭವಾಗಲಿದೆ ಎಂಬ ಲೆಕ್ಕಾಚಾರದಲ್ಲಿ ನಾಯಕರು ತೊಡಗಿದ್ದಾರೆ. ಮಾಜಿ ಶಾಸಕ ವೈ. ಸಂಪಂಗಿ ಅವರ ನಿರ್ಧಾರ ನಿರ್ಣಾಯಕ ಎಂದು ಹೇಳಲಾಗುತ್ತಿದೆ.

# ಹಕ್ಕು ಚಲಾಯಿಸಿ, ಕರ್ತವ್ಯ ಮರೆತಿದ್ದೇವೆ: ಅಧ್ಯಕ್ಷ

### ಜಿಲ್ಲೆಯಲ್ಲಿ ಐದು ಲಕ್ಷ ಗಿಡಗಳನ್ನು ನೆಡುವ ಕಾರ್ಯಕ್ರಮಕ್ಕೆ ಅಧ್ಯಕ್ಷ ಟಿ.ಜಿ. ಶಿವಶಂಕರೇಗೌಡ ಚಾಲನೆ

• ಉದಯವಾಹಿನಿ, ಚಿಕ್ಕಬಳ್ಳಾಪುರ


ಉದಯವಾಹಿನಿ ಚಿತ್ರ

**3 ವರ್ಷ ರಕ್ಷಣೆ ಮಾಡುವ ಅಗತ್ಯ**

ಸಂವಿಧಾನದತ್ತ ಹಕ್ಕುಗಳನ್ನು ಎಲ್ಲರೂ ಚಲಾಯಿಸುತ್ತೇವೆ ಆದರೆ ಕರ್ತವ್ಯಗಳನ್ನು ಮರೆತಿದ್ದೇವೆ ಎಂದು ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಟಿ.ಜಿ. ಶಿವಶಂಕರೇಗೌಡ ಅವರು ತಿಳಿಸಿದರು. ಜಿಲ್ಲೆಯಲ್ಲಿ ಐದು ಲಕ್ಷ ಗಿಡಗಳನ್ನು ನೆಡುವ ಕಾರ್ಯಕ್ರಮದ ಭಾಗವಾಗಿ ತಾಲ್ಲೂಕಿನ ಮುದ್ದೇನಹಳ್ಳಿಯಲ್ಲಿರುವ ಸರ್.ಎಂ.ವಿಶ್ವೇಶ್ವರಯ್ಯ ಅವರ ಸ್ಮಾರಕದ ಬಳಿ ಗಿಡ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಇಂದಿನ ಮತ್ತು ಮುಂದಿನ ಪೀಳಿಗೆಯ ಉಳಿವಿಗಾಗಿ ಪರಿಸರ ರಕ್ಷಿಸಿಕೊಳ್ಳುವುದು ಆದ್ಯ ಕರ್ತವ್ಯ. ಆ ನಿಟ್ಟಿನಲ್ಲಿ ನಾವೆಲ್ಲರೂ ಗಿಡಗಳನ್ನು ನೆಟ್ಟು ಪೋಷಿಸುವ ಅಗತ್ಯವಿದೆ. ಈ ಭಾಗವಾಗಿ ಚಿಕ್ಕಬಳ್ಳಾಪುರ ನ್ಯಾಯಾಂಗ ಮತ್ತು ಜಿಲ್ಲಾಡಳಿತ 5 ಲಕ್ಷ ಸಸಿಗಳನ್ನು ನೆಟ್ಟು ಬೆಳೆಸುವ ಕಾರ್ಯಕ್ಕೆ ಮುಂದಾಗಿರುವುದು ಶ್ಲಾಘನೀಯ ಎಂದು ತಿಳಿಸಿದರು.

ಜಿಲ್ಲಾ ಪ್ರಧಾನ, ಸೆಷನ್ಸ್ ನ್ಯಾಯಾಧೀಶ ಟಿ.ಪಿ. ರಾಮಲಿಂಗೇಗೌಡ ಅವರು ಮಾತನಾಡಿ, ರಾಜ್ಯದಲ್ಲಿ 5 ಕೋಟಿ ಗಿಡಗಳನ್ನು ನೆಟ್ಟು ಬೆಳೆಸುವ ಕಾರ್ಯಕ್ಕೆ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ಧರೆ ಫೌಂಡೇಶನ್ ಜೊತೆ ಒಪ್ಪಂದ ಮಾಡಿಕೊಂಡಿದೆ ಎಂದರು.

> ಈ ವರ್ಷ 5 ಲಕ್ಷ ಗಿಡಗಳನ್ನು ಮುಂಗಾರು ಮಳೆಯ ಅವಧಿಯಲ್ಲಿ ನೆಡಲು ಜಿಲ್ಲಾಡಳಿತ ಸಿದ್ಧತೆ ಮಾಡಿಕೊಂಡಿದೆ. ಆ ಕಾರ್ಯಕ್ರಮದ ಜೊತೆಗೆ ಕಾನೂನು ಸೇವಾ ಪ್ರಾಧಿಕಾರದ ಜೊತೆಗೂಡಿ ಹೆಚ್ಚುವರಿಯಾಗಿ 5 ಲಕ್ಷ ಸಸಿಗಳನ್ನು ಬೆಳೆಸುವ ಅರ್ಥಪೂರ್ಣ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲಾಗುವುದು.
> – ಜಿ.ಪ್ರಭು, ಜಿಲ್ಲಾಧಿಕಾರಿ

ಈ ಭಾಗವಾಗಿ ಶಿಡ್ಲಘಟ್ಟ ತಾಲ್ಲೂಕಿನ ಅಪ್ಪೇಗೌಡನಹಳ್ಳಿಯ ಇಂದಿರಾ ಗಾಂಧಿ ವಸತಿ ಶಾಲೆಯ ಆವರಣದಲ್ಲಿ ಗಿಡ ನೆಡುವ ಕಾರ್ಯಕ್ರಮಕ್ಕೆ ಏಪ್ರಿಲ್‌ನಲ್ಲಿ ಚಾಲನೆ ದೊರಕಿದೆ. ಮುಂದುವರೆದ ಭಾಗವಾಗಿ ಸರ್.ಎಂ.ವಿಶ್ವೇಶ್ವರಯ್ಯ ಅವರ ಸ್ಮಾರಕದ ಬಳಿ 5 ಗುಂಟೆ ಜಮೀನಿನಲ್ಲಿ ಗಿಡ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ.

> ಗಿಡ ನೆಟ್ಟು ಮರ ಬೆಳೆಸುವುದರಿಂದ ಬರಗಾಲ ತಪ್ಪಿಸಬಹುದು. ಮಳೆಯ ಪ್ರಮಾಣದಲ್ಲಿ ಸಮತೋಲನದ ಹಂಚಿಕೆಯನ್ನು ಕಾಪಾಡಿಕೊಳ್ಳಬಹುದು.
> – ಅಭಿಲಾಷ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ

ಈ ಕಾರ್ಯಕ್ರಮ ಮುಂದಿನ ದಿನಗಳಲ್ಲಿ ಜಿಲ್ಲೆಯ ವಿವಿಧೆಡೆ ಅನುಷ್ಠಾನವಾಗಿ ಒಟ್ಟು 5 ಲಕ್ಷ ಗಿಡಗಳನ್ನು ನೆಟ್ಟು ಬೆಳೆಸುವ ಯೋಜಿತ ಗುರಿ ಹೊಂದಲಾಗಿದೆ ಎಂದು ಹೇಳಿದರು. ಕೇವಲ ಗಿಡಗಳನ್ನು ನೆಟ್ಟು ಹೋಗುವುದರಿಂದ ಗಿಡ ಬೆಳೆಯುವುದಿಲ್ಲ. ಅವು ಬೆಳೆಯುವವರೆಗೆ ಕನಿಷ್ಠ 3 ವರ್ಷ ರಕ್ಷಣೆ ಮಾಡುವ ಅಗತ್ಯವಿದೆ. ಜಿಲ್ಲಾಡಳಿತ, ಅರಣ್ಯ ಇಲಾಖೆ, ಸಾಮಾಜಿಕ ಅರಣ್ಯ ಇಲಾಖೆ ಸಹಕಾರದಲ್ಲಿ ಜಿಲ್ಲೆಯಲ್ಲಿ 5 ಲಕ್ಷ ಸಸಿಗಳನ್ನು ನೆಟ್ಟು ಬೆಳೆಸಲಾಗುವುದು ಎಂದು ಹೇಳಿದರು.

ನೆಟ್ಟ ಗಿಡಗಳ ಪೈಕಿ ಶೇ 80 ರಷ್ಟು ಗಿಡಗಳನ್ನು ಉಳಿಸಿ ಬೆಳೆಸಲು ಪ್ರತಿ ತಿಂಗಳಿಗೆ ಒಮ್ಮೆ ಎಲ್ಲಾ ನೆಟ್ಟ ಸಸಿಗಳ ಮೌಲ್ಯಮಾಪನ ಮಾಡುವ ಮೂಲಕ ಈ ಮೌಲ್ಯಯುತವಾದ ಕಾರ್ಯಕ್ರಮ ಯಶಸ್ವಿಗೊಳಿಸಲಾಗುವುದು ಎಂದರು.

# ಶಿಕ್ಷಣ ವ್ಯವಸ್ಥೆ ಇಸ್ಲಾಮೀಕರಣಕ್ಕೆ ಮುಂದಾದ ಸರ್ಕಾರ: ಶಾಸಕ ಯಶ್‌ಪಾಲ್ ಸುವರ್ಣ

• ಉದಯವಾಹಿನಿ ಉಡುಪಿ

ರಾಜ್ಯದ ಶಾಲಾ ಕಾಲೇಜುಗಳಲ್ಲಿ ಹಿಜಾಬ್ ನಿಷೇಧ ಆದೇಶವನ್ನು ಹಿಂಪಡೆಯುವ ಮೂಲಕ ರಾಜ್ಯದ ಶಿಕ್ಷಣ ವ್ಯವಸ್ಥೆಯನ್ನು ಇಸ್ಲಾಮೀಕರಣಗೊಳಿಸಲು ಸಿದ್ದರಾಮಯ್ಯ ನೇತೃತ್ವದ ರಾಜ್ಯದ ಕಾಂಗ್ರೆಸ್ ಸರ್ಕಾರ ಮುಂದಾಗಿದೆ ಎಂದು ಉಡುಪಿ ಶಾಸಕ ಯಶ್‌ಪಾಲ್ ಸುವರ್ಣ ಹೇಳಿದ್ದಾರೆ.

**ಶಿಕ್ಷಣ ವ್ಯವಸ್ಥೆಯಲ್ಲಿ ಗೊಂದಲ**

ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ನಡುವೆ ಜಾತಿ, ಮತ, ಬಡವ, ಶ್ರೀಮಂತ ಎಂಬ ತಾರತಮ್ಯ ಹೋಗಲಾಡಿಸುವ ಶಾಲಾ ಸಮವಸ್ತ್ರದ ಆಶಯಕ್ಕೆ ವಿರುದ್ಧವಾಗಿ ಇದೀಗ ಶಾಲಾ ಕಾಲೇಜುಗಳಲ್ಲಿ ಹಿಜಾಬ್ ಧರಿಸಲು ಅವಕಾಶ ನೀಡುವ ಮೂಲಕ ರಾಜ್ಯದ ಶಿಕ್ಷಣ ವ್ಯವಸ್ಥೆಯಲ್ಲಿ ಗೊಂದಲ ಸೃಷ್ಟಿಸಲು ಸರ್ಕಾರ ಮುಂದಾಗಿದೆ' ಎಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ.

2021 ಡಿಸೆಂಬರ್ ತಿಂಗಳಿನಲ್ಲಿ ಉಡುಪಿಯ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ 6 ಮಂದಿ ವಿದ್ಯಾರ್ಥಿನಿಯರು ದುರುದ್ದೇಶಪೂರ್ವಕವಾಗಿ ಹಿಜಾಬ್‌ಗೆ ಅವಕಾಶ ನೀಡುವಂತೆ ಆಗ್ರಹಿಸಿ ವಿವಾದ ಸೃಷ್ಟಿಸಿದ್ದರಿಂದ ರಾಜ್ಯ ಹಾಗೂ ದೇಶದಾದ್ಯಂತ ಗೊಂದಲ ನಿರ್ಮಾಣವಾಗಿತ್ತು. ಈ ಸಂದರ್ಭದಲ್ಲಿ ಕೆಲವು ಮತೀಯವಾದಿ ನಿಷೇಧಿತ ಸಂಘಟನೆಗಳು ಹಿಜಾಬ್ ವಿವಾದದ ಮೂಲಕ ಶಾಂತಿ ಸುವ್ಯವಸ್ಥೆಗೂ ಧಕ್ಕೆ ತರುವ ಪ್ರಯತ್ನ ಮಾಡಿರುವುದನ್ನು ರಾಜ್ಯದ ಜನತೆ ಇಂದೂ ಮರೆತಿಲ್ಲ' ಎಂದಿದ್ದಾರೆ.

ಅಲ್ಪಸಂಖ್ಯಾಂತರ ಓಲೈಕೆಗಾಗಿ ಹಿಜಾಬ್ ನಿಷೇಧ



ಉದಯವಾಹಿನಿ ಚಿತ್ರ

ಆದೇಶವನ್ನು ಹಿಂಪಡೆಯಲು ರಾಜ್ಯ ಸರ್ಕಾರ ಮುಂದಾಗಿದೆ. ಹಿಜಾಬ್ ಧರಿಸಲು ಅವಕಾಶ ನೀಡುವ ಸರ್ಕಾರ ಕೇಸರಿ ಶಾಲು ಧರಿಸಲು ಅವಕಾಶ ನೀಡದೆ ಮತ್ತೊಮ್ಮೆ ತನ್ನ ಹಿಂದೂ ವಿರೋಧಿ ನಿಲುವನ್ನು ಮುಂದುವರಿಸಿದೆ' ಎಂದು ಹೇಳಿದ್ದಾರೆ.

ಹಿಜಾಬ್ ಇಸ್ಲಾಂನ ಅತ್ಯಗತ್ಯ ಭಾಗವಲ್ಲ ಎಂದು ಹೈಕೋರ್ಟ್‌ನ ತ್ರಿಸದಸ್ಯ ಪೀಠ ಈ ಹಿಂದೆ ತೀರ್ಪು ನೀಡಿದ್ದರೂ ಹಿಜಾಬ್ ಧರಿಸಲು ಅವಕಾಶ ನೀಡಲು ಅತಿ ಮುತುವರ್ಜಿ ವಹಿಸುತ್ತಿರುವ ರಾಜ್ಯ ಸರ್ಕಾರ ತನ್ನ ನಿರ್ಧಾರವನ್ನು ತಕ್ಷಣ ಹಿಂಪಡೆಯಬೇಕು. ಕೇವಲ ರಾಜಕೀಯ ಉದ್ದೇಶಕ್ಕಾಗಿ ರಾಜ್ಯದ ಶಿಕ್ಷಣ ವ್ಯವಸ್ಥೆಯನ್ನು ಹದಗೆಡಿಸಿ ವಿದ್ಯಾರ್ಥಿಗಳ ಜೀವನದಲ್ಲಿ ಚೆಲ್ಲಾಟವಾಡಲು ಅವಕಾಶ ನೀಡುವುದಿಲ್ಲ ಎಂದಿದ್ದಾರೆ.

# ನೀರಿಗಾಗಿ ಜನರ ಆಕ್ರಂದನ : ಕೃಷ್ಣಾ ತೀರದಲ್ಲಿ ಹಾಹಾಕಾರ ಜಲಾಶಯ ಖಾಲಿ

• ಉದಯವಾಹಿನಿ ಜಮಖಂಡಿ

ಒಂದು ಕಡೆ ಮಹಾದಾಯಿ ನೀರಿಗಾಗಿ ಸರ್ಕಾರಗಳು ಬೀದಿಗಿಳಿದು ಹೋರಾಟದ ಮಾತು ಆಡುತ್ತವೆ ಕಾವೇರಿ ನೀರಿಗಾಗಿ ರಾಜಕೀಯ ನಾಯಕರು ಘೋಷಣೆ ಕೂಗುತ್ತಾರೆ ಆದರೆ ಉತ್ತರ ಕರ್ನಾಟಕದ ಜೀವನಾಡಿಯಾದ ಕೃಷ್ಣೆಗಾಗಿ ಮಾತ್ರ ಯಾಕೆ ಧ್ವನಿ ಎತ್ತುವುದಿಲ್ಲ ಎಂಬ ಪ್ರಶ್ನೆ ಇದೀಗ ಜನರಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ. ಕೃಷ್ಣಾ, ಮಲಪ್ರಭಾ ಹಾಗೂ ಘಟಪ್ರಭಾ ನದಿಗಳು ಹರಿದರೂ, ಬೇಸಿಗೆ ಬಂದಾಕ್ಷಣ ಜಮಖಂಡಿ ಸೇರಿದಂತೆ ಜಿಲ್ಲೆಯ ಅನೇಕ ಭಾಗಗಳಲ್ಲಿ ಸಾರ್ವಜನಿಕರು ಕುಡಿಯುವ ನೀರಿಗಾಗಿ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ನೀರಿಗಾಗಿ ಮಹಿಳೆಯರು ಬಿಂದಿಗೆ ಹಿಡಿದು ಅಲೆದಾಡುವ ಪರಿಸ್ಥಿತಿ ಎದುರಾಗಿದ್ದು, ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿದೆ. ಸರ್ಕಾರಗಳು ಸಾವಿರಾರು ಕೋಟಿ ಯೋಜನೆಗಳ ಘೋಷಣೆ ಮಾಡಿದರೂ, ನೆಲಮಟ್ಟದಲ್ಲಿ ಶಾಶ್ವತ ಪರಿಹಾರ ಮಾತ್ರ ಕಾಣುತ್ತಿಲ್ಲ ಎಂಬ ಆರೋಪ ಕೇಳಿಬರುತ್ತಿದೆ. ಸಸಿ ನೆಡುವ ಯೋಜನೆಗಳು ಕಡತಗಳಲ್ಲೇ ಉಳಿದಿದ್ದು, ಬರ ನಿವಾರಣಾ ಕಾರ್ಯಕ್ರಮಗಳು ಕೇವಲ ಹೆಸರಿಗೆ ಸೀಮಿತವಾಗಿವೆ ಎಂಬ ಟೀಕೆ ವ್ಯಕ್ತವಾಗಿದೆ.

ಆಲಮಟ್ಟಿ ಜಲಾಶಯ ಹಾಗೂ ಕೃಷ್ಣಾ ಯೋಜನೆಗಳು ಇನ್ನೂ ಸಂಪೂರ್ಣ ಫಲ ನೀಡದಿರುವುದು ರೈತರ ಆಕ್ರೋಶ ಹೆಚ್ಚಿಸಿದೆ. ''ಮಹಾದಾಯಿ, ಕಾವೇರಿ ಬಗ್ಗೆ ಮಾತಾಡುವ ಸರ್ಕಾರ ಕೃಷ್ಣೆಗಾಗಿ ಯಾಕೆ ಗಟ್ಟಿಯಾಗಿ ನಿಲ್ಲುವುದಿಲ್ಲ?'' ಎಂದು ರೈತರು ಪ್ರಶ್ನಿಸುತ್ತಿದ್ದಾರೆ. ಈ ಬಾರಿ ಹಿಪ್ಪರಗಿ ಜಲಾಶಯದ ಕ್ರಸ್ಟ್ ಗೇಟ್ ಹಾನಿಯಿಂದ ನೀರು ಹರಿದುಹೋಗಿದ್ದು, ಬೇಸಿಗೆಯ ನೀರಿನ ಸಮಸ್ಯೆ ಮತ್ತಷ್ಟು ಭೀಕರವಾಗಿದೆ. ಇದರಿಂದ ಕೃಷಿ, ಹೈನುಗಾರಿಕೆ ಹಾಗೂ ಸಾಮಾನ್ಯ ಜನರ ಬದುಕೇ ಸಂಕಷ್ಟಕ್ಕೆ ಸಿಲುಕಿದೆ.

ಕೃಷ್ಣಾ ತೀರದಲ್ಲಿ ಕಬ್ಬು ಬೆಳೆ ಮತ್ತು ಹೈನುಗಾರಿಕೆಯನ್ನು ನಂಬಿಕೊಂಡಿರುವ ರೈತರು, ಜಾನುವಾರುಗಳಿಗೆ ನೀರು ಒದಗಿಸಲೂ ಪರದಾಡುತ್ತಿದ್ದಾರೆ. ನದಿ ತೀರದಲ್ಲೇ ನೀರಿಗಾಗಿ ಹಾಹಾಕಾರ ಕೇಳಿಬರುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ. ಮಳೆ ಯಾವಾಗ ಬರುತ್ತದೆ? ಸರ್ಕಾರ ಯಾವಾಗ ಎಚ್ಚೆತ್ತುಕೊಳ್ಳುತ್ತದೆ? ಕೃಷ್ಣೆಗಾಗಿ ಯಾವಾಗ ನ್ಯಾಯ ಸಿಗುತ್ತದೆ? ಎಂಬ ಪ್ರಶ್ನೆ ಇದೀಗ ಉತ್ತರ ಕರ್ನಾಟಕದ ಜನರ ಬಾಯಲ್ಲಿ ಗಟ್ಟಿಯಾಗಿ ಕೇಳಿಬರುತ್ತಿದೆ.

## 42 ಗ್ರಾಮ ಪಂಚಾಯತಿಗಳಿಗೆ ಒಟ್ಟು 13 ಕೋಟಿ 30 ಲಕ್ಷ ರೂಪಾಯಿ ನೀರಿನ ಕಾಮಗಾರಿ

# ಆಳಂದ: 42 ಗ್ರಾಪಂಗೆ 13.30 ಕೋಟಿ ಅನುದಾನ

• ಉದಯವಾಹಿನಿ, ಆಳಂದ

ಬೇಸಿಗೆಯಲ್ಲಿ ಕುಡಿಯುವ ನೀರಿನ ತೀವ್ರ ಸಮಸ್ಯೆ ಎದುರಿಸುತ್ತಿರುವ ತಾಲ್ಲೂಕಿನ ಜನರಿಗೆ ಶಾಸಕ ಬಿ.ಆರ್. ಪಾಟೀಲ್ ಅವರು ಮಹತ್ವದ ಕೊಡುಗೆ ನೀಡಿದ್ದಾರೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿಶೇಷ ಅನುದಾನದ ಅಡಿಯಲ್ಲಿ ತಾಲ್ಲೂಕಿನ 42 ಗ್ರಾಮ ಪಂಚಾಯತಿಗಳಿಗೆ ಒಟ್ಟು 13 ಕೋಟಿ 30 ಲಕ್ಷ ರೂಪಾಯಿ ನೀರಿನ ಕಾಮಗಾರಿ ಅನುದಾನವನ್ನು ಸರ್ಕಾರ ಬಿಡುಗಡೆ ಮಾಡಿದೆ. ಇದು ಜಿಲ್ಲೆಯಲ್ಲೇ ವಿಶೇಷ ಅನುದಾನ ಪಡೆದ ಆಳಂದ ಏಕೈಕ ಕ್ಷೇತ್ರವಾಗಿದೆ ಎನ್ನಲಾಗಿದೆ.

ಶಾಸಕರ ಅನುದಾನದ ಪ್ರಸ್ತಾವನೆ ಮೇರೆಗೆ ಮಂಜೂರಾದ ಈ ಅನುದಾನದಲ್ಲಿ ಆಳಂದಾ, ಬೆಳಮಗಿ, ಭೂಧನ್, ಬುಸ್ನೂರ,


ಉದಯವಾಹಿನಿ ಚಿತ್ರ

ಚಿಂಚನಸೂರ, ದಣ್ಣೂರ, ದರ್ಗಾಶಿರೂರ, ಧಾಂಗಾಪೂರ, ಗೋಳಾ ಬಿ, ಧುತ್ತರಗಾಂವ, ಹಡಲಗಿ, ಹಳ್ಳಿಸಲಗರ, ಹಾಳತಡಕಲ್, ಹೆಬ್ಬಳ್ಳಿ, ಹಿರೋಳ್ಳಿ, ಹಿತ್ತಲಶಿರೂರ, ಹೋದಲೂರ, ಜಿಡಗ್ಗಾ, ಕಡಗಂಚಿ, ಕಮಲನಗರ, ಕವಲಗಾ, ಖಜೂರಿ, ಕೆರಿ ಅಂಬಲಗಾ, ಕಿಣ್ಣಿ ಸುಲ್ತಾನ, ಕೊಡಲ್‌ಹಾಂಗರ್ಗಾ, ಕೊರಳ್ಳಿ, ಮದನಹಿಪ್ಪರ್ಗಾ, ಮಾಡಿಯಾಳ, ಮೊಗಾ, ಮುನಳ್ಳಿ, ನಾರೋಣಾ, ನಿಂಬಾಳ, ನಿಂಬರ್ಗಾ, ನಿರಗುಡಿ, ಪಾಡಸಾವಳಿ, ರುದ್ರವಾಡಿ, ಸರಸಂಬಾ, ಸವಳೇಶ್ವರ, ಸುಂಟನೂರ, ತಡಕಲ್, ಯಳಸಂಗಿ ಗ್ರಾಮ ಪಂಚಾಯತಿಗಳು ಫಲಾನುಭವಿಯಾಗಿವೆ. ಇದರಲ್ಲಿ ತೆಗ್ನೂರ (ಹೆಸರಿನ ಗೊಂದಲ)ಕಂಡಿದೆ. ಈ ಅನುದಾನದಲ್ಲಿ ಕಡಗಂಚಿ ಮತ್ತು ನಿಂಬರ್ಗಾ ಗ್ರಾಮ ಪಂಚಾಯತಿಗಳಿಗೆ ತಲಾ 50 ಲಕ್ಷ ರೂಪಾಯಿ ಅತಿ ಹೆಚ್ಚು ಅನುದಾನ ದೊರೆತಿದೆ. ಬೆಳಮಗಿ, ಭೂದನ್, ಬುಸ್ನೂರ, ಧುತ್ತರಗಾಂವ, ಕಮಲನಗರ, ಮದನ ಹಿಪ್ಪರ್ಗಾ, ನಿರಗುಡಿ ಮತ್ತು ರುದ್ರವಾಡಿ ಗ್ರಾಮ ಪಂಚಾಯತಿಗಳಿಗೆ ತಲಾ 35 ಲಕ್ಷ ರೂಪಾಯಿ ನಿಗದಿಯಾಗಿದ್ದು, ಮುನಳ್ಳಿ ಗ್ರಾಮ ಪಂಚಾಯತಿಗೆ 20 ಲಕ್ಷ ರೂಪಾಯಿ ಹಾಗೂ ಉಳಿದ ಗ್ರಾಮ ಪಂಚಾಯತಿಗಳಿಗೆ ತಲಾ 30 ಲಕ್ಷ ರೂಪಾಯಿ ಅನುದಾನ ಹಂಚಿಕೆಯಾಗಿದೆ. ಈ ಕಾಮಗಾರಿಗಳು ಗುಣಮಟ್ಟದಿಂದ ನಡೆಯಬೇಕು ಮತ್ತು ಪ್ರತಿ ಗ್ರಾಮದ ಕೊನೆಯ ಮನೆಗೂ ನೀರು ತಲುಪಬೇಕು ಎಂದು ಶಾಸಕ ಬಿ.ಆರ್. ಪಾಟೀಲ್ ಅವರು ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದ್ದಾರೆ.

**ಶಾಸಕ ಬಿ.ಆರ್. ಪಾಟೀಲ್ ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ:** ನೀರಿಲ್ಲದೆ ಜನ ಸಾಯಬಾರದು ಎಲ್ಲಾ ಗ್ರಾಮಗಳಿಗೂ ನೀರು ತಲುಪಿಸಿ ತಾಲ್ಲೂಕಿನಲ್ಲಿ ಪ್ರಸಕ್ತ ಬೇಸಿಗೆ ತಲೆದೋರಬಹುದಾದ ಕುಡಿಯುವ ನೀರಿನ ಕೊರತೆ, ಬಿಸಿಲಿನ ತಾಪ ಮತ್ತು ಜಾನುವಾರು ಮೇವಿನ ಸಮಸ್ಯೆ ಕುರಿತು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಶಾಸಕ ಹಾಗೂ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ತಾಲ್ಲೂಕ ಪಂಚಾಯತ ಸಭಾಂಗಣದಲ್ಲಿ ತಾಲ್ಲೂಕಾ ಟಾಸ್ಕ್ ಫೋರ್ಸ್ ಸಮಿತಿ ಸಭೆ ಜರುಗಿತು.

**ಪಾಟೀಲ್ ಪ್ರಯತ್ನಕ್ಕೆ ಸರ್ಕಾರದ ಸ್ಪಂದನ**

**40 ಗ್ರಾಮಗಳಿಗೆ ಬಾಡಿಗೆ ನೀರಿನ ಆತಂಕ**

**ಸಭೆಯಲ್ಲಿ ಮಾಹಿತಿ ನೀಡಿದ ಇಒ ಮಾನಪ್ಪ ಕಟ್ಟಿಮನಿ ಅವರು, ಪ್ರಸ್ತುತ 11 ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಖಾಸಗಿ ಬಾವಿಗಳಿಂದ ನೀರು ಪೂರೈಕೆ ಮಾಡಲಾಗುತ್ತಿದೆ. .ತಡಕಲ್ ಮತ್ತು ವೈಜಪೂರ ಗ್ರಾಮಗಳಲ್ಲಿ ಖಾಸಗಿ ನೀರು ಪಡೆಯುವ ಅಗತ್ಯ ತಪ್ಪಿದ್ದು, ಸ್ವಂತ ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದರು. ಆದರೆ ಅಂಬೆವಾಡ, ಅಲ್ಲಾಪೂರ, ಕಿಣಿ, ಅಬ್ಬಾಸ್, ರುದ್ರವಾಡಿ,ಉಡಿಕಿಟ, ಕಣ್ಮಸ್, ದುತ್ತರಗಾಂವ, ಕಡಗಂಚಿ, ಸಂಗೊಳ್ಳಿ ಸೇರಿದಂತೆ ಹಲವು ಗ್ರಾಮಗಳಿಗೆ ಬಾಡಿಗೆ ನೀರು ಒದಗಿಸಲಾಗುತ್ತಿದೆ ಎಂದು ತಿಳಿಸಿದರು. ಈ ವಾರದಲ್ಲೇ ಇನ್ನೂ ಐದಾರು ಹಳ್ಳಿಗಳಿಂದ ಬಾಡಿಗೆ ನೀರಿನ ಬೇಡಿಕೆ ಪ್ರಸ್ತಾವನೆ ಬಂದಿದ್ದು, ಮಳೆ ತಡವಾದರೆ ಬಾಡಿಗೆ ನೀರಿಗೆ ಮೊರೆ ಹೋಗುವ ಗ್ರಾಮಗಳ ಸಂಖ್ಯೆ 40ಕ್ಕೂ ಹೆಚ್ಚಾಗಬಹುದು ಎಂದು ಆತಂಕ ವ್ಯಕ್ತಪಡಿಸಿದರು.**

**ಅಧಿಕಾರಿಗಳ ವಿರುದ್ಧ ಆಕ್ರೋಶ**

**ಸಭೆಯ ಆರಂಭದಲ್ಲೇ ಶಾಸಕ ಬಿ.ಆರ್. ಪಾಟೀಲ್ ಅವರು ಕಟ್ಟುನಿಟ್ಟಿನ ಧೋರಣೆ ತಳೆದರು. ಹಿಂದಿನ ಸಭೆಯಲ್ಲಿ ಗ್ರಾಮಗಳ ನೀರಿನ ಸಮಸ್ಯೆ ನಿವಾರಣೆಯಲ್ಲಿ ವಿಫಲಗೊಂಡ ಅಧಿಕಾರಿಗಳ ವಿರುದ್ಧ ತೆಗೆದುಕೊಂಡ ಕ್ರಮವೇನು ಎಂದು ನೇರವಾಗಿ ಇಒ ಮಾನಪ್ಪ ಕಟ್ಟಿಮನಿ ಅವರನ್ನು ಪ್ರಶ್ನಿಸಿ ಜವಾಬ್ದಾರಿ ಕೇಳಿದರು. ಸಮಸ್ಯೆ ಇದ್ದಾಗ ಕ್ರಮ ತೆಗೆದುಕೊಳ್ಳದ ಅಧಿಕಾರಿಗಳನ್ನು ಸಹಿಸಿಕೊಳ್ಳಲಾಗುವುದಿಲ್ಲ ಎಂದು ಶಾಸಕರು ಖಡಕ್ ಆಗಿ ಎಚ್ಚರಿಸಿದರು. ನೀರಿನ ಸಮರ್ಪಕ ಪೂರೈಕೆಗೆ ಗ್ರಾಮ ಪಂಚಾಯತಿ ಪಿಡಿಒ ಮತ್ತು ಗ್ರಾಮ ಆಡಳಿತ ಅಧಿಕಾರಿಗಳು ಸಮನ್ವಯದಿಂದ ಕೆಲಸ ಮಾಡಬೇಕು ಎಂದು ಸೂಚಿಸಿದರು.**

# ಮುಸ್ಲಿಂ ಸಂಘಟನೆಗಳ ಬೆದರಿಕೆಗೆ ಮಣಿದು ಹಿಜಾಬ್‌ಗೆ ಅನುಮತಿ ನೀಡಲಾಗಿದೆ

• ಉದಯವಾಹಿನಿ ಚಿಕ್ಕಮಗಳೂರು

ರಾಜ್ಯ ಸರ್ಕಾರ ಶಾಲಾ ಕಾಲೇಜುಗಳಲ್ಲಿ ಹಿಜಾಬಿಗೆ ಅನುಮತಿ ನೀಡಿ, ಇದರೊಡನೆ ಜನಿವಾರ, ರುದ್ರಾಕ್ಷಿಗಳನ್ನೂ ಎಳೆತಂದಿದೆ. ಕೇಸರಿ ಶಾಲಿಗೆ ನಿಷೇಧ ಹೇರಿ, ಒಂದು ಸುತ್ತೋಲೆ ಹೊರಡಿಸಿದೆ.

ಭಾರತೀಯ ಜನತಾ ಪಾರ್ಟಿ ಹಿಜಾಬಿನ ವಿರೋಧಿಯಲ್ಲ. ಶಾಲೆಗಳಲ್ಲಿ ವಸ್ತ್ರ ಸಂಹಿತೆ ಇರಬೇಕೋ ಬೇಡವೊ? ಯಾವಾಗಿನಿಂದ ವಸ್ತ್ರ ಸಂಹಿತೆ ಆರಂಭವಾಯಿತು, ಯಾವ ಉದ್ದೇಶಕ್ಕೆ ಆರಂಭವಾಯಿತು ಎನ್ನುವುದರ ಕುರಿತು ಸ್ವತಃ ಶಿಕ್ಷಣ ಸಚಿವರಿಗೇ ಸ್ಪಷ್ಟತೆ, ಅರಿವು ಇದ್ದಂತಿಲ್ಲ. ಕೇವಲ ಮತೀಯ ಓಲೈಕೆಯ ರಾಜನೀತಿಯ ಭಾಗವಾಗಿ ಶಾಲೆಗಳಲ್ಲಿ ಜಾತ್ಯಾತೀತತೆಯ ಹೆಸರಿನಲ್ಲಿ ಮತೀಯತೆಗೆ ಅವಕಾಶ ನೀಡಲಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಡಾ. ರವಿ ಸಿ.ಟಿ ಹೇಳಿದರು. ಅವರು ರಾಜ್ಯ ಬಿಜೆಪಿ ಕಛೇರಿ ಜಗನ್ನಾಥ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡುತ್ತಿದ್ದರು.

ಯಾವ ಮತ ಧರ್ಮದವರಾದರೂ ಶಾಲೆಗಳಲ್ಲಿ ಎಲ್ಲಾ ಮಕ್ಕಳೂ ಸಮಾನರು. ಇದಕ್ಕಾಗಿ ಬ್ರಿಟಿಷ್ ಕಾಲದಲ್ಲಿ, ಬಳಿಕ ಮೈಸೂರು ಮಹಾರಾಜರ ಆಡಳಿತದಲ್ಲೂ ಸಮವಸ್ತ್ರ ಜಾರಿಯಲ್ಲಿತ್ತು. ಯಾವ ಸಂದರ್ಭದಲ್ಲೂ ಸಮವಸ್ತ್ರದಲ್ಲಿ ಹಿಜಾಬ್ ಪ್ರವೇಶಿಸಿರಲಿಲ್ಲ. 1983ರಲ್ಲಿ ಕರ್ನಾಟಕ ಶಿಕ್ಷಣ ಕಾಯ್ದೆಯ ಮೂಲಕ ವಸ್ತ್ರ ಸಂಹಿತೆಯನ್ನು ಸ್ಪಷ್ಟಪಡಿಸಿ, ಶಾಲಾ ಕಾಲೇಜುಗಳ ಆಡಳಿತ ಮಂಡಳಿಗಳಿಗೆ ಸ್ವಾಯತ್ತತೆ ನೀಡಲಾಗಿದೆ. ಈಗ ಸರ್ಕಾರ ಮತೀಯ ಓಲೈಕೆ ರಾಜಕಾರಣವನ್ನು ಮುಂದುವರಿಸಿದ್ದು, ಹಿಜಾಬಿಗೆ ಅನುಮತಿ ನೀಡಲಾಗಿದೆ. ಇದಕ್ಕೆ ಜಾತ್ಯಾತೀತತೆಯ ಪೊಳ್ಳು ಕಾರಣಗಳನ್ನು ನೀಡಲಾಗಿದೆ ಎಂದು ರವಿ ಹೇಳಿದರು.

1983ರಲ್ಲಿ ಯಾವ ಶಿಕ್ಷಣ ಕಾಯ್ದೆ ಜಾರಿಗೆ ಬಂದಿತ್ತೋ, ಅದನ್ನು ಮುಂದುವರಿಸಬೇಕು. ಇಲ್ಲವಾದರೆ ಸರ್ಕಾರ ಶಾಲೆಗಳನ್ನು ಮತೀಯವಾಗಿ ವಿಭಜಿಸುತ್ತದೆ. ಕಾಂಗ್ರೆಸ್ ವಂದೇ ಮಾತರಂ ಅನ್ನು ವಿಭಜಿಸಿದೆ, ಸುಪ್ರೀಂ ಕೋರ್ಟ್ ತೀರ್ಪನ್ನು ತಿದ್ದುಪಡಿ ಮಾಡಿ, ಶಾಬಾನೋ ಪ್ರಕರಣದಲ್ಲಿ ಮುಸ್ಲಿಂ ಹೆಣ್ಣುಮಕ್ಕಳಿಗೆ ಅನ್ಯಾಯ ಮಾಡಿದೆ. ಎಲ್ಲಾ ಮಕ್ಕಳನ್ನೂ ಶಾಲೆಯಲ್ಲಿ ಒಂದೇ ಎಂದು ನೋಡುವ ಭಾವನೆಗೆ ಸರ್ಕಾರ ನೋವುಂಟುಮಾಡುತ್ತಿದೆ. ದಾವಣಗೆರೆ ಚುನಾವಣೆಯಲ್ಲಿ ದೊಡ್ಡ ಪ್ರಮಾಣದಲ್ಲಿ ಮುಸ್ಲಿಂ ಮತಗಳು ಎಸ್ ಡಿಪಿಐಗೆ ಹೋಗಿದ್ದವು. ಮುಸ್ಲಿಂ ಸಂಘಟನೆಗಳು ಬಳಿಕ ಕಾಂಗ್ರೆಸ್‌ಗೆ ಒಂದಷ್ಟು ಬೆದರಿಕೆ ಒಡ್ಡಿದ್ದವು. ಇದರಲ್ಲಿ ಹಿಜಾಬ್ ವಿಚಾರವೂ ಸೇರಿತ್ತು. ಇದಕ್ಕೆ ಹೆದರಿದ ಕಾಂಗ್ರೆಸ್ ಸರ್ಕಾರ ಹಿಜಾಬ್ ಅನುಮತಿಯ ಸುತ್ತೋಲೆ ಹೊರಡಿಸಿದೆ ಎಂದರು.



**ಹಿಜಾಬಿಗೆ ಮಾತ್ರ ಅನುಮತಿ ನೀಡಿ, ಮಿನಿ ತಾಲಿಬಾನ್ ರೀತಿ ವರ್ತಿಸುತ್ತಿರುವಂತಿದೆ**

**ಸರ್ಕಾರ ಮತ್ತು ಶಿಕ್ಷಣ ಸಚಿವರು ಎಲ್ಲಾ ಮತ ಸಂಪ್ರದಾಯಗಳನ್ನು ಗೌರವಿಸುತ್ತೇವೆ ಎಂದಿಲ್ಲ. ನಮ್ಮಲ್ಲಿ ನಿರ್ವಾಣ ಸ್ಥಿತಿಯಿಂದ ದೇಹದ ಒಂದು ಅಂಗವೂ ಕಾಣದಂತೆ ವಸ್ತ್ರ ಧರಿಸುವ ಮತ ಸಂಪ್ರದಾಯಗಳಿವೆ. ಆದರೆ ಸರ್ಕಾರದ ಸುತ್ತೋಲೆಯನ್ನು ಗಮನಿಸಿದರೆ, ಹಿಜಾಬಿಗೆ ಮಾತ್ರ ಅನುಮತಿ ನೀಡಿ, ಮಿನಿ ತಾಲಿಬಾನ್ ರೀತಿ ವರ್ತಿಸುತ್ತಿರುವಂತಿದೆ. ಹಿಜಾಬಿನ ಸಂಪ್ರದಾಯ ಮನೆಗಳಲ್ಲಿ, ಅನುಮತಿ ಇರುವಲ್ಲಿರಲಿ. ಶಾಲಾ ಕಾಲೇಜುಗಳಲ್ಲಿ ಹಿಜಾಬ್ ಸಮವಸ್ತ್ರದ ಭಾಗವಲ್ಲದಿದ್ದರೆ ಅದನ್ನು ಹಾಕಲು ಸಾಧ್ಯವಿಲ್ಲ. ಯಾವುದಾದರೂ ಶಾಲಾ ಆಡಳಿತ ಮಂಡಳಿ ನಮ್ಮ ಸಮವಸ್ತ್ರದಲ್ಲಿ ಟೈ ಬದಲು ಕೇಸರಿ ಶಾಲು ಎಂದರೆ, ಅದನ್ನು ಸರ್ಕಾರ ಒಪ್ಪುತ್ತದೆಯೇ? ಎಂದು ಪ್ರಶ್ನಿಸಿದರು.**

2022ರಲ್ಲಿ ಕರ್ನಾಟಕ ಸರ್ಕಾರ ಶಾಲೆಯಲ್ಲಿ ಕೇಸರಿ ಶಾಲಿಗೂ ಅವಕಾಶವಿಲ್ಲ, ಹಿಜಾಬಿಗೂ ಅವಕಾಶವಿಲ್ಲ ಎಂದು ಆದೇಶ ಹೊರಡಿಸಿತ್ತು.

ಇದರ ವಿರುದ್ಧ ಮುಸ್ಲಿಂ ಸಂಘಟನೆಗಳು ಹೈಕೋರ್ಟ್ ಮೆಟ್ಟಿಲು ಹತ್ತಿದಾಗ, ಕೋರ್ಟ್ ಹಿಜಾಬ್ ಎನ್ನುವುದು ಇಸ್ಲಾಂ ಪ್ರಕಾರ ಕಡ್ಡಾಯವಲ್ಲ ಎಂದಿದ್ದು, ಶಾಲಾ ಸಮವಸ್ತ್ರ ಸಮಾನತೆ ಮತ್ತು ಶಿಸ್ತನ್ನು ಪ್ರತಿನಿಧಿಸಬೇಕು ಎಂದು ಸ್ಪಷ್ಟಪಡಿಸಿದೆ. ಸುಪ್ರೀಂ ಕೋರ್ಟಿನ ದ್ವಿಸದಸ್ಯ ಪೀಠದಲ್ಲಿ ಭಿನ್ನಾಭಿಪ್ರಾಯ ಮೂಡಿದ್ದರಿಂದ ದೊಡ್ಡ ಬೆಂಚಿಗೆ ಹೋಗಿದೆ. ಅದರ ತೀರ್ಪು ಬರುವಷ್ಟು ಕಾಯುವ ತಾಳ್ಮೆಯೂ ರಾಜ್ಯ ಸರ್ಕಾರಕ್ಕಿಲ್ಲ. ಜನಿವಾರ, ರುದ್ರಾಕ್ಷಿ ಸಮವಸ್ತ್ರದ ಒಳಗಿರುತ್ತದೆಯೇ ಹೊರತು ಹೊರಗಿರುವುದಿಲ್ಲ. ಸರ್ಕಾರದ ಸುತ್ತೋಲೆ ಮತೀಯವಾದಕ್ಕೆ ಕಾರಣವಾಗಿದೆ. ಶಾಲೆ ಕಾಲೇಜುಗಳಲ್ಲಿ, ನ್ಯಾಯಾಲಯದಲ್ಲಿ, ಎನ್‌ಸಿಸಿಯಲ್ಲಿ, ಸೇವಾದಳದಲ್ಲಿ, ಎಲ್ಲದರಲ್ಲೂ ಸಮವಸ್ತ್ರವಿದೆ. ಮೊದಲಿಗೆ ಸರ್ಕಾರ ಇದನ್ನು ಅರ್ಥ ಮಾಡಿಕೊಳ್ಳಲಿ ಎಂದು ರವಿ ಸಲಹೆ ನೀಡಿದರು.

# ಬೆಳೆ ಹಾನಿಗೆ ಶೀಘ್ರ ಪರಿಹಾರ ಕಲ್ಪಿಸಲು ಅರಣ್ಯ ಇಲಾಖೆ ಕ್ರಮ

• ಉದಯವಾಹಿನಿ ಅರೇಹಳ್ಳಿ

ಬೇಲೂರು ತಾಲ್ಲೂಕು ವ್ಯಾಪ್ತಿಯಲ್ಲಿ ವನ್ಯಜೀವಿ ದಾಳಿಯಿಂದ ಉಂಟಾದ ಅಪಾರ ಬೆಳೆ ಹಾನಿಗೆ ಶೀಘ್ರ ಪರಿಹಾರ ಕಲಿಸಲು ಅರಣ್ಯ ಇಲಾಖೆ ಕ್ರಮಕೈಗೊಂಡಿದ್ದು, ಪ್ರಸಕ್ತ ಸಾಲಿನಲ್ಲಿ 3.99 ಕೋಟಿ ರೂ.ಗಳನ್ನು ಸಂತ್ರಸ್ತರ ಖಾತೆಗೆ ಜಮೆ ಮಾಡಲಾಗಿದೆ. ಈ ಭಾಗದಲ್ಲಿ ಮಾನವ-ವನ್ಯಜೀವಿ ಸಂಘರ್ಷ ಹೆಚ್ಚಾಗಿದ್ದು ಫಸಲು ನಷ್ಟ ಹಾಗೂ ಪ್ರಾಣ ಹಾನಿ ಸಂಭವಿಸುತ್ತಿದೆ. ಈ ಹಿನ್ನೆಲೆಯಲ್ಲಿ ತಾಲ್ಲೂಕು ಅರಣ್ಯಾಧಿಕಾರಿಗಳು ಹೆಚ್ಚು ಮುತುವರ್ಜಿ ವಹಿಸಿ ತ್ವರಿತವಾಗಿ ಅರ್ಜಿಗಳನ್ನು ವಿಲೇವಾರಿ ಮಾಡುತ್ತಿದ್ದಾರೆ. ಪ್ರಸಕ್ತ ಸಾಲಿನಲ್ಲಿ 3,99,24,378 ರೂ.ಗಳನ್ನು ನೊಂದ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮಾವಣೆ ಮಾಡಲಾಗಿದೆ.

2025-26 ನೇ ಸಾಲಿನಲ್ಲಿ 2800 ಅರ್ಜಿ ಸ್ವೀಕಾರವಾಗಿದ್ದು, 2500 ಪ್ರಕರಣಕ್ಕೆ ಹಣ ಬಿಡುಗಡೆಯಾಗಿದೆ. ಇನ್ನು 300 ಅರ್ಜಿ ಬಾಕಿ ಇದ್ದು, ಮುಂದಿನ ವಾರದಲ್ಲಿ ಹಣ ಬಿಡುಗಡೆ ಮಾಡಲಾಗುವುದು ಎಂದು ಆರ್‌ಎಫ್‌ಒ ಯತೀಶ್ ತಿಳಿಸಿದ್ದಾರೆ.

**ಬೆಳೆ ಹಾನಿ ಪ್ರಕರಣ:** ಬೇಲೂರು ತಾಲ್ಲೂಕಿನ ಅರೇಹಳ್ಳಿ


ಉದಯವಾಹಿನಿ ಚಿತ್ರ

**ವನ್ಯಜೀವಿ ದಾಳಿಯಿಂದ ಅಪಾರ ಫಸಲು ನಷ್ಟ**

ಹಾಗೂ ಬಿಕ್ಕೋಡು ವ್ಯಾಪ್ತಿಯಲ್ಲಿ ಕಾಡಾನೆ ದಾಳಿಯಿಂದ ಕಾಫಿ, ಮೆಣಸು, ಬಾಳೆ, ಏಲಕ್ಕಿ, ಅಡಕೆ, ಜೋಳ ಹಾಗೂ ಇನ್ನಿತರ ಪ್ರಮುಖ ಬೆಳೆಗಳು ನಾಶವಾಗಿದ್ದು, 2020-21ರಿಂದ 26ರವರೆಗಿನ 6 ವರ್ಷಗಳ ಕಾಲಾವಧಿಯಲ್ಲಿ 4730 ಬೆಳೆ ಹಾನಿ ಪ್ರಕರಣ ದಾಖಲಾಗಿದೆ. ಇದಕ್ಕೆ ಒಟ್ಟು 6,87,58,335 ರೂ. ಪರಿಹಾರ ವಿತರಿಸಲಾಗಿದೆ. ವನ್ಯಜೀವಿಗಳಿಂದ 58 ಜಾನುವಾರು, 12 ಜನ ಮೃತಪಟ್ಟಿದ್ದು, 15 ಮಂದಿ ಗಾಯಗೊಂಡ ವರದಿಯಾಗಿದೆ. ಎಲ್ಲಾ ಪ್ರಕರಣಗಳಿಂದ ಇದುವರೆಗೂ 7,75,85,935 ರೂ. ಪರಿಹಾರ ನೀಡಲಾಗಿದೆ.

**ಪರಿಹಾರದ ಹಣ ದುಪ್ಪಟ್ಟು:** ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುತ್ತಿರುವ ಮಾನವ ಪ್ರಾಣ ಹಾನಿ ಹಾಗೂ ಬೆಳೆ ಹಾನಿ ಪ್ರಕರಣಗಳಲ್ಲಿ 2016 ರಿಂದ ಪಾವತಿಸಲಾಗುತ್ತಿದ್ದ ಪರಿಹಾರ ಧನವನ್ನು (ಎಕ್ಸ್‌ಗ್ರೇಷಿಯಾ) 2022-23ನೇ ಸಾಲಿನಿಂದ ದುಪ್ಪಟ್ಟು ಮಾಡಲಾಗಿದೆ.

ಪುಷ್ಪ ಕೃಷಿ, ಹಣ್ಣಿನ ಗಿಡ, ತರಕಾರಿ, ವಾಣಿಜ್ಯ ಹಾಗೂ ಆಹಾರ ಬೆಳೆಗಳನ್ನು ಒಳಗೊಂಡು ಒಟ್ಟು 64 ತರಹೇವಾರಿ ಬೆಳೆಗಳು ಪರಿಹಾರದ ವ್ಯಾಪ್ತಿಗೆ ಒಳಪಡುತ್ತದೆ. ಪರಿಹಾರ ಧನದ ಗರಿಷ್ಠ ಮಿತಿಯನ್ನು 50 ಸಾವಿರದಿಂದ 1 ಲಕ್ಷ ರೂ.ವರೆಗೆ ಹೆಚ್ಚಿಸಲಾಗಿದ್ದು, ನಾಶವಾದ ಬೆಳೆ ಪ್ರಮಾಣ ಏರಿಕೆಯಾದಂತೆ ಎಕ್ಸ್‌ಗ್ರೇಷಿಯಾ (ದಯಾತ್ಮಕ ಧನ) ಇಳಿಕೆಯಾಗುವುದರಿಂದ ಸಂತ್ರಸ್ತ ರೈತರು ಬೆಳೆ ನಷ್ಟ ದಾಖಲು ಮಾಡುವ ಮುನ್ನ ಬಹಳ ಎಚ್ಚರಿಕೆ ವಹಿಸುವುದು ಅಗತ್ಯವಾಗಿದೆ.

# ಬಸ್‌ಗಳು ನಿಲುಗಡೆಯಾಗದ್ದಕ್ಕೆ ಆಕ್ರೋಶ

• ಉದಯವಾಹಿನಿ ಕೊಪ್ಪಳ

ತಾಲ್ಲೂಕಿನ ಜಬ್ಬಲಗುಡ್ಡದಲ್ಲಿ ಎಲ್ಲಾ ಸರ್ಕಾರಿ ಬಸ್‌ಗಳು ನಿಲುಗಡೆಯಾಗದ್ದಕ್ಕೆ ಆಕ್ರೋಶಗೊಂಡ ಗ್ರಾಮಸ್ಥರು ಸುಮಾರು ಒಂದೂವರೆ ತಾಸು ಎಲ್ಲಾ ಬಸ್‌ಗಳನ್ನು ತಡೆದು ದಿಢೀರ್ ಪ್ರತಿಭಟನೆ ನಡೆಸಿದರು. ಕೊಪ್ಪಳ-ಗಂಗಾವತಿ ಮಾರ್ಗಮಧ್ಯದಲ್ಲಿರುವ ಜಬ್ಬಲಗುಡ್ಡದಿಂದ ನಿತ್ಯ ನೂರಾರು ಕಾಲೇಜು ವಿದ್ಯಾರ್ಥಿಗಳು ಓದಲು ಜಿಲ್ಲಾಕೇಂದ್ರಕ್ಕೆ ಬರುತ್ತಾರೆ.

ಕೂಲಿ ಕೆಲಸ ಅಥವಾ ಇನ್ನಿತರ ದೈನಂದಿನ ಕೆಲಸಗಳಿಗಾಗಿ ಜನ ಓಡಾಡುವುದು ಸಾಮಾನ್ಯ. ಆದರೆ ಗಂಗಾವತಿ-ಕೊಪ್ಪಳ ನಡುವೆ ಓಡಾಡುವ ಅನೇಕ ಬಸ್‌ಗಳಲ್ಲಿ ಕೆಲ ಬಸ್‌ಗಳು ಮಾತ್ರ ನಿಲುಗಡೆಯಾಗುತ್ತಿದ್ದವು. ಅದಕ್ಕೂ ನಿಶ್ಚಿತ ಸಮಯವಿರಲಿಲ್ಲ, ಇದರಿಂದ ಆಕ್ರೋಶಗೊಂಡ ಗ್ರಾಮಸ್ಥರು ಬಸ್‌ಗಳನ್ನು ತಡೆದು ಪ್ರತಿಭಟಿಸಿದರು. ಇದಕ್ಕೂ ಮೊದಲು ಗ್ರಾಮದ ವಿದ್ಯಾರ್ಥಿಗಳು ಬಸ್ ನಿಲ್ಲಿಸುವಂತೆ ಕೈ ಮಾಡಿದಾಗ ಚಾಲಕ ನಿಲ್ಲಿಸದೇ ಚಲಾಯಿಸಿದ್ದಾನೆ. ಇದು ಕೂಡ ಗ್ರಾಮಸ್ಥರ ಆಕ್ರೋಶಕ್ಕೆ ಕಾರಣವಾಯಿತು ಎಂದು ಸ್ಥಳೀಯರು ಮಾಹಿತಿ ನೀಡಿದರು.

ಬೆಳಿಗ್ಗೆ 9ರಿಂದ 9.30ರ ಸುಮಾರಿಗೆ ಆರಂಭವಾದ ಪ್ರತಿಭಟನೆ ಸುಮಾರು ಒಂದೂವರೆ ತಾಸು ನಡೆಯಿತು. ವೇಗದೂತ, ಎಲ್ಲಾ ಕಡೆ ನಿಲುಗಡೆ ಹಾಗೂ ತಡೆರಹಿತ ಹೀಗೆ ಎಲ್ಲಾ ಬಸ್‌ಗಳನ್ನು ಗ್ರಾಮಸ್ಥರು ತಡೆದರು. ಕೆಲ ಹೊತ್ತಿನಲ್ಲಿ ಸ್ಥಳಕ್ಕೆ ಬಂದ ಕೊಪ್ಪಳ ಮತ್ತು ಗಂಗಾವತಿ ಬಸ್ ಡಿಪೊಗಳ ಮುಖ್ಯಸ್ಥರು ಪ್ರತಿಭಟನಾ ನಿರತರನ್ನು ಮನವೊಲಿಸುವ ಪ್ರಯತ್ನ ಮಾಡಿದರು. ನಿಮ್ಮ ಬೇಡಿಕೆಯಂತೆ ಬಸ್ ನಿಲುಗಡೆಗೆ ಕ್ರಮ ವಹಿಸಲಾಗುವುದು, ಈ ಕುರಿತು ಮೇಲಧಿಕಾರಿಗಳ ಜೊತೆ ಚರ್ಚಿಸಲಾಗುವುದು ಎಂದು ಭರವಸೆ ನೀಡಿದ ಬಳಿಕ ಪ್ರತಿಭಟನೆ ವಾಪಸ್ ಪಡೆದುಕೊಂಡರು. ಕೊಪ್ಪಳ ಗ್ರಾಮೀಣ ಠಾಣೆಯ ಸಿಪಿಐ ಜಯಪ್ರಕಾಶ ಸ್ಥಳಕ್ಕೆ ಭೇಟಿ ನೀಡಿದರು.

# ಗ್ರಾಮಗಳ ಅಭಿವೃದ್ಧಿಗಾಗಿ ಮನರೇಗಾ ಅಡಿ ಕೆಲಸ ನಿರ್ವಹಿಸಿ: ಬಿರಾದಾರ

## ಬೇಸಿಗೆ ಅವಧಿಯಲ್ಲಿ ನರೇಗಾ ಕೂಲಿಕಾರರಿಗೆ ವಲಸೆಯನ್ನು ತಪ್ಪಿಸಿ ನಿರಂತರವಾಗಿ ಅವರ ಗ್ರಾಮದಲ್ಲಿಯೇ ಉದ್ಯೋಗ ಒದಗಿಸುವುದು

• ಉದಯವಾಹಿನಿ ವಿಜಯಪುರ

ತಿಕೋಟಾ ತಾಲ್ಲೂಕಿನ ಬಿಜ್ಜರಗಿ ಗ್ರಾಮ ಪಂಚಾಯತಿಯಲ್ಲಿ ರೋಜಗಾರ ದಿವಸ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಪಂಚಾಯತಿ ಅಭಿವೃದ್ಧಿ ಅಧಿಕಾರಿ ರಾವಸಾಬ ಬಿರಾದಾರ ಮಾತನಾಡಿ, ಈ ಬೇಸಿಗೆ ಅವಧಿಯಲ್ಲಿ ನರೇಗಾ ಕೂಲಿಕಾರರಿಗೆ ವಲಸೆಯನ್ನು ತಪ್ಪಿಸಿ ನಿರಂತರವಾಗಿ ಅವರ ಗ್ರಾಮದಲ್ಲಿಯೇ ಉದ್ಯೋಗ ಒದಗಿಸುವುದು ಆ ಮೂಲಕ ಗ್ರಾಮೀಣ ಆಸ್ತಿಗಳ ರಚನೆ ಮಾಡುವುದು, ಜಲ ಸಂರಕ್ಷಣೆ ಮಾಡಿ ಅಂತರ್ಜಲ ಮಟ್ಟ ವೃದ್ಧಿಸುವುದು, ಅರಣ್ಯೀಕರಣ ಕಾಮಗಾರಿಗಳು, ಶಾಲಾ ಅಭಿವೃದ್ಧಿ ಕಾಮಗಾರಿಗಳನ್ನು ಯಶಸ್ವಿಯಾಗಿ ನಿರ್ಮಾಣ ಮಾಡುವ ಉದ್ದೇಶದಿಂದ ಈ ರೋಜಗಾರ ದಿವಸ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು. ನರೇಗಾ ಕೂಲಿಕಾರರಿಗೆ ತೊಂದರೆಯಾಗದಂತೆ ಕೂಲಿಯಾಧಾರಿತ ಸಮುದಾಯ ಕಾಮಗಾರಿಗಳಲ್ಲಿ ಹೆಚ್ಚಿನ ಕೆಲಸ ನೀಡಲಾಗುತ್ತದೆ. ಅದರ ಜೊತೆ-ಜೊತೆಗೆ ವೈಯಕ್ತಿಕ ಕಾಮಗಾರಿಗಳಾದ ಕೃಷಿಹೊಂಡ, ತೋಟಗಾರಿಕೆ ಬೆಳೆಗಳಾದ ದ್ರಾಕ್ಷಿ, ದಾಳಿಂಬೆ, ಮಾವು, ಚಿಕ್ಕು, ನಿಂಬೆ, ನುಗ್ಗೆ ಇತರೆ ಬೆಳೆಗಳನ್ನು ಬೆಳೆಯಲು ನರೇಗಾದಡಿ ಕೂಲಿ ಮೊತ್ತ ನೀಡುತ್ತಿದೆ. ಇಲ್ಲಿಯೂ ಕೆಲಸ ಮಾಡಿ ಕೂಲಿ ಪಡೆಯಲು ಅವಕಾಶವನ್ನು ಕಲ್ಪಿಸಲಾಗಿದೆ. ವಿಶೇಷಚೇತನರಿಗೆ ಶೇ.50ರಷ್ಟು ಕೆಲಸದಲ್ಲಿ ರಿಯಾಯಿತಿ ನೀಡಲಾಗುತ್ತಿದೆ ಎಂದರು. ಈ ಬಗ್ಗೆ ಕೂಲಿಕಾರರಿಗೆ ಹೆಚ್ಚಿನ ಅರಿವು ಮೂಡಿಸಿ ಯೋಜನೆಯತ್ತ ಕರೆ ತಂದು, ಎಲ್ಲಾ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಹೆಚ್ಚಿನ ಕೂಲಿಕಾರರನ್ನು ಸಂಘಟಿಸುವ ಕಾರ್ಯ ಯೋಜನೆಯನ್ನು ಹಾಕಿಕೊಳ್ಳಲಾಗಿದೆ. ಹೀಗಾಗಿ ಮನರೇಗಾ ಯೋಜನೆಯಡಿ ಎಲ್ಲಾ ನೊಂದಾಯಿತ ಕೂಲಿಕಾರರು ಕೆಲಸ ನಿರ್ವಹಿಸಲು ಮುಂದೆ ಬರಬೇಕು. ಆ ಮೂಲಕ ತಮ್ಮ ಗ್ರಾಮಗಳ ಅಭಿವೃದ್ಧಿಗೆ ಸಹಕರಿಸಬೇಕು ಎಂದರು.


ಉದಯವಾಹಿನಿ ಚಿತ್ರ

**ಕೂಲಿಕಾರರಿಗೆ ಹೆಚ್ಚಿನ ಅರಿವು**

ತಾಲ್ಲೂಕು ಮಾಹಿತಿ, ಶಿಕ್ಷಣ ಮತ್ತು ಸಂವಹನ ಸಂಯೋಜಕ ಕಲ್ಲಪ್ಪ ನಂದರಗಿ ಮತನಾಡಿ ಬೇಸಿಗೆ ಅವಧಿಯಲ್ಲಿ ಎಲ್ಲಾ ಗ್ರಾಮ ಪಂಚಾಯತಿ ವತಿಯಿಂದ ಪ್ರತಿ ಮನೆ-ಮನೆಗೆ ಭೇಟಿ ನೀಡಿ ಯೋಜನೆಯ ಕುರಿತು ಮಾಹಿತಿ ನೀಡಲಾಗುತ್ತಿದೆ ಜೊತೆಗೆ ಸ್ವ-ಸಹಾಯ ಸಂಘದ ಸಭೆ, ರೋಜಗಾರ ದಿವಸ್, ವಿಶೇಷ ಗ್ರಾಮ ಸಭಾ ಸೇರಿದಂತೆ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಸಣ್ಣ-ಅತೀ ಸಣ್ಣ ರೈತ್ತರಿಗೆ ಅವಶ್ಯಕವಿರುವ ವೈಯಕ್ತಿಕ ಕಾಮಗಾರಿಗಳನ್ನು ನೀಡಲು ವ್ಯವಸ್ಥೆ ಮಾಡಲಾಗುತ್ತಿದೆ. ಪ್ರತಿ ವರ್ಷ ಬೇಸಿಗೆ ಅವಧಿಯಲ್ಲಿ ಗ್ರಾಮೀಣ ಪ್ರದೇಶದ ಜನರು ತಮ್ಮ ಊರಲ್ಲಿ ಕೆಲಸ ಸಿಗದ ಕಾರಣದಿಂದ ನಗರ ಪ್ರದೇಶಗಳಿಗೆ ವಲಸೆ ಹೋಗುವುದು ಸಾಮಾನ್ಯ ಎಂದರು.

**ಗ್ರಾಮ ಪಂಚಾಯತಿ ಸಿದ್ಧ**

**ಬೇಸಿಗೆ ಅವಧಿಯಲ್ಲಿ ಮಾತ್ರವಲ್ಲದೇ ಕೂಲಿ ಕೇಳಿ ಬರುವ ಎಲ್ಲಾ ಕೂಲಿಕಾರರಿಗೆ ಕೆಲಸ ನೀಡಲು ಗ್ರಾಮ ಪಂಚಾಯತಿ ಸಿದ್ಧವಾಗಿದೆ. ಕೂಲಿ ಕೇಳಿ ಬರುವ ಕೂಲಿಕಾರರಿಗೆ 15 ದಿನಗಳಲ್ಲಿ ಕೆಲಸ ನೀಡುವ ನಿಯಮವಿದೆ. ಆದರೆ ನಾವು ಕೇವಲ 3-4 ದಿನದಲ್ಲಿಯೇ ಕೆಲಸ ನೀಡುತ್ತೇವೆ. ಆದಕಾರಣ ನಮ್ಮೂರಿನ ಕೂಲಿಕಾರರು ಹೆಚ್ಚಿನ ಸಂಖ್ಯೆಯಲ್ಲಿ ಈ ಯೋಜನೆಯಡಿ ದುಡಿಯಲು ಬರಬೇಕು ಎಂದರು. ಕಳೆದ ವರ್ಷ ನಮ್ಮ ಗ್ರಾಮ ಪಂಚಾಯತಿಯಿಂದ ಅತ್ಯುತ್ತಮವಾದ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗಿದೆ. ಜಿಲ್ಲೆಯಲ್ಲಿಯೇ ಮಾದರಿಯಾಗುವಂತಹ ಕಾಮಗಾರಿಗಳನ್ನು ಯಶಸ್ವಿಯಾಗಿ ಮಾಡಿದ್ದೇವೆ ಇದೆಲ್ಲವೂ ತಮ್ಮ ಸಹಕಾರದಿಂದ ಆಗಿದೆ ಎಂದರು.**

## ಮಿನಿ ನ್ಯೂಸ್

### ಎರಡು ನಕಲಿ ಕ್ಲೀನಿಕ್ ಸೀಜ್

• ಉದಯವಾಹಿನಿ, ಬೀದರ

ಕಮಲನಗರದಲ್ಲಿ ಗೌತಮ ಸಮದರ ಇವರು ಗಣೇಶ ಮೇಡಿಕಲ್‌ನಲ್ಲಿ ಕ್ಲಿನಿಕ್ ನಡೆಸುತ್ತಿರುತ್ತಾರೆ ಹಾಗೂ ಸಾಯಿಲಕ್ಷ್ಮೀ ಆಯುರ್ವೇದ ಆಸ್ಪತ್ರೆ ಇಲ್ಲಿ ಸುಜಲ್ ಕುಮಾರ ಸೇನ್ ಈ ಇಬ್ಬರೂ ಯಾವುದೇ ಅರ್ಹ ವೈದ್ಯಕೀಯ ಪದವಿ ಪಡೆಯದೆ ವೈದ್ಯ ವೃತ್ತಿ ನಡೆಸುತ್ತಿರುವುದು ತಿಳಿದು ಬಂದಿರುವುದರಿಂದ ಸದರಿಯವರು ನಡೆಸುತ್ತಿರುವ ಕ್ಲಿನಿಕ್‌ಗಳ ಮೇಲೆ ಕಮಲನಗರ ತಹಸಿಲ್ದಾರ್ ಅಮಿತ್ ಕುಲಕರ್ಣಿ, ಜಿಲ್ಲಾ ಕೆ.ಪಿ.ಎಂ.ಇ ನೋಡಲ್ ಅಧಿಕಾರಿಗಳು ಡಾ. ದಿಲೀಪ ಡೋಂಗ್ರೆ, ತಾಲ್ಲೂಕಾ ಆರೋಗ್ಯ ಅಧಿಕಾರಿಗಳು ಔರಾದ(ಬಿ) ಡಾ. ಅನೀಲ ಕುಮಾರ, ಕೆ.ಪಿ.ಎಂ.ಇ ವಿಷಯ ನಿರ್ವಾಹಕರು ಮಹೇಶ್ವರ ರೆಡ್ಡಿ ಹಾಗೂ ಪೋಲಿಸ್ ಸಿಬ್ಬಂದಿಯವರನ್ನೊಳಗೊಂಡ ತಂಡದೊಂದಿಗೆ ಆಕಸ್ಮಿಕ ದಾಳಿ ನಡೆಸಿ ಕ್ಲಿನಿಕ್‌ಗಳನ್ನು ಸೀಜ್ ಮಾಡಲಾಗಿದೆ.

ಈ ಹಿಂದೆ 2023ರಲ್ಲಿ ಗೌತಮ ಸಮದರ ಹಾಗೂ ಸುಜಲ್ ಕುಮಾರ ಸೇನ್ ಇವರ ಕ್ಲಿನಿಕ್‌ಗಳನ್ನು ಸೀಜ್ ಮಾಡಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಕೆಪಿಎಂಇ ನೋಂದಣಿ ಮತ್ತು ಕುಂದುಕೊರತೆ ಪ್ರಾಧಿಕಾರದಲ್ಲಿ ಮಂಡಿಸಿದಾಗ ಜಿಲ್ಲಾಧಿಕಾರಿಗಳು ತಲಾ 25000 ದಂಡ ವಿಧಿಸಿ ಆದೇಶಿಸಿರುತ್ತಾರೆ.

ಆದರೂ ಈ ಇಬ್ಬರೂ ಪುನಃ ವೈದ್ಯ ವೃತ್ತಿ ನಡೆಸುತ್ತಿರುವುದರಿಂದ ಮುಂದಿನ ಕ್ರಮಕ್ಕಾಗಿ ಜಿಲ್ಲಾಧಿಕಾರಿಯವರಲ್ಲಿ ಸಲ್ಲಿಸಲಾಗುವುದೆಂದು ಬೀದರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬೀದಿನಾಯಿ ಆಶ್ರಯತಾಣಕ್ಕೆ ಭೂಮಿ: ರೂ.33.93 ಲಕ್ಷದ ಕ್ರಿಯಾ ಯೋಜನೆಗೆ ಡಿಸಿ ಸೂಚನೆ

• ಉದಯವಾಹಿನಿ, ಕುಂದಾಪುರ

ಕಾರ್ಕಳ ಹಾಗೂ ಕಾಪು ಪುರಸಭೆ, ಬೈಂದೂರು ಹಾಗೂ ಸಾಲಿಗ್ರಾಮ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಒಟ್ಟು 11.91 ಎಕರೆ ಜಮೀನು ಮಂಜೂರು ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಸ್ವರೂಪಾ ಟಿ.ಕೆ. ಹೇಳಿದರು. ಮಣಿಪಾಲದ ರಜತಾದ್ರಿಯ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆಶ್ರಯ ತಾಣಕ್ಕಾಗಿ ರೂ.33.93 ಲಕ್ಷದ ಕ್ರಿಯಾ ಯೋಜನೆಯನ್ನು ಆದಷ್ಟು ಶೀಘ್ರ ಪೂರ್ಣಗೊಳಿಸುವಂತೆ ಸೂಚಿಸಿದರು.

ಬೀದಿ ನಾಯಿಗಳ ಹಾವಳಿ ತಡೆಗಟ್ಟುವ ನಿಟ್ಟಿನಲ್ಲಿ ಸುಪ್ರೀಂ ಕೋರ್ಟ್ ಹೊರಡಿಸಿರುವ ಆದೇಶದಲ್ಲಿರುವ ಮಾರ್ಗಸೂಚಿಗಳನ್ನು ಜಿಲ್ಲೆಯಾದ್ಯಂತ ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ಮುಂದಾಗಬೇಕು ಎಂದು ಸೂಚನೆ ನೀಡಿದರು. ಜಿಲ್ಲೆಯ ನಗರ ಪ್ರದೇಶದಲ್ಲಿ 7,197 ಹಾಗೂ ಗ್ರಾಮೀಣ ಭಾಗದಲ್ಲಿ 13,185 ಸೇರಿದಂತೆ ಸುಮಾರು 20,382 ಬೀದಿನಾಯಿಗಳನ್ನು ಗುರುತಿಸಲಾಗಿದೆ ಎಂದು ಹೇಳಿದರು. ಜಿಲ್ಲೆಯ ನಗರ ಭಾಗದಲ್ಲಿರುವ ಸರ್ಕಾರಿ ಮತ್ತು ಖಾಸಗಿ ವಿದ್ಯಾಸಂಸ್ಥೆಗಳು, ಸರ್ಕಾರಿ ಕಚೇರಿಗಳು, ಬಸ್ ಹಾಗೂ ರೈಲು ನಿಲ್ದಾಣ, ಆಸ್ಪತ್ರೆಗಳು ಹಾಗೂ ಕ್ರೀಡಾಂಗಣ ಸೇರಿದಂತೆ ಒಟ್ಟು 253 ಸಂಸ್ಥೆಗಳ ವ್ಯಾಪ್ತಿಯಲ್ಲಿ ಒಟ್ಟು 446 ಬೀದಿನಾಯಿಗಳನ್ನು ಗುರುತಿಸಲಾಗಿ ಎಂದು ಹೇಳಿದರು.

### ವಿದ್ಯುತ್ ಸಮಸ್ಯೆ ಬಗೆಹರಿಸಲು ಮನವಿ

• ಉದಯವಾಹಿನಿ, ಆಲ್ದೂರು

ಪಟ್ಟಣದ ಮೆಸ್ಕಾಂ ಉಪವಿಭಾಗ ಕಚೇರಿಯಲ್ಲಿ ಜನಸಂಪರ್ಕ ಸಭೆ ನಡೆಯಿತು. ವರ್ಗ ರಸ್ತೆಯ ದೊಣಗುಡಿಗೆ ಗ್ರಾಮಸ್ಥರು ಮಾತನಾಡಿ, 7 ತಿಂಗಳಿಂದ ವಿದ್ಯುತ್ ಸಮಸ್ಯೆ ಉಂಟಾಗುತ್ತಿದ್ದು, ವಿದ್ಯಾರ್ಥಿಗಳ ಕಲಿಕೆಗೆ ತೊಂದರೆಯಾಗುತ್ತಿದೆ. ಲೈಲ್‌ನಲ್ಲಿ ಕೆಲವು ಫೀಡರ್‌ಗಳನ್ನು ಒಟ್ಟಿಗೆ ಸೇರಿಸಿದ ಬಳಿಕ ಈ ಸಮಸ್ಯೆ ಎದುರಾಗಿದೆ ಎಂದು ದೂರಿದರು. ಇದಕ್ಕೆ ಪ್ರತಿಕ್ರಿಯಿಸಿದ ಕಾರ್ಯನಿರ್ವಾಹಕ ಇಂಜಿನಿಯರ್ ಮಾರುತಿ, 'ಸಮಸ್ಯೆ ಸರಿಪಡಿಸಲು ಒಂದೂವರೆ ಕಿ.ಮೀ. ವಿದ್ಯುತ್ ಲೈನ್ ಲಿಂಕ್ ಮಾಡುವ ಅವಶ್ಯಕತೆಯಿದ್ದು, ಎರಡು ತಿಂಗಳ ಕಾಲಾವಕಾಶ ಬೇಕಾಗುತ್ತದೆ' ಎಂದು ತಿಳಿಸಿದರು. ಬನ್ನೂರು ಗ್ರಾಮದಿಂದ ಶಂಕರ್ ಫಾಲ್ಸ್‌ವರೆಗೆ ಕಾಪರ್ ಲೈನ್ ಬದಲಿಸಿ ರಸ್ತೆ ಬದಿಯಲ್ಲಿ ಗುಣಮಟ್ಟದ ಲೈನ್ ಸಂಪರ್ಕ ಕಲ್ಪಿಸಿ ಐದಳ್ಳಿ ಗ್ರಾಮದಲ್ಲಿ ವಿದ್ಯುತ್ ಪರಿವರ್ತಕ ಬದಲಿಸಬೇಕು' ಎಂದು ಸುಪ್ರೀತ್ ಅರೇನೂರು ಒತ್ತಾಯಿಸಿದರು. 'ಮಳೆಗಾಲ ಆರಂಭವಾಗಿರುವುದರಿಂದ ವಿದ್ಯುತ್ ತಂತಿಗೆ ತಾಗುವ ಮರದ ಕೊಂಬೆಗಳನ್ನು ತೆರವುಗೊಳಿಸಲು ಸೂಚಿಸಲಾಗಿದೆ. ಮಳೆಗಾಲವನ್ನು ಎದುರಿಸಲು ಇಲಾಖೆ ವತಿಯಿಂದ ಸಿದ್ಧತೆ ನಡೆಸಲಾಗಿದೆ' ಎಂದು ಇಂಜಿನಿಯರ್ ಮಂಜುನಾಥ್ ತಿಳಿಸಿದರು.

ನಟರಾಜು ಎಚ್. ಅವರು, ಕಠಾರದಹಳ್ಳಿ ಗ್ರಾಮದ ಕಡೆಗಳಲ್ಲಿ ಎರಡು ವಿದ್ಯುತ್ ಪರಿವರ್ತಕಗಳಿಗೆ ಮನವಿ ಮಾಡಲಾಗಿತ್ತು. ಅದನ್ನು ಇನ್ನೂ ಪೂರೈಸಿಲ್ಲ ಎಂದರು. ರೂ. 10 ಲಕ್ಷ ವೆಚ್ಚದ ವಿದ್ಯುತ್ ಪರಿವರ್ತಕಕ್ಕೆ ಈಗಾಗಲೇ ಬೇಡಿಕೆ ಸಲ್ಲಿಸಲಾಗಿದೆ ಎಂದು ಕಾರ್ಯನಿರ್ವಾಹಕ ಇಂಜಿನಿಯರ್ ಮಾರುತಿ ತಿಳಿಸಿದರು. ಕೃಪಾಕ್ಷ ಕೋಟ್ಯಾನ್, ಇಲಾಖೆಯಲ್ಲಿನ ಯೋಜನೆಗಳ ಮಾಹಿತಿ ಪಡೆದುಕೊಂಡರು.

### ವಾಕಿಂಗ್ ಟ್ರ್ಯಾಕ್ ಕಾಮಗಾರಿ ವಿಳಂಬ: ನಿವಾಸಿಗಳಿಂದ ರಸ್ತೆ ತಡೆಗೆ ಎಚ್ಚರಿಕೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೀದರ

ನಗರದ ಶಿವನಗರ ಪ್ರದೇಶದಲ್ಲಿರುವ ಸಾರ್ವಜನಿಕರ ವಾಕಿಂಗ್ ಸ್ಥಳದ ಅಭಿವೃದ್ಧಿ ಕಾಮಗಾರಿ ವಿಳಂಬವಾಗುತ್ತಿರುವ ಹಿನ್ನಲೆ ಸ್ಥಳೀಯ ನಿವಾಸಿಗಳು ರಸ್ತೆ ತಡೆ ಎಚ್ಚರಿಕೆ ಈ ಕುರಿತು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹಾಗೂ ಜಿಲ್ಲಾ ನಗರಾಭಿವೃದ್ಧಿ ಕೋಶದ ಅಧಿಕಾರಿ ಅರುಣಕುಮಾರ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಕಳೆದ ಹಲವು ತಿಂಗಳುಗಳಿಂದ ಚರಂಡಿ ಹಾಗೂ ಫುಟ್ಪಾತ್ ನಿರ್ಮಾಣ ಕಾಮಗಾರಿ ಪ್ರಾರಂಭವಾಗಿದ್ದರೂ ಇದುವರೆಗೆ ಪೂರ್ಣಗೊಂಡಿಲ್ಲ. ಇದರಿಂದ ಶಿವನಗರ ಬಡಾವಣೆಯ ಸಾರ್ವಜನಿಕರು, ಹಿರಿಯ ನಾಗರಿಕರು ಹಾಗೂ ಮಹಿಳೆಯರು ಪ್ರತಿದಿನ ವಾಕಿಂಗ್ ಮಾಡಲು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ನಿವಾಸಿಗಳು ದೂರಿದ್ದಾರೆ. ಮಹಾನಗರ ಪಾಲಿಕೆ ಹಾಗೂ ಜಿಲ್ಲಾಡಳಿತವು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ಶೀಘ್ರಗತಿಯಲ್ಲಿ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಜೊತೆಗೆ ಕಾಮಗಾರಿಯಲ್ಲಿ ನಿರ್ಲಕ್ಷ್ಯ ತೋರಿದ ಗುತ್ತಿಗೆದಾರರ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. ಇನ್ನೂ ಒಂದು ವಾರದೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಬೇಕು ಎಂದು ಶಿವನಗರ ಬಡಾವಣೆಯ ಹಿರಿಯರು ಹಾಗೂ ನಿವಾಸಿಗಳು ಆಗ್ರಹಿಸಿದ್ದಾರೆ, ಇಲ್ಲವಾದಲ್ಲಿ ಶಿವನಗರ, ಗುರುನಾನಕ ನಗರ, ವೈಷ್ಣವಿ ಕಾಲೋನಿ ಹಾಗೂ ಭವಾನಿ ಕಾಲೋನಿಯ ನಿವಾಸಿಗಳು ಶಿವನಗರ ಸಿಗ್ನಲ್ ಬಳಿ ರಸ್ತೆ ತಡೆ (ರಾಸ್ತಾ ರೋಕೊ) ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಹತಾಶೆಯ ಭಾವನೆ ನಿಮ್ಮನ್ನು ಆವರಿಸಲು ಬಿಡಬೇಡಿ. ಹಣಕಾಸು ಲಾಭಗಳು ವಿವಿಧ ಮೂಲಗಳಿಂದ ಬರುತ್ತದೆ. ಬಿಕ್ಕಟ್ಟಿನ ಸಮಯದಲ್ಲಿ ನಿಮಗೆ ಸಹಾಯ ಮಾಡಿದ ಸಂಬಂಧಿಗಳಿಗೆ ನಿಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸಿ. ನಿಮ್ಮ ಸಣ್ಣ ಕೃತಜ್ಞತೆ ಅವರಿಗೆ ಚೈತನ್ಯ ನೀಡುತ್ತದೆ.

**ವೃಷಭ** ವಿಧಿಯನ್ನು ಆಧರಿಸದಿರಿ, ನಿಮ್ಮ ಆರೋಗ್ಯ ಸುಧಾರಿಸಲು ಪ್ರಯತ್ನಿಸಿ ಏಕೆಂದರೆ ಅದೃಷ್ಟವು ಒಂದು ಸೋಮಾರಿ ದೇವತೆಯಾಗಿದ್ದು ಇದು ಎಂದಿಗೂ ತಾನಾಗಿಯೇ ನಿಮ್ಮ ಬಳಿ ಬರುವುದಿಲ್ಲ. ತೂಕವನ್ನು ನಿಯಂತ್ರಿಸಲು, ನಿಮ್ಮ ಆರೋಗ್ಯವನ್ನು ಪುನಃ ಪಡೆಯಲು ವ್ಯಾಯಾಮ ಮಾಡಲು ಇದು ಒಳ್ಳೆಯ ಸಮಯ.

**ಮಿಥುನ** ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ಉದ್ಯೋಗಕ್ಕೆ ಸಂಬಂಧಿಸಿರುವ ಜನರಿಗೆ ಇಂದು ಹಣದ ಬಹಳಷ್ಟು ಅಗತ್ಯ ವಿರುತ್ತದೆ, ಹಿಂದಿನ ದಿನಗಳಲ್ಲಿ ಮಾಡಲಾಗಿರುವ ಅನಗತ್ಯ ಖರ್ಚುಗಳ ಕಾರಣದಿಂದಾಗಿ ಅವರ ಹತ್ತಿರ ಸಾಕಷ್ಟು ಹಣ ಇರುವುದಿಲ್ಲ.

**ಕರ್ಕಾಟಕ** ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ–ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ. ಮಕ್ಕಳು ನಿಮ್ಮ ಗೃಹಕೃತ್ಯಗಳನ್ನು ಮುಗಿಸುವಲ್ಲಿ ನಿಮಗೆ ಸಹಾಯ ಮಾಡುತ್ತಾರೆ.

**ಸಿಂಹ** ನೀವು ಕಳೆದು ಹೋದದ್ದರ ಬಗ್ಗೆ ಯೋಚಿಸುತ್ತಿದ್ದರೆ ಹತಾಶೆ ನಿಮ್ಮ ಆರೋಗ್ಯವನ್ನು ನಾಶಮಾಡಬಹುದು ಸಾಧ್ಯವಾದಷ್ಟೂ ವಿಶ್ರಾಂತಿ ತೆಗೆದುಕೊಳ್ಳಲು ಪ್ರಯತ್ನಿಸಿ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು.

**ಕನ್ಯಾ** ಸ್ನೇಹಿತರ ಶೀತಲ ವರ್ತನೆ ನಿಮ್ಮ ಮನಸ್ಸಿಗೆ ನೋವು ತರುತ್ತದೆ. ಆದರೆ ಶಾಂತವಾಗಿರಲು ಪ್ರಯತ್ನಿಸಿ. ನಿಮಗೆ ಇದು ಹಿಂದೆ ನೀಡುವ ಬದಲಿಗೆ ದುಃಖವನ್ನು ತಡೆಗಟ್ಟಲು ಪ್ರಯತ್ನಿಸಿ. ಕಳೆದ ದಿನಗಳನ್ನು ಹೋಲಿಸಿದರೆ ಇಂದು ಆರ್ಥಿಕ ಉತ್ತಮವಾಗಲಿದೆ, ನೀವು ಹೆಚ್ಚಿನ ಹಣವನ್ನು ಪಡೆಯುತ್ತೀರಿ.

**ತುಲಾ** ವಿಶ್ರಾಂತಿ ತೆಗೆದುಕೊಳ್ಳಿ, ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ನೀವು ಉಳಿಸಿರುವ ಹಣ ಇಂದು ನಿಮ್ಮ ಕೆಲಸಕ್ಕೆ ಬರಬಹುದು. ಇದರೊಂದಿಗೆ ಇದರ ಹೋಗುವ ದುಃಖವು ನಿಮಗೆ ಆಗುತ್ತದೆ. ಸ್ನೇಹಿತರು ಮತ್ತು ಕುಟುಂಬದ ಸದಸ್ಯರು ನಿಮ್ಮ ಹೆಚ್ಚಿನ ಸಮಯ ತೆಗೆದುಕೊಳ್ಳುತ್ತಾರೆ.

**ವೃಶ್ಚಿಕ** ಸೃಜನಶೀಲ ಕೆಲಸ ನಿಮ್ಮನ್ನು ಶಾಂತವಾಗಿರಿಸುತ್ತವೆ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು.

**ಧನಸ್ಸು** ಯೋಗ ಆಧ್ಯಾತ್ಮಿಕ, ಭೌತಿಕ ಲಾಭಗಳೆರಡಕ್ಕೂ ಪ್ರಯೋಜನಕಾರಿಯಾಗುತ್ತದೆ. ಡೈರಿ ಉದ್ಯಮಕ್ಕೆ ಸೇರಿರುವವರು ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ. ನಿಮ್ಮ ಕುಟುಂಬದ ಕಲ್ಯಾಣಕ್ಕಾಗಿ ಕೆಲಸ ಮಾಡಿ. ನಿಮ್ಮ ಕಾರ್ಯಗಳು ದುರಾಶೆಯಿಂದಲ್ಲದೇ ಪ್ರೀತಿ ಮತ್ತು ಸಕಾರಾತ್ಮಕ ದೃಷ್ಟಿಯಿಂದ ನಡೆಯಬೇಕು.

**ಮಕರ** ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ಇಂದು, ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ, ಆದರೆ ಕೆಲವು ಅಮೂಲ್ಯ ವಸ್ತುವಿನ ಕಳ್ಳತನದಿಂದಾಗಿ, ನಿಮ್ಮ ಮನಸ್ಥಿತಿಗೆ ತೊಂದರೆಯಾಗಬಹುದು.

**ಕುಂಭ** ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು ಇಲ್ಲದಿದ್ದರೆ ಮುಂಬರುವ ಸಮಯ ತೊಂದರೆಗಳಿಂದ ತುಂಬಿರಬಹುದು ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ. ನಿಮ್ಮ ಕತ್ತಲೆಯ ಜೀವನ ನಿಮ್ಮ ಸಂಗಾತಿಗೆ ಒತ್ತಡ ತರಬಹುದು.

**ಮೀನ** ನಿಮ್ಮ ಸಂಗಾತಿಯ ಆರೋಗ್ಯ ಒತ್ತಡ ಮತ್ತು ಆತಂಕಕ್ಕೆ ಕಾರಣವಾಗಬಹುದು. ಇಂದು ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕಡಿಯುವ ಸಧ್ಯತೆ ಇದೆ. ವಿಶೇಷವಾಗಿ ನಿಮ್ಮ ಹಣದಚೀಲವನ್ನು ಎಚ್ಚರಿಕೆಯಿಂದಿಡಿ. ಕಲ್ಪನೆಗಳ ಹಿಂದೆ ಓಡಬೇಡಿ.

### ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲು ಜಿಪಂ ಸಿಇಒ ರಿಷಿ ಆನಂದ ಸೂಚನೆ

# ಜಲಧಾರೆ-ಹರ್ ಘರ್ ಜಲ್ ಯೋಜನೆ



ಉದಯವಾಹಿನಿ ಚಿತ್ರ

## ಪೈಪ್ ಲೈನ್ ಕಾಮಗಾರಿ ವಿಳಂಬ, ಜೂ. 15ರವರೆಗೆ ಗಡುವು

ಜಿಲ್ಲೆಯ ಅನೇಕ ಗ್ರಾಮಗಳಲ್ಲಿ ಪೈಪ್ ಲೈನ್ ಕಾಮಗಾರಿ ಬಾಕಿ ಉಳಿದಿರುವುದು ಆತಂಕಕಾರಿ ವಿಷಯ ಎಂದು ಸಿಇಒ ರಿಷಿ ಆನಂದ ಅವರು, ಈಗಾಗಲೇ ತಾಂತ್ರಿಕ ಹಾಗೂ ಆಡಳಿತಾತ್ಮಕ ಸಮಸ್ಯೆಗಳು ಪರಿಹಾರವಾಗಿದ್ದರೂ, ಕಾಮಗಾರಿ ಪೂರ್ಣಗೊಳ್ಳದಿರುವುದು ನಿರ್ಲಕ್ಷ್ಯ ವಹಿಸಿದ್ದೀರಿ ಎಂದು ಗುತ್ತಿಗೆದಾರರ ಮೇಲೆ ಗರಂ ಆದರು. ಜೂನ್ 15ರೊಳಗೆ ಬಾಕಿ ಪೈಪ್ ಲೈನ್ ಕಾಮಗಾರಿಗಳನ್ನು ಕಡ್ಡಾಯವಾಗಿ ಪೂರ್ಣಗೊಳಿಸಲು ಆದೇಶಿಸಿದರು. ಇದೇ ವೇಳೆ, ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರರು, ಸಹಾಯಕ ಇಂಜಿನಿಯರರು ಹಾಗೂ ಕಿರಿಯ ಇಂಜಿನಿಯರರು ನಿರಂತರ ಅನುಸರಣೆ ಮೂಲಕ ಪ್ರಗತಿ ಸಾಧಿಸಬೇಕೆಂದು ಸೂಚನೆ ನೀಡಿದರು.

• ಉದಯವಾಹಿನಿ ವಿಜಯಪುರ

ಮಹತ್ವಾಕಾಂಕ್ಷೆಯ ಜಲಧಾರೆ ಯೋಜನೆಯ ಕಾಮಗಾರಿ ಶೇ. 81.25ರಷ್ಟು ಮಾತ್ರ ಪ್ರಗತಿ ಸಾಧಿಸಿದ್ದಕ್ಕೆ ಜಿ. ಪಂ ಸಿಇಒ ರಿಷಿ ತೀವ್ರ ಅಸಮಾಧಾನ ಹೊರ ಹಾಕಿದರು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು, ಕಾಮಗಾರಿಗೆ ವೇಗದ ಸ್ಪರ್ಶ ನೀಡಿ, 2027ರ ಫೆಬ್ರುವರಿಯೊಳಗೆ ಪೂರ್ಣಗೊಳಿಸಿ ಯೋಜನೆಯನ್ನು ಕಾರ್ಯರೂಪಕ್ಕೆ ತರಬೇಕು ಎಂದು ಸಂಬಂಧಿಸಿದ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

**ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ**

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಬಹು ಗ್ರಾಮ ಕುಡಿಯುವ ನೀರು ಜಲಧಾರೆ ಯೋಜನೆ ಹಾಗೂ ಜಲ್ ಜೀವನ್ ಮಿಷನ್ ಅಡಿಯಲ್ಲಿ ಹರ್ ಘರ್ ಜಲ್ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**ಹೈಡ್ರೋ ಟೆಸ್ಟಿಂಗ್ ವೇಗ, ಶೇ.70ರಷ್ಟು ಗುರಿ ಸಾಧನೆಗೆ ಒತ್ತು:** ಪೈಪ್ ಲೈನ್ ಕಾಮಗಾರಿ ಪೂರ್ಣಗೊಂಡ ಗ್ರಾಮಗಳಲ್ಲಿ ಕಾರ್ಮಿಕರ ತಂಡ ಹೆಚ್ಚಿಸಿ ಹೈಡ್ರೋ ಟೆಸ್ಟಿಂಗ್ ಪ್ರಕ್ರಿಯೆ ತ್ವರಿತಗೊಳಿಸಿ ಕನಿಷ್ಠ ಶೇ. 70ರಷ್ಟು ಗುರಿ ಸಾಧಿಸಲು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

**ಹೆದ್ದಾರಿ, ರೈಲ್ವೆ ಮತ್ತು ಅರಣ್ಯ ಅನುಮತಿಗಳ ಸಮಸ್ಯೆ ಪರಿಹಾರಕ್ಕೆ ಕ್ರಮ:** ರಾಷ್ಟ್ರೀಯ ಹೆದ್ದಾರಿ, ರೈಲ್ವೆ ಲೈನ್ ಕ್ರಾಸಿಂಗ್, ಅರಣ್ಯ ಇಲಾಖೆಗೆ ಸಂಬಂಧಿಸಿದ ಬಾಕಿ ಅನುಮತಿಗಳನ್ನು ಶೀಘ್ರವಾಗಿ ಇತ್ಯರ್ಥಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

**ಭೂಮಿ ಲಭ್ಯತೆ ಸಮಸ್ಯೆ, ಖಾಸಗಿ ಭೂಮಿ ಖರೀದಿಗೆ ಸೂಚನೆ:** ಒಎಚ್ ಟಿ ನಿರ್ಮಾಣಕ್ಕೆ ಸರ್ಕಾರಿ ಭೂಮಿ ಲಭ್ಯವಿಲ್ಲದ ಸಂದರ್ಭಗಳಲ್ಲಿ ಖಾಸಗಿ ಭೂಮಿಯನ್ನು ಸೂಕ್ತ ದರದಲ್ಲಿ ಖರೀದಿಸಲು ಸ್ಥಳೀಯ ಅಧಿಕಾರಿಗಳು ಭೂಮಾಲೀಕರೊಂದಿಗೆ ಸಮನ್ವಯ ಸಾಧಿಸಿ ಪ್ರಕ್ರಿಯೆ ಪೂರ್ಣಗೊಳಿಸಬೇಕೆಂದು ಸಿಇಒ ಸೂಚಿಸಿದರು.

**ಹರ್ ಘರ್ ಜಲ್ ಯೋಜನೆ, ಪ್ರಗತಿ ನಿಧಾನ, ತುರ್ತು ಕ್ರಮ ಅಗತ್ಯ:** ಜಿಲ್ಲೆಯಲ್ಲಿ ಜಲ್ ಜೀವನ್ ಮಿಷನ್ ಯೋಜನೆಯಡಿ ಹರ್ ಘರ್ ಜಲ್ ಘೋಷಣೆ ಮಾಡುವ ಕುರಿತು ಮಾತನಾಡಿದ ಜಿಪಂ ಸಿಇಒ, ಹರ್ ಘರ್ ಜಲ್ ಪ್ರಗತಿ ತುಂಬಾ ಕಡಿಮೆಯಾಗಿದ್ದು, ಎಲ್ಲಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರರು, ಸಹಾಯಕ ಇಂಜಿನಿಯರರು ಹಾಗೂ ಕಿರಿಯ ಇಂಜಿನಿಯರ್ ಅವರು ಸಂಬಂಧಪಟ್ಟ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ಚರ್ಚಿಸಿ, ಸಮಸ್ಯೆ ಇರುವ ಗ್ರಾಮಗಳಿಗೆ ಭೇಟಿ ನೀಡಿ, ಸಮಸ್ಯೆಗಳನ್ನು ಬಗೆಹರಿಸಿ ಹರ್ ಘರ್ ಜಲ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸೂಚಿಸಿದರು.

### ಒಎಚ್‌ಟಿಗಳ ಗುಣಮಟ್ಟಕ್ಕೆ ಸೂಚನೆ

ಬಸವನಬಾಗೇವಾಡಿ ಹಾಗೂ ಇಂಡಿ ತಾಲ್ಲೂಕುಗಳಲ್ಲಿ ಮೇಲ್ಮಟ್ಟದ ನೀರು ಸಂಗ್ರಹಗಾರಗಳ ಎನ್‌ಡಿಟಿ ಪರೀಕ್ಷೆಯಲ್ಲಿ ಇಂತಹ ಗ್ರಾಮಗಳಲ್ಲಿ ಹೊಸ ಒಎಚ್‌ಟಿಗಳನ್ನು ನಿರ್ಮಿಸಲು ಅಗತ್ಯ ಕ್ರಮ ಕೈಗೊಳ್ಳಲು ಅಧಿಕಾರಿಗಳು ಸಿಇಒ ಅವರಿಗೆ ಸೂಚಿಸಿದರು. ಇದಕ್ಕೆ ತಕ್ಷಣ ಸ್ಪಂದಿಸಿದ ಸಿಇಒ ಅವರು, ಇತರೆ ತಾಲ್ಲೂಕುಗಳಲ್ಲಿಯೂ ಒಎಚ್‌ಟಿ ಅಗತ್ಯವಿದ್ದಲ್ಲಿ ತಕ್ಷಣ ಪಟ್ಟಿ ಸಲ್ಲಿಸಲು ಸೂಚಿಸಿದರು.

# ರೈತರ ಸಮಸ್ಯೆಗಳನ್ನು ಸರ್ಕಾರ ಕೇಳಬೇಕಿದೆ

• ಉದಯವಾಹಿನಿ ಹಾಸನ


ಉದಯವಾಹಿನಿ ಚಿತ್ರ

ಕರ್ನಾಟಕ ರಾಜ್ಯ ಹಾಗೂ ಉಸಿರು ಜನಜಾಗ್ರತಿ ಸಂಘಟನೆಯ ವತಿಯಿಂದ ರಾಜ್ಯಾಧ್ಯಕ್ಷರಾದ ನಾಗರತ್ನಮ್ಮ ಚಿನ್ನೆನಳ್ಳಿ ಇವರ ಅಧ್ಯಕ್ಷತೆಯಲ್ಲಿ ಹಾಸನದ ಪ್ರವಾಸಿ ಮಂದಿರದಲ್ಲಿ ಸಭೆ ಕರೆಯಲಾಗಿತ್ತು ಸಭೆಯಲ್ಲಿ ರೈತರಿಗೆ ಸರ್ಕಾರ ತೋರುತ್ತಿರುವ ಮಲತಾಯಿ ಧೋರಣೆ ಹಾಗೂ ರೈತರಿಗೆ ಬೆಳೆದ ಬೆಳೆಗೆ ಸರಿಯದ ಸಮಯಕ್ಕೆ ರೈತರ ಕೈಗೆ ಹಣ ಸಿಗುತ್ತಿಲ್ಲ ಬೆಳೆದ ವಸಾ ಧಾನ್ಯಗಳನ್ನು ಎಪಿಎಂಸಿಗಳಲ್ಲಿ ವ್ಯಾಪಾರ ಮಾಡುತ್ತಿಲ್ಲ ರೈತರ ಕಷ್ಟ ಕೇಳುವವರಿಲ್ಲ ತಾವು ಬೆಳೆದ ಬೆಳೆಯನ್ನು ಮಾರಾಟ ಮಾಡಲು ವಾರಾನುಗಟ್ಟಲೆ ರೈತರು ರಾತ್ರಿ ವೇಳೆ ತಮ್ಮ ವಾಹನಗಳಲ್ಲಿ ತುಂಬಿಕೊಂಡು ಬಂದು ಕಾಯಬೇಕು ಅವರಿಗೆ ಕುಡಿಯಲು ನೀರಿಲ್ಲ ಮಲಗಲು ವ್ಯವಸ್ಥೆ ಇಲ್ಲ ವಾಶ್ರೂಮ್ ಇಲ್ಲ ಮತ್ತೆ ಊಟ ಕಾಫಿ ಯಾವುದೇ ವ್ಯವಸ್ಥೆ ಇರೋದಿಲ್ಲ ಆ ಸಮಯದಲ್ಲಿ ವ್ಯಾಪಾರಿಗಳು ಒಂದಕ್ಕೆ ಎರಡರಷ್ಟು ಬೆಲೆ ಕೇಳುತ್ತಾರೆ ಅದರಲ್ಲೂ ದಲ್ಲಾಳಿಗಳ ಹಾವಳಿ ಹೆಚ್ಚಾಗಿದೆ ಹಿಂದೆ ರೈತರು ಬೆಳೆದ ಬೆಳೆಯನ್ನು ಅನುಕೂಲಕ್ಕೆ ತಕ್ಕಂತೆ ಅವರ ಸಮೀಪದ ಸಂತೆಗಳಲ್ಲಿ ಮಾರಾಟ ಮಾಡುತ್ತಿದ್ದರು ಸಮಯಕ್ಕೆ ಸರಿಯಾಗಿ ಅವರಿಗೆ ಹಣ ಸಿಕ್ಕಿ ಅವರ ಕಷ್ಟ ಪರಿಹಾರ ಆಗುತ್ತಿತ್ತು ಈಗ ಸರ್ಕಾರಗಳು ತುಂಬಾ ರೈತರನ್ನು ದಿಕ್ಕು ತಪ್ಪಿಸಿದ್ದಾರೆ ಯಾವುದೇ ರೀತಿಯಲ್ಲೂ ರೈತರಿಗೆ ಅನುಕೂಲವಿಲ್ಲ ರೈತರನ್ನು ಅಗಲು ರಾತ್ರಿ ಕಷ್ಟಕ್ಕೆ ಗುರಿ ಮಾಡುತ್ತಿದ್ದಾರೆ ಕರೆಂಟಿನ ಅಭಾವ ತುಂಬಾ ಇದೆ ಆದ್ದರಿಂದ ರೈತರನ್ನು ನೆಮ್ಮದಿಯಾಗಿ ಬದುಕುವ ನಿಟ್ಟಿನಲ್ಲಿ ಸರ್ಕಾರ ನಡೆದುಕೊಳ್ಳಬೇಕು ಎಂದು ಈ ಸಭೆಯಲ್ಲಿ ಚರ್ಚಿಸಲಾಯಿತು ಮತ್ತೊಂದು ವಿಷಯ ರೈತ ಒಂದೇ ಸೂರಿನಡಿ ಎಂಬ ಸೌಹಾರ್ದ ಕೋ ಕೋ ಆಪರೇಟಿವ್ ಸೊಸೈಟಿಯನ್ನು ಸ್ಥಾಪಿಸಲು ಚರ್ಚಿಸಲಾಯಿತು ಇದರ ವಿಚಾರವಾಗಿ ರಾಜ್ಯದಲ್ಲಿ ಎಲ್ಲಾ ತಾಲ್ಲೂಕುಗಳಲ್ಲಿ ಒಂದೊಂದು ಶಾಖೆ ತೆರೆಯುವಂತೆ ತೀರ್ಮಾನಿಸಲಾಯಿತು ಇದರ ಮುಂದಿನ ಜವಾಬ್ದಾರಿಯನ್ನು ನಮ್ಮ ರೈತ ಸಂಘದ ಪದಾಧಿಕಾರಿಗಳು ನಡೆಸಿಕೊಂಡು ಹೋಗುವಂತೆ ಮುನ್ಸೂಚನೆ ನೀಡಿದ್ದಾರೆ ಈ ಸಭೆಯಲ್ಲಿ ಗೌರವ ಅಧ್ಯಕ್ಷರಾದ ಮೈಸೂರ್ ಕುಮಾರಪ್ಪ ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿ, ಗಿರೀಶ್ ಕೊಟ್ಟಾರಿ ಮಂಗಳೂರು ರಾಜ್ಯ ಕಾರ್ಯ ಅಧ್ಯಕ್ಷ ಅರಸೀಕೆರೆ ರವಿ ರಾಜ್ಯ ಯುವ ಅಧ್ಯಕ್ಷ ಡಿಕೆ ರವಿ ರಾಜ ಕಾರ್ಯದರ್ಶಿ ಹರೀಶ್ ಹುಲಿವಾಲ ಮಹಿಳಾ ರಾಜ್ಯ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಹೆಚ್. ಎಸ್. ಪ್ರತಿಮಾ ಹಾಸನ್ ತಾಲ್ಲೂಕ್ ಅಧ್ಯಕ್ಷ ಮಂಜು ಮಡಬ ಚಂದ್ರ ಪಟ್ನಾ ರಮೇಶ್ ಅರಸೀಕೆರೆ ತಾಲ್ಲೂಕ ಅಧ್ಯಕ್ಷ ಹಾಸನ ಜಿಲ್ಲಾ ಕಾರ್ಯದರ್ಶಿ ಸ್ವರೂಪ್ ಕೃಷ್ಣ ತಾಲ್ಲೂಕ್ ಗೌರವಾಧ್ಯಕ್ಷರಾದ ಶಿವ ನಂಜೇಗೌಡ ಮರಗೂರ ಹಾಸನಾ ತಾಲ್ಲೂಕ ಅಧ್ಯಕ್ಷರಾದ ಮಲ್ಲೇಶ್ ಗೌಡ ಬಿಜೆ ಮಾರನಹಳ್ಳಿ ತಾಲ್ಲೂಕು ಮುಖಂಡರಾದ ಪುಟ್ಟಸ್ವಾಮಿಗೌಡ ಬದಿಕೆರೆ ದಿನೇಶ್ ಎಮ್ ಶಿವರಾ ತಾಲ್ಲೂಕ್ ಕಾರ್ಯದರ್ಶಿ ಬಾಗುರು ಹೋಬಳಿ ಅಧ್ಯಕ್ಷ ಸುರೇಶ್ ಹಲವಾರು ಸದಸ್ಯರು ಭಾಗವಹಿಸಿದ್ದರು.

## ಅಕ್ರಮವಾಗಿ ಮರ ಕಡಿದವರ ಮೇಲೆ ಕ್ರಮಕ್ಕೆ ಸಚಿವ ಖಂಡ್ರೆಗೆ ಮನವಿ

• ಉದಯವಾಹಿನಿ ಬಳ್ಳಾರಿ

ನಗರದಲ್ಲಿ ಅರಣ್ಯ ಇಲಾಖೆಯ ಅನುಮತಿ ಪಡೆಯದೇ ಕಾನೂನುಬಾಹಿರವಾಗಿ ಮರಗಳನ್ನು ಕಡಿದು ಹಾಕಿದ ಪ್ರಕರಣಗಳಿಗೆ ಸಂಬಂಧಿಸಿ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸಾಮಾಜಿಕ ಹೋರಾಟಗಾರ ಸಿದ್ದೇಶ ಊಳೂರು ಅರಣ್ಯ ಸಚಿವ ಈಶ್ವರ ಖಂಡ್ರೆಗೆ ದೂರು ನೀಡಿದ್ದಾರೆ. ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಈಗಾಗಲೇ 25ಕ್ಕೂ ಹೆಚ್ಚು ಮರಗಳನ್ನು ಅನಧಿಕೃತವಾಗಿ ಕಡಿದು ಹಾಕಿದ್ದು, ಇದರಿಂದ ಬಿಸಿಲಿನ ತೀವ್ರತೆಯಿಂದ ಬಳಲುತ್ತಿರುವ ಬಳ್ಳಾರಿ ಜನತೆಗೆ ಶುದ್ಧ ಗಾಳಿ ಮತ್ತು ನೆರಳಿನ ಕೊರತೆ ಉಂಟಾಗಲಿದೆ.

ಮರಗಳ ತೆರವು ಕುರಿತು ಅರಣ್ಯ ಇಲಾಖೆಯ ಅನುಮತಿ, ಧೃಡೀಕೃತ ನಕ್ಷೆ ಹಾಗೂ ಅಗತ್ಯ ದಾಖಲೆಗಳನ್ನು ನೀಡದೇ ಇರುವುದರಿಂದ ಹಲವು ಅನುಮಾನಗಳು ಮೂಡಿವೆ ಎಂದಿದ್ದಾರೆ. ರಸ್ತೆ ಅಭಿವೃದ್ಧಿ ಕಾಮಗಾರಿಯಲ್ಲಿ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ (ಎನ್ಜಿಟಿ) ನಿಯಮಗಳನ್ನು ಉಲ್ಲಂಘಿಸಿರುವ ಗುತ್ತಿ ಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಿ, ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕರ್ನಾಟಕ ಅರಣ್ಯ ಅಧಿನಿಯಮ 1969ರಡಿ ಕ್ರಮ ಕೈಗೊಳ್ಳಬೇಕು ಎಂದಿದ್ದಾರೆ

## ಸೇತುವೆ ನಿರ್ಮಾಣಕ್ಕೆ 2 ಕೋಟಿ ರು. ಅನುದಾನ: ವೇದವ್ಯಾಸ ಕಾಮತ್

• ಉದಯವಾಹಿನಿ ಮಂಗಳೂರು

ರಾಜಕಾಲುವೆ ನೀರು ಹೊರ ನುಗ್ಗದಂತೆ ತಡೆಗೋಡೆ ನಿರ್ಮಾಣವಾಗಲಿದ್ದು, ಮುಂದೆ ಎಂ.ಜಿ. ರಸ್ತೆಯ ಭಾಗದಲ್ಲಿ ಒಂದು ಸೇತುವೆ ನಿರ್ಮಾಣಕ್ಕೂ ಎರಡು ಕೋಟಿ ರು. ಅನುದಾನ ಮೀಸಲಿಸಲಾಗಿದೆ ಎಂದು ಶಾಸಕ ವೇದವ್ಯಾಸ ಕಾಮತ್ ಹೇಳಿದರು. ರಾಜಕಾಲುವೆ ನೀರು ಹೊರ ನುಗ್ಗದಂತೆ ತಡೆಗೋಡೆ ನಿರ್ಮಾಣವಾಗಲಿದ್ದು, ಮುಂದೆ ಎಂ.ಜಿ. ರಸ್ತೆಯ ಭಾಗದಲ್ಲಿ ಒಂದು ಸೇತುವೆ ನಿರ್ಮಾಣಕ್ಕೂ ಎರಡು ಕೋಟಿ ರು. ಅನುದಾನ ಮೀಸಲಿಸಲಾಗಿದೆ ಎಂದು ಶಾಸಕ ವೇದವ್ಯಾಸ ಕಾಮತ್ ಹೇಳಿದರು. ಅವರು ಮಂಗಳೂರು ನಗರ ದಕ್ಷಿಣ ಕ್ಷೇತ್ರದ ಕೊಡಿಯಾಲ್‌ಬೈಲ್ ವಾರ್ಡಿನ ತಾಳಿಪಾಡಿ ಮನೆ ಎದುರಿನ ಶರಾವತಿ ಅಪಾರ್ಟ್ಮೆಂಟ್ ಬಳಿಯ ರಾಜಕಾಲುವೆಗೆ ಸುಮಾರು 30 ಲಕ್ಷ ರು. ವೆಚ್ಚದಲ್ಲಿ ತಡೆಗೋಡೆ ನಿರ್ಮಾಣ ಕಾಮಗಾರಿಗೆ ಶಿಲನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

## ಅಕ್ರಮ ಬಡ್ಡಿ ವ್ಯವಹಾರ: ವ್ಯಕ್ತಿ ಬಂಧನ

• ಉದಯವಾಹಿನಿ ದಾಂಡೇಲಿ

ನಗರದಲ್ಲಿ ಅಕ್ರಮ ಬಡ್ಡಿ ವ್ಯವಹಾರ ನಡೆಸುತ್ತಿರುವ ದೂರಿನ ಹಿನ್ನೆಲೆಯಲ್ಲಿ ನಗರ ಪೊಲೀಸ್ ಠಾಣೆಯ ಪೊಲೀಸರು ವ್ಯಕ್ತಿಯೊಬ್ಬನನ್ನು ಬಂಧಿಸಿ ಪ್ರಕರಣ ದಾಖಲಿಸಿದ್ದಾರೆ. ಗಾಂಧಿನಗರ ಆಶ್ರಯ ಕಾಲೋನಿ ನಿವಾಸಿ ರಿಯಾಜ್ ಇಬ್ರಾಹಿಂ ಲಿಂಬುವಾಲೆ ಶೇರಖಾನ (32) ಮೀಟರ್ ಬಡ್ಡಿ ವ್ಯವಹಾರ ಮಾಡುತ್ತಿದ್ದಾನೆ ಎಂಬ ದೂರಿ ತಿಳಿದು ಬಂದ ಹಿನ್ನೆಲೆಯಲ್ಲಿ ಆರೋಪಿಯ ಹತ್ತಿರವಿದ್ದ 13 ವಿವಿಧ ಬ್ಯಾಂಕ್‌ಗಳ ಖಾಲಿ ಚೆಕ್, ಬಡ್ಡಿ ವ್ಯವಹಾರಕ್ಕೆ ಸಂಬಂಧಿಸಿದ ಪ್ರಶ್ನಾತೀತ ದಾಖಲೆಗಳು, ನೋಟ ಬುಕ್‌ನ್ನು ವಶಪಡಿಸಿಕೊಂಡಿದ್ದಾರೆ. ಪಿ.ಎಸ್.ಐ ಅಮೀನ ಅತ್ತಾರ ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ. ಕಾರವಾರದ ಸಹಕಾರಿ ಸಂಘಗಳ ಸಹಾಯಕ ನಿರ್ಬಂಧಕರಾದ ಶ್ರೀದೇವಿ ಕಟ್ಟಿಮನಿ ಈ ಪ್ರಕರಣದಲ್ಲಿ ದೂರುದಾರರಾಗಿದ್ದಾರೆ.

## ಆಕಸ್ಮಿಕ ಬೆಂಕಿ: ಕಸ ವಿಲೇವಾರಿ ಘಟಕ ಭಸ್ಮ

• ಉದಯವಾಹಿನಿ ಕುಮಟಾ

ತಾಲ್ಲೂಕಿನ ಹೆಗಡೆ ಗ್ರಾಮ ಪಂಚಾಯಿತಿ ಕಸ ವಿಲೇವಾರಿ ಘಟಕಕ್ಕೆ ಆಕಸ್ಮಿಕ ಬೆಂಕಿ ತಗುಲಿ ಸಂಗ್ರಹಿಸಿಟ್ಟಿದ್ದ ಕಸ ಸುಟ್ಟು ಭಸ್ಮವಾದ ಪ್ರಕರಣ ಸಂಭವಿಸಿದೆ. ಕಸ ವಿಲೇವಾರಿ ಘಟಕಕ್ಕೆ ರಜೆ ಇದ್ದ ಕಾರಣ ಘಟಕದ ಹೊರ ಆವರಣದ ಗೇಟಿಗೆ ಬೀಗ ಹಾಕಿದ್ದಾಗ ವಿದ್ಯುತ್ ಶಾರ್ಟ್ ಸರ್ಕಿಟ್‌ನಿಂದ ಬೆಂಕಿ ತಗುಲಿ ಅನಾಹುತ ಸಂಭವಿಸಿದೆ ಎಂದು ಹೆಗಡೆ ಗ್ರಾಮ ಪಂಚಾಯಿತಿ ಪಿ.ಡಿ.ಒ ವೆಂಕಟ್ರಮಣ ಪಟಗಾರ ತಿಳಿಸಿದ್ದಾರೆ.

ಗೋಕರ್ಣ ಪಂಚಾಯಿತಿ ಹೆಚ್ಚುವರಿ ಕರ್ತವ್ಯದಲ್ಲಿದ್ದಾಗ ವಿಷಯ ತಿಳಿದು ತಕ್ಷಣ ಕುಮಟಾ ಅಗ್ನಿಶಾಮಕ ಠಾಣೆಗೆ ಕರೆ ಮಾಡಿ ಮಾಹಿತಿ ನೀಡಿದೆ. ಅಗ್ನಿಶಾಮಕ ಠಾಣೆ ಸಿಬ್ಬಂದಿ ಆಗಮಿಸಿ ಬೆಂಕಿ ಆರಿಸಿದ್ದಾರೆ. ಸಂಗ್ರಹಿಸಿಟ್ಟ ಕಸ ಸುಟ್ಟು ಹೋಗಿದ್ದರ ಹೊರತಾಗಿ ಬೇರೆ ಯಾವುದೇ ಹಾನಿಯಾಗಿಲ್ಲ' ಎಂದು ಅವರು ಮಾಹಿತಿ ನೀಡಿದರು.

## ತಾಯಿ,ಶಿಶು ಮರಣ ಪ್ರಮಾಣ ಶೂನ್ಯಕ್ಕೆ ಇಳಿಸಿ: ಕೊಪ್ಪಳ ಜಿಲ್ಲಾಧಿಕಾರಿ ಇಟ್ನಾಳ

• ಉದಯವಾಹಿನಿ ಕೊಪ್ಪಳ

ಜಿಲ್ಲೆಯಲ್ಲಿ ಹೆರಿಗೆ ಸಂದರ್ಭದಲ್ಲಿ ಉಂಟಾಗುವ ತಾಯಿ ಮತ್ತು ಶಿಶು ಮರಣ ಪ್ರಮಾಣವನ್ನು ಶೂನ್ಯಕ್ಕೆ ಇಳಿಸಲು ಅಗತ್ಯ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ.ಇಟ್ನಾಳ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ನಡೆದ ಜಿಲ್ಲಾ ಮಟ್ಟದ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಮಹಿಳೆ ಗರ್ಭಿಣಿ ಎಂದು ತಿಳಿದ ಕೂಡಲೇ ಆಕೆಗೆ ತಾಯಿ ಕಾರ್ಡ್ ನೀಡಲಾಗುತ್ತದೆ. ಅದರಲ್ಲಿ ಪ್ರತಿ ತಿಂಗಳು ತಪಾಸಣೆ ಹಾಗೂ ಮಹಿಳೆಯ ಆರೋಗ್ಯದ ಕುರಿತು ವಿವರ ಇರುತ್ತದೆ. ಹೆರಿಗೆ ಸಂದರ್ಭದಲ್ಲಿ ತಾಯಿ ಕಾರ್ಡ್ ಮಹತ್ವದ್ದಾಗಿದ್ದು, ಹೆರಿಗೆ ಸಮಯದ ಗಂಭೀರ ಸಮಸ್ಯೆಗಳನ್ನು ಪರಿಹರಿಸಲು ನೆರವಾಗುತ್ತದೆ. ಹೆರಿಗೆ ಸಮಯದಲ್ಲಿ ರಕ್ತದೊತ್ತಡದಲ್ಲಿನ ಏರಿಳಿತಗಳಿಂದ ಸಾವಿನಂತಹ ದುರ್ಘಟನೆ ಸಂಭವಿಸುತ್ತವೆ. ಆದ್ದರಿಂದ ಪ್ರತಿ ತಿಂಗಳೂ ಗರ್ಭಿಣಿಯ ಆರೋಗ್ಯ ತಪಾಸಣೆ ಮಾಡಬೇಕು' ಎಂದು ಸೂಚಿಸಿದರು. ಮಗು ಜನನದ ನಂತರ ಸಂಪೂರ್ಣ ಆರೋಗ್ಯವಾಗಿದ್ದಾಗಲೂ ಜನನದ ಒಂದು ಅಥವಾ ಎರಡು ದಿನಗಳ ನಂತರ ಸಾವನ್ನಪ್ಪುತ್ತದೆ. ಇದಕ್ಕೆ ಕಾರಣಗಳಿರಲೇಬೇಕು. ವೈದ್ಯಕೀಯ ಕಾರಣಗಳು ಏನೇ ಇದ್ದರೂ ಅಗತ್ಯ ಸಮಯದಲ್ಲಿ ಸೂಕ್ತ ಚಿಕಿತ್ಸೆ ನೀಡುವ ಮೂಲಕ ಮಗುವಿನ ಪ್ರಾಣ ಉಳಿಸಬಹುದು ಎಂದರು.

## ಬಾಲ್ಯ-ವಿವಾಹ, ಬಾಲ ಕಾರ್ಮಿಕರ ಪತ್ತೆ ಅಗತ್ಯ

• ಉದಯವಾಹಿನಿ ಹಾಸನ

ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಪೋಕ್ಸೊ ಪ್ರಕರಣಗಳ ತಡೆ ಮತ್ತು ಬಾಲ ಕಾರ್ಮಿಕರ ಪತ್ತೆಗೆ ಕ್ರಮ ಕೈಗೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಹೇಮಾವತಿ ಅಧಿಕಾರಿಗಳಿಗೆ ಸೂಚಿಸಿದರು. ಇಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಬಾಲ್ಯ ವಿವಾಹ ತಡೆಗೆ ಇರುವ ಸಹಾಯವಾಣಿ ಸಂಖ್ಯೆ ಕುರಿತು ವ್ಯಾಪಕ ಪ್ರಚಾರ ಆಗಬೇಕು. ಬಾಲ್ಯ ವಿವಾಹ ತಡೆದ ನಂತರ ಮುಂದೆ ಅದನ್ನು ಫಾಲೋ ಅಪ್ ಮಾಡುವಂತೆ ನಿರ್ದೇಶನ ನೀಡಿದರು. ಜಿಲ್ಲೆಯಲ್ಲಿ ಯಾವುದೇ ಮಗುವು ಶಿಕ್ಷಣದಿಂದ ವಂಚಿತರಾಗದಂತೆ, ಶಾಲೆಯಿಂದ ಹೊರಗುಳಿದ ಮಕ್ಕಳ ಮರು ಸೇರ್ಪಡೆಗೆ ಕ್ರಮಕ್ಕೆಗೊಳ್ಳುವಂತೆ ತಿಳಿಸಿದರು.

ಶಾಲೆಗಳಲ್ಲಿ ಪೋಷಕರ ಸಭೆ ನಡೆಸುವ ಸಂದರ್ಭದಲ್ಲಿ ಪೋಕ್ಸ್, ಬಾಲ್ಯವಿವಾಹ, ಬಾಲ ಕಾರ್ಮಿಕ ಪದ್ಧತಿ ಕುರಿತು ತಿಳಿವಳಿಕೆ ಮೂಡಿಸಲು ಕ್ರಮಕೈಗೊಳ್ಳಿ, ಶಿಕ್ಷಕರಿಗೆ ತರಬೇತಿ ಆಯೋಜಿಸಿದ ಸಂದರ್ಭದಲ್ಲಿ ನ್ಯಾಯಾಧೀಶರು, ಪೊಲೀಸ್ ಅಧಿಕಾರಿಗಳಿಂದ ಕಾಯ್ದೆ ಕುರಿತು ಉಪನ್ಯಾಸ ನೀಡಲು ಆಹ್ವಾನಿಸುವಂತೆ ಸೂಚಿಸಿದರು. ಪೋಕ್ಸೊ ಪ್ರಕರಣದಲ್ಲಿ ಸಾಕ್ಷಿ ಹಾಳಾಗದಂತೆ ವಿಳಂಬ ಮಾಡದೇ ಘಟನೆಯಾದ ತಕ್ಷಣ ತಪಾಸಣೆ ನಡೆಸಿ ವೈದ್ಯಕೀಯ ವರದಿ ಪಡೆದುಕೊಳ್ಳಲು ಅಧಿಕಾರಿಗಳು ಸಮನ್ವಯದಿಂದ ಕರ್ತವ್ಯ ನಿರ್ವಹಿಸುವಂತೆ ತಿಳಿಸಿದರು. ಬಸ್ ನಿಲ್ದಾಣ, ರಸ್ತೆ ಪಕ್ಕದಲ್ಲಿ, ಅಂಗಡಿಗಳ ಮುಂದೆ ನಿರಾಶ್ರಿತರು ರಾತ್ರಿ ವೇಳೆಯಲ್ಲಿ ಮಲಗುತ್ತಾರೆ. ಅವರಿಗೆ ತಂಗಲು ವ್ಯವಸ್ಥೆಗೆ ಕ್ರಮ ಕೈಗೊಳ್ಳಬೇಕು ಎಂದರು.

## ಕುಡಿಯುವ ನೀರಿನ ಸಮಸ್ಯೆ ಆಗದಂತೆ ಗಮನ ಹರಿಸಿ: ಜಾಧವ್

• ಉದಯವಾಹಿನಿ ಚಿಂಚೋಳಿ



ಉದಯವಾಹಿನಿ ಚಿತ್ರ

ಪಟ್ಟಣದ ಪ್ರಜಾಸೌಧ ಕಚೇರಿಯಲ್ಲಿ ಶಾಸಕರಾದ ಡಾ.ಅವಿನಾಶ ಜಾಧವ ಅವರ ಅಧ್ಯಕ್ಷತೆಯಲ್ಲಿ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಮಿತಿಯ ಸಭೆಯು ಜರುಗಿತು.

ಸಭೆಯಲ್ಲಿ ಶಾಸಕರಾದ ಡಾ.ಅವಿನಾಶ ಜಾಧವ ಅವರು ಮಾತನಾಡಿ, ಚಿಂಚೋಳಿ ತಾಲ್ಲೂಕಿನ ಪ್ರತಿಯೊಂದು ಗ್ರಾಮದಲ್ಲಿ ಮತ್ತು ತಾಂಡಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಅಧಿಕಾರಿಗಳು ಗಮನ ಹರಿಸಬೇಕೆಂದು ಮತ್ತು ತಾಲ್ಲೂಕಿನಲ್ಲಿ ಬಿಸಿ ಗಾಳಿ ಕುಡಿಯುವ ನೀರು ಮತ್ತು ಮೇವಿನ ಸಮಸ್ಯೆ ಕುರಿತು ಕೈಗೊಳ್ಳುವ ಕ್ರಮಗಳ ಬಗ್ಗೆ ಸಭೆಯಲ್ಲಿ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಸಭೆಯಲ್ಲಿ ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ, ತಾಲ್ಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ಸಂತೋಷ್ ಚೌವ್ಹಾಣ್, ವಾಟರ್ ಸಪ್ಲೈ ಇಲಾಖೆ ಅಧಿಕಾರಿಗಳಾದ ಉಮೇಶ್ ರಾಠೋಡ್, ಪುರಸಭೆ ಅಧಿಕಾರಿ ಕಾಶಿನಾಥ್ ಧನ್ನಿ, ಆರೋಗ್ಯ ಅಧಿಕಾರಿ ಡಾ.ಮಮ್ಮದ್ ಗಫರ್, ಕೃಷಿ ಇಲಾಖೆ ಅಧಿಕಾರಿಗಳಾದ ವೀರಶೆಟ್ಟಿ ರಾಠೋಡ, ಯುವರಾಜ್ ರಾಠೋಡ, ಮತ್ತು ವಿವಿಧ ಇಲಾಖೆ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತ್ ಅಧಿಕಾರಿಗಳು ಸಭೆಯಲ್ಲಿ ಭಾಗಿಯಾಗಿದ್ದರು.

## ಬಿಜೆಪಿ ಮುಖಂಡರಿಗೆ ನೈತಿಕತೆ ಇಲ್ಲ: ಬೋಸರಾಜು

• ಉದಯವಾಹಿನಿ ಕುಂದಾಪುರ


ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ಅಲ್ಪಾವಧಿ ಅಧಿಕಾರ ಮಾಡಿದ ಬಿಜೆಪಿ ಸರ್ಕಾರದ ಕೋಟ್ಯಾಂತರ ಬೆಲೆ ಬಾಳುವ ಆಸ್ತಿಗಳನ್ನು ಪರಭಾರೆ ಮಾಡಿರುವ ಇತಿಹಾಸವಿರುವಾಗ, ದೇಶದ ಸ್ವಾತಂತ್ರ್ಯಕ್ಕೆ ಹೋರಾಟ ಮಾಡಿದ ಕಾಂಗ್ರೆಸ್ ಪಕ್ಷಕ್ಕೆ ಕೇವಲ ಹನ್ನೊಂದು ಸೆಂಟ್ಸ್ ಜಾಗವನ್ನು ನೀಡಿರುವ ಬಗ್ಗೆ ಆಕ್ಷೇಪ ವ್ಯಕ್ತಪಡಿಸಲು ಬಿಜೆಪಿ ಮುಖಂಡರಿಗೆ ಯಾವ ನೈತಿಕತೆ ಇದೆ ಎಂದು ರಾಜ್ಯ ಸಣ್ಣ ನೀರಾವರಿ, ಮಾಹಿತಿ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್ ಬೋಸರಾಜು ಪ್ರಶ್ನಿಸಿದರು. ನಗರದ ಸರ್ಕಾರಿ ಜ್ಯೂನಿಯರ್ ಕಾಲೇಜು ಬಳಿಯಲ್ಲಿ ನೂತನವಾಗಿ ನಿರ್ಮಾಣಗೊಳ್ಳಲಿರುವ ಕಾಂಗ್ರೆಸ್ ಪಕ್ಷದ ಬ್ಲಾಕ್ ಕಚೇರಿಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ಕೆಪಿಸಿಸಿ ಅಧ್ಯಕ್ಷರಾಗಿ ಡಿಕೆ ಶಿವಕುಮಾರ್ ಅಧಿಕಾರ ವಹಿಸಿಕೊಂಡ ಬಳಿಕ ರಾಜ್ಯದಲ್ಲಿ ನೂರು ಕಾಂಗ್ರೆಸ್ ಸ್ವಂತ ಕಚೇರಿಗಳನ್ನು ನಿರ್ಮಿಸುವ ಉದ್ದೇಶವನ್ನು ಇರಿಸಿಕೊಳ್ಳಲಾಗಿದೆ. ಜಾಗ ಹಾಗೂ ಕಟ್ಟಡ ನಿರ್ಮಾಣಗಳೆಲ್ಲವೂ ಕಾನೂನು ಪ್ರಕಾರವೇ ನಡೆಯುತ್ತದೆ. ಕೇರಳ, ತಮಿಳುನಾಡಿನಲ್ಲಿ ಕಾಂಗ್ರೆಸ್ ಪರವಾದ ಸರ್ಕಾರ ಬಂದಿರುವುದು ಬಿಜೆಪಿಗರ ನಿದ್ದೆಗೆಡಿಸಿದೆ. ವಿರೋಧ ಪಕ್ಷದ ಜನಪ್ರತಿನಿಧಿಗಳಿದ್ದರೂ ಕ್ಷೇತ್ರದ ಅಭಿವೃದ್ಧಿಗಾಗಿ ಅನುದಾನ ನೀಡುವ ಬದ್ಧತೆ ಕಾಂಗ್ರೆಸ್ ಸರ್ಕಾರಕ್ಕಿದೆ ಎಂದರು .

> ಬಿಜೆಪಿಗರು ಆರೋಪಿಸುವಂತೆ ರಾತ್ರಿ ಬೆಳಗಾಗುವುದರ ಒಳಗೆ ಇಲ್ಲಿ ಜಾಗ ಮಂಜೂರಾತಿ ನಡೆದಿಲ್ಲ. ಈ ಬಗ್ಗೆ 25 ವರ್ಷಗಳ ನಿರಂತರ ಪ್ರಯತ್ನವಿದೆ. ಸ್ವಂತ ಕಚೇರಿಯ ಮೂಲಕ ಜನರಿಗೆ ಇನ್ನಷ್ಟು ಹತ್ತಿರವಾಗಬೇಕು ಎನ್ನುವುದು ಪಕ್ಷದ ಉದ್ದೇಶ. -ಮಂಜುನಾಥ ಭಂಡಾರಿ
> ಕೆಪಿಸಿಸಿ ಕಾರ್ಯಾಧ್ಯಕ್ಷ

## ಇಂದಿನಿಂದ ತುಂಗಭದ್ರಾ ಜಲಾಶಯದ ಕ್ರಸ್ಟ್‌ಗೇಟುಗಳಿಗೆ ಹೊಸ ಚೈನ್ ಅಳವಡಿಕೆ

• ಉದಯವಾಹಿನಿ ಹೊಸಪೇಟೆ

ವಿಜಯನಗರ, ಬಳ್ಳಾರಿ, ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಗಳ ಜೀವನಾಡಿ ಆಗಿರುವ ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟುಗಳಿಗೆ ಹೊಸ ಚೈನ್ ಅಳವಡಿಕೆ ಕಾರ್ಯ ಇಂದಿನಿಂದ ಆರಂಭವಾಗಲಿದೆ.

ತುಂಗಭದ್ರಾ ಜಲಾಶಯಕ್ಕೆ ಈಗಾಗಲೇ 33 ಹೊಸ ಕ್ರಸ್ಟ್ ಗೇಟುಗಳ ಅಳವಡಿಕೆ ಕಾರ್ಯ ಯಶಸ್ವಿಯಾಗಿ ಪೂರ್ಣಗೊಂಡಿದ್ದು. ಚೈನ್ ಅಳವಡಿಕೆ ಕಾರ್ಯ ಮಾತ್ರ ಬಾಕಿ ಇತ್ತು. ಹೊಸ ಚೈನ್ ಈಗಾಗಲೇ ಚೆನ್ನೈಯಿಂದ ತುಂಗಭದ್ರಾ ಜಲಾಶಯದ ಆವರಣ ತಲುಪಿದ್ದು. ಇಂದಿನಿಂದ ಕ್ರಸ್ಟ್ ಗೇಟುಗಳಿಗೆ ಪ್ರಾಯೋಗಿಕವಾಗಿ ಹೊಸ ಚೈನ್ ಅಳವಡಿಕೆ ಕಾರ್ಯ ಆರಂಭಿಸುವುದಾಗಿ ತುಂಗಭದ್ರಾ ಮಂಡಳಿ ಅಧಿಕಾರಿಗಳು ತಿಳಿಸಿದ್ದಾರೆ.

**ಮೇ ಅಂತ್ಯದೊಳಗೆ ಪೂರ್ಣ:** ತುಂಗಭದ್ರಾ ಜಲಾಶಯದ 33 ಕ್ರಸ್ಟ್ ಗೇಟುಗಳಿಗೆ ಚೈನ್ ಅಳವಡಿಸುವ ಕಾರ್ಯವನ್ನು ಮೇ ಅಂತ್ಯದೊಳಗೆ ಪೂರ್ಣಗೊಳಿಸಲು ತುಂಗಭದ್ರಾ ಮಂಡಳಿ ತೀರ್ಮಾನಿಸಿದೆ. ಗೇಟ್ ಸಂಖ್ಯೆ 33 ರಿಂದ ಚೈನ್ ಅಳವಡಿಕೆ ಕಾರ್ಯ ಆರಂಭಗೊಳ್ಳಲಿದೆ. ಒಂದು ಗೇಟ್ ಗೆ ಚೈನ್ ಅಳವಡಿಸಲು 2 ರಿಂದ 3 ದಿನ ಬೇಕಾಗುತ್ತದೆ ಎನ್ನಲಾಗಿದೆ. ಚೈನ್ ಅಳವಡಿಕೆಗೆ ಈಗಾಗಲೇ ವಿಶೇಷ ತಜ್ಞರ ತಂಡ ರಚಿಸಲಾಗಿದೆ.

**ಆತಂಕ ದೂರ:** ಕಳೆದ ವರ್ಷ ಜಲಾಶಯದ 19ನೇ ನಂಬರಿನ ಗೇಟಿನ ಚೈನ್ ಲಿಂಕ್ ಕಟ್ ಆಗಿ ಕ್ರಸ್ಟ್ ಗೇಟು ನೀರಿನ ರಭಸಕ್ಕೆ ಕಿತ್ತುಕೊಂಡು ಹೋಗಿತ್ತು. ಇದರಿಂದ ಅಪಾರ ಪ್ರಮಾಣದ ನೀರು ಹೊರ ಹೋಗಿ ರೈತರಲ್ಲಿ ಆತಂಕ ಮನೆ ಮಾಡಿತ್ತು. ತುರ್ತಾಗಿ ಸ್ಟಾಪ್ ಲಾಕ್ ಅಳವಡಿಸಿ, ನೀರು ಜಲಾಶಯದಿಂದ ಹೊರ ಹೋಗದಂತೆ


ಉದಯವಾಹಿನಿ ಚಿತ್ರ

ತಡೆದು ರೈತರ ಬೆಳೆಗಳಿಗೆ ನೀರು ನೀಡಲಾಗಿತ್ತು. ನಂತರ ತಜ್ಞರ ಸಲಹೆಯಂತೆ ತುಂಗಭದ್ರಾ ಮಂಡಳಿ ಜಲಾಶಯದ ಎಲ್ಲಾ ಕ್ರಸ್ಟ್ ಗೇಟುಗಳ ಬದಲಾವಣೆಗೆ ಮುಂದಾಗಿ, 33 ಹೊಸ ಕ್ರಸ್ಟ್ ಗೇಟುಗಳನ್ನು ಯಶಸ್ವಿಯಾಗಿ ಆಳವಡಿಸುವ ಮೂಲಕ ರೈತರ ಆತಂಕ ದೂರ ಮಾಡಿತ್ತು. ಸಣ್ಣಪುಟ್ಟ ವೆಲ್ಡಿಂಗ್ ಕೆಲಸಗಳಿದ್ದು. ಅವುಗಳನ್ನು ಮೇ.15 ರೊಳಗೆ ಪೂರ್ಣಗೊಳಿಸುವ ಭರವಸೆ ನೀಡಿ ಅದರಂತೆ ಕೆಲಸ ಆರಂಭಿಸಿತ್ತು. ಆದರೆ ಹೊಸ ಚೈನ್ ಅಳವಡಿಕೆ ಮಾತ್ರ ಬಾಕಿ ಇತ್ತು. ಅದರಂತೆ ಮೊದಲ ಹಂತವಾಗಿ 5 ಹೊಸ ಚೈನ್‌ಗಳು ಜಲಾಶಯದ ಆವರಣ ತಲುಪಿದ್ದು. ಇಂದಿನಿಂದ ಪ್ರಾಯೋಗಿಕ ಅಳವಡಿಕೆ ಕಾರ್ಯ ಆರಂಭಗೊಳ್ಳಲಿದೆ.

**5.8 ಕೋಟಿ ವೆಚ್ಚ:** ಒಟ್ಟು 5,8 ಕೋಟಿ ರೂ ವೆಚ್ಚದಲ್ಲಿ 33 ಗೇಟುಗಳಿಗೆ ಹೊಸ ಚೈನ್ ಅಳವಡಿಸಲಾಗುತ್ತಿದೆ. ಅದಕ್ಕಾಗಿ 66 ಚೈನ್‌ಗಳನ್ನು ಚೆನ್ನೈನಲ್ಲಿ ತಯಾರಿಸಲಾಗಿದೆ. ಪ್ರತಿ ಒಂದು ಚೈನ್ 1.9 ಟನ್ ತೂಕ ಹೊಂದಿದ್ದು. ಒಟ್ಟು 33 ಗೇಟುಗಳಿಗೆ ತಲಾ ಎರಡರಂತೆ 66 ಚೈನ್‌ಗಳನ್ನು ಅಳವಡಿಸಲಾಗುತ್ತಿದೆ.

# ದುಡಿಯೋಣ ಬಾ ಅಭಿಯಾನದಡಿ ನರೇಗಾ ಕೂಲಿಕಾರರಿಗೆ ಕೆಲಸ

### • ಯೋಜನೆಯಡಿ 60 ವರ್ಷ ತುಂಬಿದ ನಂತರ ಪ್ರತಿ ತಿಂಗಳು ರೂ.3,000 ಪಿಂಚಣಿ ಸಿಗುತ್ತದೆ

• ಉದಯವಾಹಿನಿ ಯಲಬುರ್ಗಾ

ತಾಲ್ಲೂಕಿನ ತುಮ್ಮರಗುದ್ದಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಮಾರನಾಳ ಗ್ರಾಮದ ಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕೈಗೊಳ್ಳಲಾದ ನಾಲಾ ಹೂಳೆತ್ತುವ ಕಾಮಗಾರಿಯಲ್ಲಿ ನರೇಗಾ ಯೋಜನೆಯ ಕೂಲಿಕಾರರು ಗೂಳೆ ಹೋಗದಂತೆ ತಡೆದು ಕೆಲಸ ನೀಡಿದ್ದು, ಕೆಲಸದ ಸ್ಥಳದಲ್ಲಿ ಕುಡಿಯುವ ನೀರು ಮತ್ತು ಮೂಲ ಸೌಕರ್ಯ ಒದಗಿಸಲಾಗುವುದು ಎಂದು ಗ್ರಾಮ ಪಂಚಾಯತಿ ಕಾರ್ಯದರ್ಶಿ ಶ್ರೀಕಾಂತ ಕೂಕನಪಳ್ಳಿ ತಿಳಿಸಿದರು.

ಗ್ರಾಮದ 350ಕ್ಕೂ ಹೆಚ್ಚು ಜನ ಅಕುಶಲ ಕೂಲಿಕಾರರ ಎನ್ ಎಂಆರ್ ತೆಗೆದು ಕೆಲಸದ ಹಂಚಿಕೆ ಮಾಡಲಾಗಿದ್ದು, ಇದರಲ್ಲಿ 209 ಜನರ ಎನ್‌ಎಂಎಂಎಸ್ ಹಾಜರಾತಿ ಆಗಿದ್ದು, ಇನ್ನು ಕೆಲವು ಜನರ ಹಾಜರಾತಿ ಆಗದೇ ಇರುವ ಕಾರಣ ಅಪ್‌ಡೇಟ್ ಮಾಡಿಸಿಕೊಂಡು ಬರಲು ತಿಳಿಸಿದೆ. ಇನ್ನು ಆರು ದಿನಗಳ ನಿರಂತರ ಕೆಲಸ ನೀಡಲಾಗಿದೆ. ಈಗಾಗಲೇ ಒಂದು ಟ್ಯಾಂಕರ್ ನೀರು ಕೊಡಲಾಗಿದ್ದು, ಮತ್ತೊಂದು ಟ್ಯಾಂಕರ್ ನೀರಿನ ವ್ಯವಸ್ಥೆ ಮಾಡಲಾಗುವುದು ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಐಇಸಿ ಸಂಯೋಜಕರಾದ ಶರಣಪ್ಪ ಹಾಳಕೇರಿ


ಉದಯವಾಹಿನಿ ಚಿತ್ರ

ಮಾತನಾಡಿ, ನರೇಗಾ ಕೂಲಿಕಾರರು ಪ್ರಧಾನ ಮಂತ್ರಿ ಶ್ರಮ ಯೋಗಿ ಮಾನ್-ಧನ್ (PM-SYM) ಎನ್ನುವುದು ಅಸಂಘಟಿತ ವಲಯದ ಕಾರ್ಮಿಕರಿಗಾಗಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಒಂದು ಸ್ವಯಂಪ್ರೇರಿತ ಮತ್ತು ಕೊಡುಗೆ ಆಧಾರಿತ ಪಿಂಚಣಿ ಯೋಜನೆಯಾಗಿದ್ದು, ಈ ಯೋಜನೆಯಡಿ 60 ವರ್ಷ ವಯಸ್ಸಿನ ನಂತರ ಪ್ರತಿ ತಿಂಗಳು 3,000 ಖಚಿತವಾದ ಪಿಂಚಣಿ ದೊರೆಯುತ್ತದೆ.

> ನರೇಗಾ ಕೆಲಸ ಮಾಡುವ ಕೂಲಿಕಾರರು, ಸರಿಯಾಗಿ ಕಟ್ಟೆಗಳನ್ನು ಕಡಿಯಬೇಕು. ಮಳೆ ಬಂದಾಗ ಮಳೆನೀರು ಅದರಲ್ಲಿ ಸಂಗ್ರಹವಾಗಿ ಭೂಮಿಯಲ್ಲಿ ಇಂಗಬೇಕು. ಇದರಿಂದ ಅಂತರ್ಜಲ ವೃದ್ಧಿಯಾಗುವುದು. ಅಳತೆಗೆ ತಕ್ಕಂತೆ ವೇತನ ನೀಡಲಾಗುವುದು.
> -ವಿಜಯ್ ಬಂಡಿ, ತಾಂತ್ರಿಕ ಸಹಾಯಕ

ಅಸಂಘಟಿತ ವಲಯದ ಕಾರ್ಮಿಕರು ಎಂದರೆ ಬೀದಿ ಬದಿ ವ್ಯಾಪಾರಿಗಳು, ರಿಕ್ಷಾ ಚಾಲಕರು, ಕಟ್ಟಡ ಕಾರ್ಮಿಕರು, ಕೃಷಿ ಕೂಲಿ ಕಾರ್ಮಿಕರು, ಮನೆ ಕೆಲಸದವರು ಹಾಗೂ ನರೇಗಾ ಕೂಲಿಕಾರರು ಸೇರಿದಂತೆ ವಿವಿಧ ರೀತಿಯ ಕಾರ್ಮಿಕರು 18 ರಿಂದ 40 ವರ್ಷಗಳ ಒಳಗಿರಬೇಕು. ಮಾಸಿಕ ಆದಾಯ ರೂ.15,000 ಅಥವಾ ಅದಕ್ಕಿಂತ ಕಡಿಮೆ ಇರಬೇಕು. ಅರ್ಜಿದಾರರು ಆದಾಯ ತೆರಿಗೆ ಪಾವತಿದಾರರಾಗಿರಬಾರದು ಮತ್ತು EPFO, ESIC ಅಥವಾ NPS ಸದಸ್ಯರಾಗಿರಬಾರದು ಎಂದು ತಿಳಿಸಿದರು.

**ಅಳತೆಗೆ ತಕ್ಕಂತೆ ವೇತನ**

ಯೋಜನೆಯಡಿ 60 ವರ್ಷ ತುಂಬಿದ ನಂತರ ಪ್ರತಿ ತಿಂಗಳು ರೂ.3,000 ಪಿಂಚಣಿ ಸಿಗುತ್ತದೆ. ಕೂಲಿಕಾರರು ಪ್ರತಿ ತಿಂಗಳು ವಯಸ್ಸಿಗೆ ತಕ್ಕಂತೆ ಎಷ್ಟು ಹಣ ಪಾವತಿಸುತ್ತೀರಿ, ಅಷ್ಟೇ ಮೊತ್ತವನ್ನು ಕೇಂದ್ರ ಸರ್ಕಾರವು ನಿಮ್ಮ ಪಿಂಚಣಿ ಖಾತೆಗೆ ಜಮೆ ಮಾಡುತ್ತದೆ. ಫಲಾನುಭವಿಯ ಮರಣದ ನಂತರ, ಅವರ ಸಂಗಾತಿಗೆ (ಪತಿ ಅಥವಾ ಪತ್ನಿ) ಪಿಂಚಣಿಯ 50% (ರೂ.1,500) ಮೊತ್ತವನ್ನು ಕುಟುಂಬ ಪಿಂಚಣಿಯಾಗಿ ನೀಡಲಾಗುತ್ತದೆ. ನಿಮ್ಮ ವಯಸ್ಸಿಗೆ ಅನುಗುಣವಾಗಿ ತಿಂಗಳಿಗೆ ರೂ.55 ರಿಂದ ರೂ.200 ವರೆಗೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ನೀವು ಉಚಿತ ಸಹಾಯವಾಣಿ ಸಂಖ್ಯೆ 1800 2676 888 ಗೆ ಕರೆ ಮಾಡಬಹುದೆಂದು ತಿಳಿಸಿದರು.

ಸದರಿ ಕಾಮಗಾರಿ ಸ್ಥಳದಲ್ಲಿ NMMS ಫೇಸ್ ಅಥೆಂಟಿಕೇಶನ್ ಆಧಾರಿತವಾಗಿ ಹಾಜರಾತಿ ಹಾಕಲಾಗಿದೆ. ಕೂಲಿಕಾರ್ಮಿಕರ ಮುಖ ಗುರುತಿಸುವಿಕೆ (Facial Recognition) ತಂತ್ರಜ್ಞಾನ ಬಳಸಿ ಕಾರ್ಮಿಕರ ನಿಖರವಾದ ಹಾಜರಾತಿಯನ್ನು ಪಡೆಯಲಾಯಿತು. ಗಣಕಯಂತ್ರ ನಿರ್ವಾಹಕರಾದ ರಮೇಶ, ಗ್ರಾಮ ಕಾಯಕ ಮಿತ್ರರಾದ ಶಿಲ್ಪಾ ಡೊಳ್ಳಿನ್, ಕಾಯಕ ಬಂಧುಗಳು ನೂರಾರು ಜನ ಕೂಲಿಕಾರರು ಹಾಜರಿದ್ದರು.

## ಪಶ್ಚಿಮ ಬಂಗಾಳದಲ್ಲಿ ಇನ್ನು ಮುಂದೆ ಹಸು ಕೊಂದರೆ 6 ತಿಂಗಳು ಜೈಲು

**ಕೋಲ್ಕತ್ತಾ:** ಪಶ್ಚಿಮ ಬಂಗಾಳದಲ್ಲಿ ಇನ್ನು ಮುಂದೆ ಆರೋಗ್ಯವಂತ ಜಾನುವಾರುಗಳನ್ನು ಹತ್ಯೆ ಮಾಡಿದರೆ ಉಗ್ರ ಶಿಕ್ಷೆ ವಿಧಿಸಲಾಗುತ್ತದೆ. ಇದೇ ಮೊದಲ ಬಾರಿಗೆ ಬಂಗಾಳದಲ್ಲಿ ಸರ್ಕಾರ ರಚಿಸಿರುವ ಬಿಜೆಪಿ ಇಂತಹದ್ದೊಂದು ಆದೇಶ ಹೊರಡಿಸಿದೆ. ಪಶ್ಚಿಮ ಬಂಗಾಳದ ಬಿಜೆಪಿ ಸರ್ಕಾರವು ಹೊಸ ಅಧಿಸೂಚನೆಯನ್ನು ಹೊರಡಿಸಿದ್ದು, ಅಧಿಕೃತ ಸ್ಥಳೀಯ ಅಧಿಕಾರಿಗಳು ಮತ್ತು ಸರ್ಕಾರಿ ಪಶುವೈದ್ಯರು ನೀಡುವ ಫಿಟ್‌ನೆಸ್ ಪ್ರಮಾಣಪತ್ರವಿಲ್ಲದೆ ಹಸುಗಳು, ಹೋರಿಗಳು, ಎಮ್ಮೆಗಳು ಮತ್ತು ಕರುಗಳು ಸೇರಿದಂತೆ ಯಾವುದೇ ಪ್ರಾಣಿಯನ್ನು ವಧೆ ಮಾಡುವಂತಿಲ್ಲ ಎಂದು ಹೇಳಿದೆ. ವಧೆಗೆ ವಯಸ್ಸಿನ ಮಿತಿಗಳು, ಗೊತ್ತುಪಡಿಸಿದ ಸೌಲಭ್ಯಗಳು ಮತ್ತು ಉಲ್ಲಂಘನೆಗಳಿಗೆ ದಂಡಗಳು ಸೇರಿದಂತೆ ವಧೆಗೆ ಈ ಆದೇಶವು ಕಟ್ಟುನಿಟ್ಟಾದ ಷರತ್ತುಗಳನ್ನು ವಿಧಿಸುತ್ತದೆ.

ವಧೆಗೆ ಪ್ರಮಾಣೀಕರಣ ಕಡ್ಡಾಯಅಧಿಸೂಚನೆಯ ಪ್ರಕಾರ, ಯಾವುದೇ ವ್ಯಕ್ತಿಯು ಯಾವುದೇ ಪ್ರಾಣಿಯನ್ನು (ಎತ್ತುಗಳು, ಹಸುಗಳು, ಕರುಗಳು, ಗಂಡು ಮತ್ತು ಹೆಣ್ಣು ಎಮ್ಮೆಗಳು, ಎಮ್ಮೆ ಕರುಗಳು ಮತ್ತು ವೃಷಣ ನಾಶವಾದ ಎಮ್ಮೆಗಳು) ವಧೆ ಮಾಡಲು ಯೋಗ್ಯವೆಂದು ಪ್ರಮಾಣಪತ್ರವು ಘೋಷಿಸದ ಹೊರತು ವಧೆ ಮಾಡಬಾರದು. ಪ್ರಾಣಿ 14 ವರ್ಷಕ್ಕಿಂತ ಮೇಲ್ಪಟ್ಟಿದ್ದು ಮತ್ತು ಇನ್ನು ಮುಂದೆ ಕೆಲಸ ಅಥವಾ ಸಂತಾನೋತ್ಪತ್ತಿಗೆ ಉಪಯುಕ್ತವಾಗಿಲ್ಲ, ಅಥವಾ ವಯಸ್ಸು, ಗಾಯ, ವಿರೂಪತೆ ಅಥವಾ ಗುಣಪಡಿಸಲಾಗದ ಕಾಯಿಲೆಯಿಂದಾಗಿ ಶಾಶ್ವತವಾಗಿ ಅಂಗವಿಕಲವಾಗಿದೆ ಎಂದು ಪ್ರಮಾಣಪ 'ತ್ರವು ದೃಢೀಕರಿಸಬೇಕು. ಪ್ರಮಾಣೀಕರಣವನ್ನು ಪುರಸಭೆಯ ಅಧ್ಯಕ್ಷರು ಅಥವಾ ಪಂಚಾಯತ್ ಸಮಿತಿಯ ಸಭಾಪತಿ ಮತ್ತು ಸರ್ಕಾರಿ ಪಶುವೈದ್ಯಕೀಯ ಶಸ್ತ್ರಚಿಕಿತ್ಸಕರು ಜಂಟಿಯಾಗಿ ನೀಡಬೇಕು, ಕಾರಣಗಳನ್ನು ಲಿಖಿತವಾಗಿ ದಾಖಲಿಸಬೇಕು. ಪ್ರಮಾಣಪತ್ರ ನಿರಾಕರಿಸಿದರೆ, ಬಾಧಿತ ವ್ಯಕ್ತಿಯು 15 ದಿನಗಳಲ್ಲಿ ರಾಜ್ಯ ಸರ್ಕಾರಕ್ಕೆ ಮೇಲ್ಮನವಿ ಸಲ್ಲಿಸಬಹುದು. ವಧೆಗಾಗಿ ತೆರವುಗೊಳಿಸಿದ ಪ್ರಾಣಿಗಳನ್ನು ಪುರಸಭೆಯ ಕಸಾಯಿಖಾನೆಗಳಲ್ಲಿ ಅಥವಾ ಸ್ಥಳೀಯ ಆಡಳಿತವು ಗುರುತಿಸಿದ ಇತರ ಸೌಲಭ್ಯಗಳಲ್ಲಿ ಮಾತ್ರ ವಧೆ ಮಾಡಬಹುದು ಎಂದು ಅಧಿಸೂಚನೆಯಲ್ಲಿ ಹೇಳಲಾಗಿದೆ. ಇದು ಯಾವುದೇ ತೆರೆದ ಸಾರ್ವಜನಿಕ ಸ್ಥಳದಲ್ಲಿ ವಧೆಯನ್ನು ನಿಷೇಧಿಸುತ್ತದೆ. ನಿಯಮಗಳನ್ನು ಜಾರಿಗೊಳಿಸಲು ಪುರಸಭೆಯ ಅಧ್ಯಕ್ಷರು, ಪಂಚಾಯತ್ ಸಭಾಪತಿ ಅಥವಾ ಪಶುವೈದ್ಯರಿಂದ ಅಧಿಕಾರ ಪಡೆದ ಅಧಿಕಾರಿಗಳು ನಡೆಸುವ ಯಾವುದೇ ಆವರಣದ ಪರಿಶೀಲನೆಯನ್ನು ಯಾವುದೇ ವ್ಯಕ್ತಿಯು ತಡೆಯುವಂತಿಲ್ಲ ಎಂದು ಆದೇಶದಲ್ಲಿ ಹೇಳಲಾಗಿದೆ.



### ಅಮೆರಿಕ ಮತ್ತು ಇರಾನ್ ಎರಡೂ ಪ್ರತ್ಯೇಕವಾಗಿ ಹಾರ್ಮುಜ್ ಜಲಸಂಧಿಗೆ ದಿಗ್ಬಂಧನ

# ಹಾರ್ಮುಜ್ ಬಿಕ್ಕಟ್ಟು: ಹನಿ ಪೆಟ್ರೋಲ್, ಡೀಸೆಲ್ ಖಾಲಿ

**ಹವಾನಾ:** ಮಧ್ಯಪ್ರಾಚ್ಯದಲ್ಲಿ ಪರಸ್ಪರ ಬಂದೂಕು ಗುರಿ ಇಟ್ಟಿರುವ ಅಮೆರಿಕ ಮತ್ತು ಇರಾನ್, ಕೇವಲ ತಮಗೆ ಮಾತ್ರ ನಷ್ಟ ಮಾಡಿಕೊಳ್ಳುತ್ತಿಲ್ಲ. ಬದಲಾಗಿ, ಇಡೀ ಜಗತ್ತಿಗೆ ಹೇಳತೀರದ ನಷ್ಟವನ್ನುಂಟು ಮಾಡುತ್ತಿದ್ದಾರೆ. ಅದರಲ್ಲೂ ಹಾರ್ಮುಜ್ ದಿಗ್ಬಂಧನ ನೀತಿ, ಜಾಗತಿಕ ತೈಲ ಸರಪಳಿಯನ್ನು ಸಂಪೂರ್ಣವಾಗಿ ತುಂಡರಿಸಿದೆ. ಅಮೆರಿಕ ಮತ್ತು ಇರಾನ್ ಎರಡೂ ಪ್ರತ್ಯೇಕವಾಗಿ ಹಾರ್ಮುಜ್ ಜಲಸಂಧಿಗೆ ದಿಗ್ಬಂಧನ ಹಾಕಿದ್ದು, ಯಾವ ತೈಲ ಹಡಗುಗಳೂ ಈ ಜಲಸಂಧಿಯನ್ನು ದಾಟದ ಪರಿಸ್ಥಿತಿ ನಿರ್ಮಾಣವಾಗಿದೆ.

ಇದಕ್ಕೆ ಜ್ವಲಂತ ಉದಾಹರಣೆಯಾಗಿ ಕ್ಯೂಬಾ ಎಲ್ಲರ ಕಣ್ಣಿಗೆ ರಾಚುತ್ತಿದೆ. ಹೌದು ಉತ್ತರ ಅಮೆರಿಕದ ಕೆರಿಬಿಯನ್ ದ್ವೀಪ ರಾಷ್ಟ್ರವಾದ ಕ್ಯೂಬಾದಲ್ಲಿ, ಪೆಟ್ರೋಲ್ ಮತ್ತು ಡೀಸೆಲ್ ಸಂಪೂರ್ಣವಾಗಿ ಖಾಲಿಯಾಗಿದೆ. ಈ ಕುರಿತು ಖುದ್ದು ಮಾಹಿತಿ ನೀಡಿರುವ ದೇಶದ ಇಂಧನ ಮತ್ತು ಗಣಿ ಸಚಿವ ವಿಸೆಂಟೆ ಡೆ ಲಾ ಒ ಕ್ಯೂಬಾದ ತೈಲ ಸಂಗ್ರಹಣೆ ಸಂಪೂರ್ಣ ಖಾಲಿಯಾಗಿದ್ದು, ಪೆಟ್ರೋಲ್ ಮತ್ತು ಡೀಸೆಲ್ ಇಲ್ಲವಾಗಿದೆ ಎಂದು ಘೋಷಿಸಿದ್ದಾರೆ. ಇದಕ್ಕೆ ಅಮೆರಿಕ ವಿಧಿಸಿರುವ ದಿಗ್ಬಂಧನವೂ ಪ್ರಮುಖ ಕಾರಣವಾಗಿದೆ. ಇಷ್ಟೇ ಅಲ್ಲದೇ ಕ್ಯೂಬಾದಲ್ಲಿ ವಿದ್ಯುತ್ ಬಿಕ್ಕಟ್ಟು ಕೂಡ ಎದುರಾಗಿದ್ದು, ರಾಜಧಾನಿ ಹವಾನಾದಲ್ಲಿ ದಿನ 20 ಗಂಟೆ ಅನಿವಾರ್ಯವಾಗಿ ವಿದ್ಯುತ್ ಕಡಿತ ಮಾಡಲಾಗುತ್ತಿದೆ. ಕ್ಯೂಬಾದ ರಾಷ್ಟ್ರೀಯ ಗ್ರಿಡ್ ಬರಿದಾಗಿದ್ದು, ತೈಲ ಮತ್ತು ಇಂಧನದ ಯಾವುದೇ ಮೀಸಲು ಇಲ್ಲದೇ ಈ ಪುಟ್ಟ ದ್ವೀಪ ರಾಷ್ಟ್ರ ಪರದಾಡುತ್ತಿದೆ. ದಿಗ್ಬಂಧನದ ಹೊರತಾಗಿಯೂ ಕ್ಯೂಬಾ ಇಂಧನವನ್ನು ಆಮದು ಮಾಡಿಕೊಳ್ಳಲು ಮಾತುಕತೆಗಳನ್ನು ಮುಂದುವರೆಸಿದೆ ಎಂದು ದೇಶದ ಉನ್ನತ ಇಂಧನ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಆದರೆ ಇರಾನ್‌ನೊಂದಿಗಿನ ಯುಎಸ್-ಇಸ್ರೇಲ್ ಯುದ್ಧದ ಕಾರಣದಿಂದಾಗಿ, ಜಾಗತಿಕ ತೈಲ ಮತ್ತು ಸಾರಿಗೆ ಬೆಲೆಗಳು ಹೆಚ್ಚಾಗಿದ್ದು, ಆ ಪ್ರಯತ್ನವನ್ನು ಮತ್ತಷ್ಟು ಸಂಕೀರ್ಣಗೊಳಿಸಿದೆ ಎಂದು ಅಧಿಕಾರಿಗಳು ಅಸಹಾಯಕತೆ ವ್ಯಕ್ತಪಡಿಸಿದ್ದಾರೆ. ಕ್ಯೂಬಾಗೆ ತೈಲ ಪೂರೈಸುವ ಪ್ರಮುಖ ರಾಷ್ಟ್ರಗಳಾದ ಮೆಕ್ಸಿಕೊ ಅಥವಾ ವೆನೆಜುವೆಲಾ, ಅಮೆರಿಕ ಅಧ್ಯಕ್ ಡೊನಾಲ್ಡ್ ಟ್ರಂಪ್ ಅವರ ಎಚ್ಚರಿಕೆ ಬಳಿಕ ತೈಲ ಪೂರೈಕೆಯನ್ನು ನಿಲ್ಲಿಸಿವೆ.

ಕಳೆದ ಜನವರಿಯಲ್ಲಿ ಟ್ರಂಪ್ ಹೊರಡಿಸಿದ ಕಾರ್ಯನಿರ್ವಾಹಕ ಆದೇಶವು ಕಮ್ಯುನಿಸ್ಟ್ ಆಡಳಿತದ ರಾಷ್ಟ್ರಕ್ಕೆ ಇಂಧನವನ್ನು ಸಾಗಿಸುವ ಯಾವುದೇ ದೇಶದ ಮೇಲೆ, ಹೆಚ್ಚುವರಿ ಸುಂಕವನ್ನು ವಿಧಿಸಲಗುವುದು ಎಂದು ಬೆದರಿಕೆ ಹಾಕಿದೆ. ರಷ್ಯಾದ ಧ್ವಜವನ್ನು ಹೊಂದಿರುವ ಅನಾಟೋಲಿ ಕೊಲೊಡ್ಕಿನ್ ಎಂಬ ಒಂದೇ ಒಂದು ದೊಡ್ಡ ತೈಲ ಟ್ಯಾಂಕರ್, ಕಳೆದ ಡಿಸೆಂಬರ್‌ನಲ್ಲಿ ಕ್ಯೂಬಾಗೆ ಕಚ್ಚಾ ತೈಲವನ್ನು ತಲುಪಿಸಿದ್ದು, ಇದು ಏಪ್ರಿಲ್‌ವರೆಗೂ ದ್ವೀಪ ರಾಷ್ಟ್ರಕ್ಕೆ ತಾತ್ಕಾಲಿಕ ಪರಿಹಾರವನ್ನು ಒದಗಿಸಿತ್ತು. ಇದೀಗ ಆ ತೈಲವೂ ಖಾಲಿಯಾಗುತ್ತಾ ಬಂದಿದ್ದು, 10 ಮಿಲಿಯನ್ ಜನಸಂಖ್ಯೆಯ ಈ ದ್ವೀಪರಾಷ್ಟ್ರದಲ್ಲಿ ಸಾರ್ವಜನಿಕ ಸೇವೆಗಳನ್ನು ದುರ್ಬಲಗೊಳಿಸಿದೆ. ಕಳೆದ ವಾರ ವಿಶ್ವಸಂಸ್ಥೆಯು ಕ್ಯೂಬಾ ಮೇಲಿನ ಅಮೆರಿಕದ ಇಂಧನ ದಿಗ್ಬಂಧನವನ್ನು ಕಾನೂನು ಬಾಹಿರ ಎಂದು ಕರೆದಿದೆ. ಇದು ಕ್ಯೂಬಾ ಜನರ ಆಹಾರ, ಶಿಕ್ಷಣ, ಆರೋಗ್ಯ ಮತ್ತು ನೀರು ಹಾಗೂ ನೈರ್ಮಲ್ಯದ ಹಕ್ಕುಗಳನ್ನು ದುರ್ಬಲಗೊಳಿಸುತ್ತದೆಯಲ್ಲದೇ, ಅವರ ಅಭಿವೃದ್ಧಿಯ ಹಕ್ಕನ್ನು ಕಸಿದುಕೊಳ್ಳುತ್ತದೆ ಎಂದು ವಿಶ್ವಸಂಸ್ಥೆ ಅಸಮಾಧಾನ ವ್ಯಕ್ತಪಡಿಸಿದೆ.


- ಹಾರ್ಮುಜ್ ಬಿಕ್ಕಟ್ಟು ಮತ್ತು ಅಮೆರಿಕದ ದಿಗ್ಬಂಧನದಿಂದ ಈ ದೇಶದಲ್ಲಿ ಪೆಟ್ರೋಲ್, ಡೀಸೆಲ್ ಖಾಲಿ.
- ತೈಲರಹಿತ ದೇಶ ಎಂದು ಘೋಷಿಸಲು ಕ್ಷಣಗಣನೆಗಳು ಬಾಕಿ, ಅಮೆರಕ ಕಣ್ತೆರೆಯವುದೇ?
- ರಾಜಧಾನಿಯಲ್ಲೇ 20 ಗಂಟೆ ಸತತ ವಿದ್ಯುತ್ ಕಡಿತಕ್ಕೆ ಆದೇಶ

**ದಿನದ ಸುಮಾರು 20 ಗಂಟೆಗಳ ಕಾಲ ವಿದ್ಯುತ್ ಕಡಿತ**

ಕ್ಯೂಬಾದ ರಾಷ್ಟ್ರೀಯ ಗ್ರಿಡ್ ಸಂಪೂರ್ಣವಾಗಿ ದೇಶೀಯ ಕಚ್ಚಾ ತೈಲ, ನೈಸರ್ಗಿಕ ಅನಿಲ ಮತ್ತು ನವೀಕರಿಸಬಹುದಾದ ಇಂಧನದ ಮೇಲೆ ಕಾರ್ಯನಿರ್ವಹಿಸುತ್ತಿದೆ. ರಾಜಧಾನಿ ಹವಾನಾದಾದ್ಯಂತ ದಿನದ ಸುಮಾರು 20 ಗಂಟೆಗಳ ಕಾಲ ವಿದ್ಯುತ್ ಕಡಿತಗಳು ಮುಂದುವರೆದಿವೆ. ಇದು ಈಗಾಗಲೇ ಆಹಾರ, ಇಂಧನ ಮತ್ತು ಔಷಧ ಕೊರತೆಯಿಂದ ಬಳಲುತ್ತಿರುವ ನಗರದಲ್ಲಿ ಉದ್ವಿಗ್ನತೆಯನ್ನು ಹೆಚ್ಚಿಸಿದೆ ಎಂದು ಸಚಿವ ವಿಸೆಂಟೆ ಡೆ ಲಾ ಒ ಮಾಹಿತಿ ನೀಡಿದ್ದಾರೆ. ಕಳೆದ ಎರಡು ವರ್ಷಗಳಲ್ಲಿ ಕ್ಯೂಬಾ 1,300 ಮೆಗಾವ್ಯಾಟ್ ಸಾಮರ್ಥ್ಯದ ಸೌರಶಕ್ತಿಯನ್ನು ಸ್ಥಾಪಿಸಿದೆ. ಆದರೆ ಇಂಧನ ಕೊರತೆಯಿಂದಾಗಿ ಗ್ರಿಡ್ ಅಸ್ಥಿರಗೊಂಡಿದ್ದು, ಈ ಸಾಮರ್ಥ್ಯದ ಬಹುಪಾಲು ನಷ್ಟವಾಗಿದೆ. ಇದು ದಕ್ಷತೆ ಮತ್ತು ಉತ್ಪಾದನೆಯನ್ನು ಕಡಿಮೆ ಮಾಡಿದೆ ಎಂದು ಸಚಿವರು ತಿಳಿಸಿದ್ದಾರೆ.

**ಕಂಡುಕೇಳರಿಯದ ತೈಲ ಬಿಕ್ಕಟ್ಟು**

ಭಾರತದಂತಹ ಬೃಹತ್ ರಾಷ್ಟ್ರಗಳು ತಮ್ಮ ತೈಲ ಅಗತ್ಯತೆಯನ್ನು ಖಚಿತಪಡಿಸಿಕೊಳ್ಳಲು, ಅನ್ಯ ಮಾರ್ಗಗಳನ್ನು ಸಂಶೋಧಿಸುತ್ತಿವೆ. ಅಲ್ಲದೇ ತನ್ನ ಬಳಿ ಇರುವ ತೈಲ ಸಂಗ್ರಹದ ಮೇಲೆ ಭರವಸೆ ಇಟ್ಟುಕೊಂಡಿವೆ. ಆದರೆ ಜಗತ್ತಿನ ಸಣ್ಣ ರಾಷ್ಟ್ರಗಳು ತಮ್ಮ ತೈಲ ಅಗತ್ಯತೆಗಾಗಿ ಹಾರ್ಮುಜ್ ಜಲಸಂಧಿ ತೆರೆಯುವುದನ್ನು ಎದುರು ನೋಡುತ್ತಿದೆ. ಒಂದು ವೇಳೆ ಇನ್ನಷ್ಟು ದಿನಗಳ ಕಾಲ ಹಾರ್ಮುಜ್ ಜಲಸಂಧಿಯಿಂದ ತೈಲ ಟ್ಯಾಂಕರ್‌ಗಳು ಹೊರಬರದಿದ್ದರೆ, ಈ ರಾಷ್ಟ್ರಗಳು ಕಂಡುಕೇಳರಿಯದ ತೈಲ ಬಿಕ್ಕಟ್ಟನ್ನು ಎದುರಿಸಲಿವೆ.



# ಭಾರತದ ರಕ್ಷಣೆಗಾಗಿ ಮುಂಬೈನಲ್ಲಿ ಮೇ 17 ರಂದು 'ಶ್ರೀ ರಾಜಮಾತಂಗಿ ಮಹಾಯಾಗ

**ಮುಂಬೈ:** ಪ್ರಸ್ತುತ ವಿಶ್ವದ ಮೇಲೆ ಮೂರನೇ ಮಹಾಯುದ್ಧದ ಕಪ್ಪು ಛಾಯೆ ಆವರಿಸಿವೆ. ಇಂತಹ ಸಮಯದಲ್ಲಿ ಕೇವಲ ರಾಜಕೀಯ ಬೌದ್ಧಿಕ ಮಟ್ಟದ ಪ್ರಯತ್ನಗಳು ಸಾಕಾಗುವುದಿಲ್ಲ, ಬದಲಾಗಿ ರಾಷ್ಟ್ರಕ್ಕೆ ಆಧ್ಯಾತ್ಮಿಕ ಆಧಾರದ ಅಗತ್ಯವೂ ಇದೆ. ಇದೇ ಉದಾತ್ತ ಉದ್ದೇಶದಿಂದ ಭಾರತಕ್ಕೆ ಅಭೇದ್ಯ ಆಧ್ಯಾತ್ಮಿಕ ಸುರಕ್ಷಾ ಕವಚ ಲಭಿಸಲಿ ಮತ್ತು ದೇಶದ ಸರ್ವಾಂಗೀಣ ಪ್ರಗತಿಯಾಗಿ ಮತ್ತೊಮ್ಮೆ 'ರಾಮರಾಜ್ಯ' ಸ್ಥಾಪನೆಯಾಗಲಿ ಎಂಬ ಸಂಕಲ್ಪದಿಂದ ಸನಾತನ ಸಂಸ್ಥೆಯ ವತಿಯಿಂದ ಮುಂಬೈನಲ್ಲಿ 'ಶ್ರೀ ರಾಜಮಾತಂಗಿ ಮಹಾಯಾಗ'ವನ್ನು ಆಯೋಜಿಸಲಾಗಿದೆ.

ಭಾನುವಾರ, 17 ಮೇ 2026 ರಂದು ಪ್ರಭಾದೇವಿಯ ಶ್ರೀ ಸಿದ್ಧಿವಿನಾಯಕ ದೇವಸ್ಥಾನದ ಹಿಂಭಾಗದಲ್ಲಿರುವ ನರ್ದುಲ್ಲಾ ಟ್ಯಾಂಕ್ ಮೈದಾನದಲ್ಲಿ ಮಧ್ಯಾಹ್ನ 3.30 ರಿಂದ ಸಂಜೆ 7.30 ರವರೆಗೆ ಈ ಯಜ್ಞ ಸಮಾರಂಭವು ಅತ್ಯಂತ ಮಂಗಳಕರ ವಾತಾವರಣದಲ್ಲಿ ನಡೆಯಲಿದೆ. ಈ ಮಾಹಿತಿಯನ್ನು ಸನಾತನ ಸಂಸ್ಥೆಯ ವಕ್ತಾರರಾದ ಶ್ರೀ. ಅಭಯ ವರ್ತಕ್ ಅವರು ಮುಂಬೈ ಮರಾಠಿ ಪತ್ರಕರ್ತ ಸಂಘದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ನೀಡಿದರು. ಈ ಸಂದರ್ಭದಲ್ಲಿ ಸಂಸ್ಥೆಯ ರಾಷ್ಟ್ರೀಯ ವಕ್ತಾರರಾದ ಶ್ರೀ. ಚೇತನ್ ರಾಜಹಂಸ, ಪುರೋಹಿತ ಮತ್ತು ಜ್ಯೋತಿರ್ವಿದ ಶ್ರೀ. ಶ್ರೇಯಸ್ ಪಿಸೋಳ್ಕರ್ ಹಾಗೂ ಮಹಾರಾಷ್ಟ್ರ ಮಂದಿರ ಮಹಾಸಂಘದ ನವ ಮುಂಬೈ ಸಂಯೋಜಕ ಶ್ರೀ. ಕೈಲಾಸ್ ಪಾಟೀಲ್ ಉಪಸ್ಥಿತರಿದ್ದರು. ಈ ಮಹಾಯಾಗವು ಕೇವಲ ಧಾರ್ಮಿಕ ಆಚರಣೆಯಲ್ಲ, ಬದಲಾಗಿ ರಾಷ್ಟ್ರ ರಕ್ಷಣೆಯ ಒಂದು ಆಧ್ಯಾತ್ಮಿಕ ಅಭಿಯಾನವಾಗಿದೆ ಎಂದು ಈ ಸಂದರ್ಭದಲ್ಲಿ ಸ್ಪಷ್ಟಪಡಿಸಲಾಯಿತು.



**ಮಹಾಯಾಗವು ರಾಷ್ಟ್ರ ನಿರ್ಮಾಣದ ದಿಕ್ಕಿನಲ್ಲಿ ಒಂದು ಐತಿಹಾಸಿಕ ಹೆಜ್ಜೆ**

ಸನಾತನ ಸಂಸ್ಥೆಯು ಇದುವರೆಗೆ 750 ಕ್ಕೂ ಹೆಚ್ಚು ಯಜ್ಞ-ಅನುಷ್ಠಾನಗಳನ್ನು ಪೂರೈಸಿದೆ. ಈ ಯಜ್ಞ ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳ ಗಣ್ಯರು, ಸಂತ-ಮಹಂತರು, ರಾಜ್ಯ ಸರ್ಕಾರದ ಸಚಿವರು, ಹಿಂದುತ್ವನಿಷ್ಠ ಸಂಘಟನೆಗಳ ಪದಾಧಿಕಾರಿಗಳು, ವಿಚಾರವಂತರು, ನ್ಯಾಯವಾದಿಗಳು ಹಾಗೂ ಉದ್ಯಮಿಗಳು ಸೇರಿದಂತೆ ಸುಮಾರು 5 ಸಾವಿರ ಭಕ್ತರ ಉಪಸ್ಥಿತಿಯನ್ನು ನಿರೀಕ್ಷಿಸಲಾಗಿದೆ. ಸನಾತನ ಸಂಸ್ಥೆಯ ಸಂಸ್ಥಾಪಕ ಸಚ್ಚಿದಾನಂದ ಪರಬ್ರಹ್ಮ ಡಾ. ಜಯಂತ ಆಠವಲೆ ಅವರು ಯಾವ ಮುಂಬಾಪುರಿಯಿಂದ ಧರ್ಮಕಾರ್ಯವನ್ನು ಪ್ರಾರಂಭ ಮಾಡಿದರೋ, ಅದೇ ನಗರಿಯಲ್ಲಿ ಆಯೋಜಿಸಲಾದ ಈ ಮಹಾಯಾಗವು ರಾಷ್ಟ್ರ ನಿರ್ಮಾಣದ ದಿಕ್ಕಿನಲ್ಲಿ ಒಂದು ಐತಿಹಾಸಿಕ ಹೆಜ್ಜೆಯಾಗಲಿದೆ ಎಂದು ತಿಳಿಸಿದರು. ಎಲ್ಲಾ ಧರ್ಮಪ್ರೇಮಿ ಹಿಂದೂಗಳು ಕುಟುಂಬ ಸಮೇತ ಈ ಸಮಾರಂಭದಲ್ಲಿ ಉಪಸ್ಥಿತರಿರಬೇಕೆಂದು ಶ್ರೀ. ಅಭಯ ವರ್ತಕ್ ಅವರು ಕರೆ ನೀಡಿದ್ದಾರೆ.

ಈ ಯಜ್ಞದ ಆಧ್ಯಾತ್ಮಿಕ ಮಹತ್ವವನ್ನು ವಿವರಿಸುತ್ತಾ ಶ್ರೀ. ಅಭಯ ವರ್ತಕ್ ಅವರು, ಆದಿಶಕ್ತಿ ದೇವಿ ಸತಿಯ ಕ್ರೋಧದಿಂದ ಪ್ರಕಟವಾದ 'ದಶಮಹಾವಿದ್ಯೆ'ಗಳಲ್ಲಿ ಮಾತಂಗಿ ದೇವಿಯ ಸ್ಥಾನವು ಅತ್ಯಂತ ವಿಶಿಷ್ಟವಾಗಿದೆ. ದೇವಿ ಮಾತಂಗಿಯನ್ನು ಆದಿಶಕ್ತಿಯ 'ಪ್ರಧಾನ ಮಂತ್ರಿ' ಅಂದರೆ ಪ್ರಮುಖ ಸಲಹೆಗಾರ್ತಿ ಎಂದು ಪರಿಗಣಿಸಲಾಗುತ್ತದೆ. ಶತ್ರುಗಳ ಮೇಲೆ ವಿಜಯ ಸಾಧಿಸಲು ಮತ್ತು ಪ್ರತಿಕೂಲ ಪರಿಸ್ಥಿತಿಗಳನ್ನು ನಿಯಂತ್ರಿಸಲು ಈ ದೇವಿಯ ಉಪಾಸನೆಯು ಅತ್ಯಂತ ಫಲದಾಯಕವಾಗಿದೆ.

ಐತಿಹಾಸಿಕ ಸಂದರ್ಭವನ್ನು ನೀಡುತ್ತಾ, ತ್ರೇತಾಯುಗದಲ್ಲಿ ಪ್ರಭು ಶ್ರೀರಾಮರ ಅವತಾರ ಕಾಲದಲ್ಲಿಯೂ ರಾಜಮಾತಂಗಿ ದೇವಿಯ ತತ್ವವು ಕಾರ್ಯನಿರ್ವಹಿಸುತ್ತಿತ್ತು, ಇದರಿಂದಾಗಿಆದರ್ಶ ರಾಮರಾಜ್ಯದ ಸ್ಥಾಪನೆ ಸಾಧ್ಯವಾಯಿತು. ಪ್ರಸ್ತುತ ಕಾಲದಲ್ಲೂ ಇಂತಹ ದೈವೀ ಶಕ್ತಿಯ ಆಶೀರ್ವಾದದಿಂದ ಭಾರತದ ರಕ್ಷಣೆಯಾಗಲಿ ಎಂಬುದೇ ಈ ಯಜ್ಞದ ಮುಖ್ಯ ಉದ್ದೇಶವಾಗಿದೆ, ಎಂದು ಹೇಳಿದರು.

ಈ ಮಹಾಯಾಗದ ಅತಿದೊಡ್ಡ ಆಕರ್ಷಣೆಯೆಂದರೆ 1 ಸಾವಿರ ವರ್ಷಗಳ ಹಿಂದೆ ಆಕ್ರಮಣಕಾರಿ ಮಹಮೂದ್ ಗಜನವಿಯಿಂದ ಹಾನಿಗೊಳಗಾದ ಸೋರಟಿ ಸೋಮನಾಥ ಜ್ಯೋತಿರ್ಲಿಂಗದ ದಿವ್ಯ ಅಂಶಗಳ ದರ್ಶನ! ಇತಿಹಾಸದ ಸಾಕ್ಷಿಯಾದ ಈ ಪವಿತ್ರ ಅವಶೇಷಗಳನ್ನು ಇಲ್ಲಿ ದರ್ಶನಕ್ಕಾಗಿ ಇಡಲಾಗುವುದು, ಇದು ಭಕ್ತರಿಗೆ ಅತ್ಯಂತ ಅಪರೂಪದ ಅವಕಾಶವಾಗಿರುತ್ತದೆ ಎಂದು ಶ್ರೀ. ಚೇತನ್ ರಾಜಹಂಸ ಅವರು ತಿಳಿಸಿದರು. ಯಜ್ಞವು ಮಹಾಸಂಕಲ್ಪ, ಶ್ರೀ ಗಣೇಶ ಆವಾಹನೆ ಮತ್ತು ಪುಣ್ಯಾಹವಾಚನದೊಂದಿಗೆ ಪ್ರಾರಂಭವಾಗಲಿದೆ ಹಾಗೂ ಶ್ರೀ ರಾಜಮಾತಂಗಿ ದೇವಿಯ ಮೂಲ ಮಂತ್ರಗಳ ಜಯಘೋಷದ ನಡುವೆ ಆಹುತಿಗಳನ್ನು ಅರ್ಪಿಸಲಾಗುವುದು. ಯಜ್ಞದ ಪೌರೋಹಿತ್ಯವನ್ನು ತಮಿಳುನಾಡಿನ ಈರೋಡ್‌ನ ಶಿವಾಗಮ ವಿದ್ಯಾನಿಧಿ ಆಗಮಾಚಾರ್ಯ ಶ್ರೀ. ಅರುಣ್‌ಕುಮಾರ್ ಗುರುಮೂರ್ತಿ ಅವರು ನಿರ್ವಹಿಸಲಿದ್ದಾರೆ ಮತ್ತು ಶಿವಾಚಾರ್ಯ ಶ್ರೀ ಗುರುಮೂರ್ತಿ ಅವರು ಯಜ್ಞದ ಮುಖ್ಯ ಆಚಾರ್ಯರಾಗಿರುತ್ತಾರೆ ಎಂದು ಪುರೋಹಿತ ಮತ್ತು ಜ್ಯೋತಿರ್ವಿದ ಶ್ರೀ. ಶ್ರೇಯಸ್ ಪಿಸೋಳ್ಕರ್ ತಿಳಿಸಿದರು.

ಈ ಯಜ್ಞದಲ್ಲಿ ಮುಂಬೈ, ಠಾಣೆ, ರಾಯಗಡ, ಪಾಲ್ಘರ್‌ಜಿಲ್ಲೆಗಳ ಅನೇಕ ದೇವಾಲಯಗಳ ವಿಶ್ವಸ್ತರು, ಅರ್ಚಕರು ಭಾಗವಹಿಸಲಿದ್ದಾರೆ ಎಂದು ಮಹಾರಾಷ್ಟ್ರ ಮಂದಿರ ಮಹಾಸಂಘದ ನವಿ ಮುಂಬೈ ಸಂಯೋಜಕ ಶ್ರೀ. ಕೈಲಾಸ್ ಪಾಟೀಲ್ ಮಾಹಿತಿ ನೀಡಿದರು.

## ಮಿನಿ ನ್ಯೂಸ್

### ಬಲೂಚಿಸ್ತಾನದಲ್ಲಿ ಪಾಕ್ ಸೇನೆಯ ಮೇಜರ್ ಸೇರಿ ಐವರು ಯೋಧರು ಸಾವು

**ಕರಾಚಿ:** ಪಾಕಿಸ್ತಾನದ ಬಲೂಚಿಸ್ತಾನದ ಬರ್ಕಾನ್ ಜಿಲ್ಲೆಯಲ್ಲಿ ಉಗ್ರರ ವಿರುದ್ಧ ನಡೆದ ಕಾರ್ಯಾಚರಣೆ ವೇಳೆ ಪಾಕಿಸ್ತಾನ ಸೇನೆಯ ಮೇಜರ್ ಸೇರಿ ಐವರು ಯೋಧರು ಸಾವನ್ನಪ್ಪಿದ್ದಾರೆ.

ಈ ಕಾರ್ಯಾಚರಣೆಯಲ್ಲಿ ಕನಿಷ್ಠ ಏಳು ಉಗ್ರರನ್ನು ಕೂಡ ಹತ್ಯೆ ಮಾಡಲಾಗಿದೆ ಎಂದು ಇಂಟರ್ ಸರ್ವಿಸಸ್ ಪಬ್ಲಿಕ್ ರಿಲೇಶನ್ಸ್ ಅಧಿಕಾರಿಗಳು ತಿಳಿಸಿದ್ದಾರೆ. ಪಾಕಿಸ್ತಾನ ಸೇನೆ ಮತ್ತು ಬಲೂಚಿಸ್ತಾನ್ ಫ್ರಾಂಟಿಯರ್ ಕಾರ್ಪ್ಸ್ ಸಂಯುಕ್ತವಾಗಿ ಮಾರ್ಖಮ್‌ನ ನೋಶಮ್ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆ ನಡೆಸಿದ್ದವು. ಕಾರ್ಯಾಚರಣೆಯ ವೇಳೆ ನಡೆದ ಗುಂಡಿನ ಚಕಮಕಿಯಲ್ಲಿ ಏಳು ಉಗ್ರರನ್ನು ಹೊಡೆದುರುಳಿಸಲಾಗಿದ್ದು, ಮೇಜರ್ ಹುದ್ದೆಯ ಅಧಿಕಾರಿ ಸೇರಿದಂತೆ ಐವರು ಯೋಧರು ಹುತಾತ್ಮರಾಗಿದ್ದಾರೆ ಎಂದು ಐಎಸ್‌ಪಿಆರ್ ತಿಳಿಸಿದೆ.

ಸತ್ತ ಉಗ್ರರಿಂದ ಶಸ್ತ್ರಾಸ್ತ್ರಗಳು, ಗುಂಡು-ಸಾಮಗ್ರಿಗಳು ಹಾಗೂ ಸ್ಫೋಟಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಬಲೂಚಿಸ್ತಾನದಲ್ಲಿ ದೀರ್ಘಕಾಲದಿಂದ ಸಣ್ಣ ಮಟ್ಟದ ಬಂಡಾಯ ಚಟುವಟಿಕೆಗಳು ನಡೆಯುತ್ತಿದ್ದು, ಉಗ್ರರು ,ಭದ್ರತಾ ಪಡೆಗಳು ಮತ್ತು ಸರ್ಕಾರದ ಮೂಲಸೌಕರ್ಯಗಳನ್ನು ಗುರಿಯಾಗಿಸಿ ದಾಳಿ ನಡೆಸುತ್ತಿರುತ್ತಾರೆ.

### ಡಿಎಂಕೆ ದುರ್ಬಲಗೊಂಡಿಲ್ಲ ; ಸ್ಟಾಲಿನ್

**ಚೆನ್ನೈ:** ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ಸಂಪೂರ್ಣ ಗೆಲುವು ದಾಖಲಿಸದಿದ್ದರೂ ಮತ್ತು 1.54 ಕೋಟಿ ಮತಗಳನ್ನು ಗಳಿಸುವ ಸಾಮರ್ಥ್ಯವು ಡಿಎಂಕೆ ನೇತೃತ್ವದ ಮೈತ್ರಿಕೂಟವು ದುರ್ಬಲಗೊಳಿಸಿಲ್ಲ ಮತ್ತು ತಮಿಳುನಾಡಿನ ಜನರು ಆ ಮೈತ್ರಿಕೂಟದ ಮೇಲೆ ಇಟ್ಟಿರುವ ನಂಬಿಕೆಯನ್ನು ಪ್ರದರ್ಶಿಸಿದೆ ಎಂದು ಡಿಎಂಕೆ ಅಧ್ಯಕ್ಷ ಎಂ ಕೆ ಸ್ಟಾಲಿನ್ ಹೇಳಿದ್ದಾರೆ. ಚುನಾವಣಾ ಫಲಿತಾಂಶಗಳ ನಂತರ, ಹೆಚ್ಚಿನ ಮಿತ್ರಪಕ್ಷಗಳು ತಮ್ಮ ಸದಸ್ಯತ್ವವನ್ನು ಬದಲಾಯಿಸದೆ ಡಿಎಂಕೆಯೊಂದಿಗೆ ತಮ್ಮ ರಾಜಕೀಯ ಪ್ರಯಾಣವನ್ನು ಮುಂದುವರಿಸುವುದಾಗಿ ಬಹಿರಂಗವಾಗಿ ಹೇಳಿದ್ದಾರೆ. ಇದು ಡಿಎಂಕೆಗೆ ಮಿತ್ರಪಕ್ಷ ನಾಯಕರ ಬದ್ಧತೆಯನ್ನು ತೋರಿಸುತ್ತದೆ ಎಂದು ಸ್ಟಾಲಿನ್ ಹೇಳಿದರು. ಅದರ ಪ್ರಕಾರ, ನಾವು ತತ್ವಬದ್ಧ ರಾಜಕೀಯ ಪಕ್ಷಗಳಾಗಿ ಒಗ್ಗಟ್ಟಿನಿಂದ ನಿಲ್ಲುತ್ತೇವೆ ಮತ್ತು ಜನರ ಕಲ್ಯಾಣಕ್ಕಾಗಿ ಮತ್ತು ಯಾವಾಗಲೂ ರಾಜ್ಯತ್ವಕ್ಕಾಗಿ ನಮ್ಮ ಪ್ರಯಾಣವನ್ನು ಮುಂದುವರಿಸುತ್ತೇವೆ. ತಮಿಳುನಾಡನ್ನು ರಕ್ಷಿಸುವ ಶಕ್ತಿ ಮತ್ತು ಹೋರಾಟದ ಮನೋಭಾವ ನಮಗೆ ಸೇರಿದೆ ಎಂದು ಮಾಜಿ ಮುಖ್ಯಮಂತ್ರಿ ಇಲ್ಲಿ ಹೇಳಿಕೆಯಲ್ಲಿ ತಿಳಿಸಿದ್ದಾರೆ.

### ಬಿರುಗಾಳಿ-ಮಳೆಗೆ 56 ಮಂದಿ ಬಲಿ

**ಲಕ್ನೋ:** ಉತ್ತರ ಪ್ರದೇಶದ ಹಲವಾರು ಜಿಲ್ಲೆಗಳಲ್ಲಿ ಬೀಸಿದ ಬಲವಾದ ಬಿರುಗಾಳಿ ಮತ್ತು ಭಾರೀ ಮಳೆಯಿಂದ ಮರಗಳು ಉರುಳಿ ಮನೆಗಳಿಗೆ ಹಾನಿಯಾಗಿ ಕನಿಷ್ಠ 56 ಜನರು ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಕಾಲಿಕ ಮಳೆ, ಗುಡುಗು ಮತ್ತು ಮಿಂಚಿನಿಂದ ಉಂಟಾದ ಜೀವಹಾನಿ ಮತ್ತು ಹಾನಿಯನ್ನು ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಗಮನಿಸಿದರು ಮತ್ತು 24 ಗಂಟೆಗಳ ಒಳಗೆ ಸಂತ್ರಸ್ತ ಕುಟುಂಬಗಳಿಗೆ ಪರಿಹಾರ ತಲುಪುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ವಿವಿಧ ಜಿಲ್ಲೆಗಳಿಂದ ಬಂದಿರುವ ವರದಿಗಳ ಪ್ರಕಾರ, ಪ್ರಯಾಗ್ ರಾಜ್‌ನಲ್ಲಿ 17, ಭದೋಹಿಯಲ್ಲಿ 16, ಫತೇಪುರದಲ್ಲಿ ಒಂಬತ್ತು, ಬದೌನ್‌ನಲ್ಲಿ ಐದು, ಪ್ರತಾಪ್‌ಗಢದಲ್ಲಿ ನಾಲ್ಕು, ಚಂದೌಲಿ ಮತ್ತು ಕುಶಿನಗರದಲ್ಲಿ ತಲಾ ಎರಡು ಮತ್ತು ಸೋನ್‌ಭದ್ರ ಜಿಲ್ಲೆಯಲ್ಲಿ ಒಂದು ಸಾವು ವರದಿಯಾಗಿದೆ. ಪ್ರಯಾಗ್‌ರಾಜ್ ಜಿಲ್ಲಾಡಳಿತ ಹೊರಡಿಸಿದ ಪಟ್ಟಿಯ ಪ್ರಕಾರ, ಹಂಡಿಯಾ ಪ್ರದೇಶದಲ್ಲಿ ಏಳು, ಫುಲ್ಪುರದಲ್ಲಿ ನಾಲ್ಕು, ಸೊರಾನ್‌ನಲ್ಲಿ ಮೂರು, ಮೇಜಾದಲ್ಲಿ ಇಬ್ಬರು ಮತ್ತು ಸದರ್‌ನಲ್ಲಿ ಒಬ್ಬರು ಬಿರುಗಾಳಿ ಮತ್ತು ಮಳೆಯಿಂದಾಗಿ ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ.

### ಪಾಕ್ ಜೊತೆ ಮಾತುಕತೆ ಕುರಿತ ಹೊಸಬಾಳೆ ಹೇಳಿಕೆ ನರವಾಣೆ ಬೆಂಬಲ


**ಮುಂಬೈ:** ನೆರೆಯ ಪಾಕಿಸ್ತಾನದೊಂದಿಗೆ ಸಂವಾದ ಮತ್ತು ಜನರ ನಡುವಿನ ಸಂಪರ್ಕವನ್ನು ಬೆಳೆಸುವ ಆರ್‌ಎಸ್‌ಎಸ್ ನಾಯಕ ದತ್ತಾತ್ರೇಯ ಹೊಸಬಾಳೆ ಅವರ ನಿಲುವನ್ನು ಮಾಜಿ ಸೇನಾ ಮುಖ್ಯಸ್ಥ (ನಿವೃತ್ತ) ಜನರಲ್ ಮನೋಜ್ ನರವಾಣೆ ಬೆಂಬಲಿಸಿದ್ದಾರೆ, ಅಂತಹ ಕಾರ್ಯಗಳು ಮುಖ್ಯ ಎಂದು ಹೇಳಿದ್ದಾರೆ.

ಸಾಮಾನ್ಯ ಮನುಷ್ಯನ ಮೂಲಭೂತ ಹೋರಾಟಗಳು, ನಿರ್ದಿಷ್ಟವಾಗಿ ರೋಟಿ, ಕಪ್ಡಾ ಮತ್ತು ಮಕಾನ್‌ಗಳ ಮೂಲಭೂತ ಅಗತ್ಯಗಳು ಗಡಿಯ ಎರಡೂ ಬದಿಗಳಲ್ಲಿ ಒಂದೇ ಆಗಿರುತ್ತವೆ ಎಂದು ಮಾಜಿ ಸೇನಾ ಮುಖ್ಯಸ್ಥರು ಹೇಳಿದರು. ಸಾಮಾನ್ಯ ಮನುಷ್ಯನಿಗೂ ರಾಜಕೀಯಕ್ಕೂ ಯಾವುದೇ ಸಂಬಂಧವಿಲ್ಲ. ಇಬ್ಬರು ಜನರ ನಡುವೆ ಸ್ನೇಹ ಇದ್ದಾಗ, ಎರಡೂ ರಾಷ್ಟ್ರಗಳ ನಡುವೆ ಸ್ನೇಹವೂ ಇರುತ್ತದೆ ಎಂದು ನರವಾಣೆ ಇಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಪಿಟಿಐಗೆ ತಿಳಿಸಿದರು. ಸಂವಾದದಲ್ಲಿ ತೊಡಗಿಸಿಕೊಳ್ಳುವ ಅಪೇಕ್ಷಣೀಯತೆಯ ಕುರಿತು ಆರ್‌ಎಸ್‌ಎಸ್‌ಪ್ರಧಾನ ಕಾರ್ಯದರ್ಶಿ ದತ್ತಾತ್ರೇಯ ಹೊಸಬಾಳೆ ಅವರು ಪಿಟಿಐ ವೀಡಿಯೊಗಳಿಗೆ ನೀಡಿದ ಹೇಳಿಕೆಗೆ ಅವರು ಪ್ರತಿಕ್ರಿಯಿಸುತ್ತಿದ್ದರು.

ಇದು ಸರಿಯಾದ ವಿಷಯ. ಜನರಿಂದ ಜನರಿಗೆ ಸಂಪರ್ಕ ಮುಖ್ಯ ಎಂದು ನರವಾಣೆ ಹೇಳಿದರು, ಪ್ರಾದೇಶಿಕ ಸ್ಥಿರತೆಯನ್ನು ಖಚಿತಪಡಿಸುವಲ್ಲಿ ಅಂತಹ ಸಂಪರ್ಕವು ನಿರ್ಣಾಯಕ ಅಂಶವಾಗಿ ಉಳಿದಿದೆ ಎಂದು ಪುನರುಚ್ಚರಿಸಿದರು.

## ಶಾಖದ ಅಲೆಗಳ ಅಪಾಯ ತಪ್ಪಿಸಲು ಹೊಸ ಯೋಜನೆ

**ಗಾಜಿಯಾಬಾದ್:** ಮುಂದಿನ ಕೆಲವು ವರ್ಷಗಳಲ್ಲಿ ದೇಶದಲ್ಲಿ ಶಾಖದ ಅಲೆಗಳ ಸಮಯದಲ್ಲಿ ಶೂನ್ಯ ಮಾನವ ಸಾವುನೋವುಗಳನ್ನು ಖಚಿತಪಡಿಸಿಕೊಳ್ಳಲು ತಮ್ಮ ಸಚಿವಾಲಯವು ಯೋಜನೆಯನ್ನು ಸಿದ್ಧಪಡಿಸಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ವಿಪತ್ತುಗಳ ಬಗ್ಗೆ ಪ್ರತಿಕ್ರಿಯಾತ್ಮಕಕ್ಕಿಂತ ಪೂರ್ವಭಾವಿಯಾಗಿ ಇರುವ ಮೂಲ ತತ್ವದೊಂದಿಗೆ.ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ಪಡೆ (ಎನ್‌ಡಿಆರ್‌ಎಫ್)ಯ 8 ನೇ ಬೆಟಾಲಿಯನ್‌ನ ಆವರಣದಲ್ಲಿ ಅಧ್ಯಕ್ಷರ ಬಣ್ಣದ ಧ್ವಜವನ್ನು ಪ್ರದಾನ ಮಾಡಿದ ನಂತರ ಸಚಿವರು ಮಾತನಾಡಿದರು.



ಅಸಾಧಾರಣ ಸೇವೆ ಸಲ್ಲಿಸಿದ್ದಕ್ಕಾಗಿ ಮಿಲಿಟರಿ, ಪೊಲೀಸ್ ಘಟಕಕ್ಕೆ ರಾಷ್ಟ್ರಪತಿಗಳ ಬಣ್ಣದ ಧ್ವಜವನ್ನು ನೀಡಲಾಗುತ್ತದೆ. 2006 ರಲ್ಲಿ ನೈಸರ್ಗಿಕ, ಮಾನವ ನಿರ್ಮಿತ ವಿಪತ್ತುಗಳ ಸಮಯದಲ್ಲಿ ಪರಿಹಾರ, ರಕ್ಷಣಾ ಕಾರ್ಯಾಚರಣೆಗಳನ್ನು ಕೈಗೊಳ್ಳಲು ಫೆಡರಲ್ ಆಕಸ್ಮಿಕ ಪಡೆಯಾಗಿ ಸ್ಥಾಪಿಸಲಾದ ನಂತರ 20 ನೇ ವರ್ಷದಲ್ಲಿ ಈ ಗೌರವ ಪಡೆಗೆ ಬಂದಿತು. ರಾಷ್ಟ್ರಪತಿಗಳ ಬಣ್ಣವು ಕೇವಲ ಎನ್‌ಡಿಆರ್‌ಎಫ್‌ನ ಅತ್ಯುತ್ತಮ ಸೇವೆಗಳಿಗೆ ಗುರುತಿಸುವಿಕೆ ಮಾತ್ರವಲ್ಲ, ಎಲ್ಲಾ ರಾಜ್ಯ ವಿಪತ್ತು ಪ್ರತಿಕ್ರಿಯೆ ಪಡೆಗಳು, ರಾಜ್ಯ ಯಂತ್ರೋಪಕರಣಗಳು, (ರಾಷ್ಟ್ರೀಯ ಕೆಡೆಟ್ ಕಾರ್ಪ್ಸ್), (ರಾಷ್ಟ್ರೀಯ ಸೇವಾ ಯೋಜನೆ), ಅಪ್ದಾ ಸೇವಾ ಮಿತ್ರರು (ಸ್ವಯಂಸೇವಕರು) ಸೇರಿದಂತೆ ಇತರರಿಗೆ ಸಹ ಗುರುತಿಸುವಿಕೆಯಾಗಿದೆ ಎಂದು ಶಾ ಹೇಳಿದರು.


ತನ್ನ ಕಾರ್ಯಾಚರಣೆಗಳ ಮೂಲಕ ದೇಶದ ಮತ್ತು ವಿದೇಶಗಳ ಜನರ ಮೆಚ್ಚುಗೆ ವಿಶ್ವಾಸ ಗಳಿಸಿದೆ ಎಂದು ಅವರು ಹೇಳಿದರು. ಚಂಡಮಾರುತಗಳು, ಭೂಕಂಪಗಳು ಮತ್ತು ಪ್ರವಾಹಗಳು ಸೇರಿದಂತೆ ದುರಂತಗಳು ಮತ್ತು ವಿಪತ್ತುಗಳ ಸಮಯದಲ್ಲಿ ಶೂನ್ಯ ಸಾವುನೋವು ಮತ್ತು ಕನಿಷ್ಠ ಆಸ್ತಿ ಹಾನಿ ಖಚಿತಪಡಿಸಿಕೊಳ್ಳುವುದು ಮೋದಿ ಸರ್ಕಾರದ ಗುರಿಯಾಗಿದೆ ಎಂದು ಸಚಿವರು ಹೇಳಿದರು.

## ಸತೀಶನ್ ಕೇರಳಂ ಸಾರಥಿ

**ನವದೆಹಲಿ:** ಕೇರಳಂನ ನೂತನ ಮುಖ್ಯಮಂತ್ರಿಯಾಗಿ ವಿ.ಡಿ. ಸತೀಶನ್ ಅವರನ್ನು ಆಯ್ಕೆ ಮಾಡಲಾಗಿದೆ. ಕೇರಳಂನ ಮುಖ್ಯಮಂತ್ರಿ ಆಯ್ಕೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ಪಕ್ಷದಲ್ಲಿ ಕಳೆದ ಹತ್ತು ದಿನಗಳಿಂದ ನಡೆದಿದ್ದ ರಾಜಕೀಯ ಹೈಡ್ರಾಮಾಗಳಿಗೆ ಇಂದು ತೆರೆ ಬಿದ್ದಿದ್ದು, ಕಾಂಗ್ರೆಸ್ ಹೈಕಮಾಂಡ್ ಕೇರಳಂನ ಮುಖ್ಯಮಂತ್ರಿಯಾಗಿ ವಿ.ಡಿ. ಸತೀಶನ್ ಅವರನ್ನು ಆಯ್ಕೆ ಮಾಡಿದೆ. ಇನ್ನು ಮುಂದೆ ಕೇರಳಂನ ಸಾರಥ್ಯ ವಿ.ಡಿ. ಸತೀಶನ್ ಅವರದ್ದಾಗಿದೆ.

ಕೇರಳಂನ ವಿಧಾನಸಭಾ ಚುನಾವಣೆಯ ಫಲಿತಾಂಶ ಪ್ರಕಟವಾದ ನಂತರ ಮುಖ್ಯಮಂತ್ರಿ ಹುದ್ದೆಗೆ ಸಂಬಂಧಿಸಿದಂತೆ ಕಾಂಗ್ರೆಸ್‌ನಲ್ಲಿ ತೀವ್ರ ಪೈಪೋಟಿ ಏರ್ಪಟ್ಟಿತ್ತು. ಎಐಸಿಸಿ ಪ್ರಧಾನ ಕಾರ್ಯದರ್ಶಿಯಾಗಿರುವ ಕೆ.ಸಿ ವೇಣುಗೋಪಾಲ್, ಕೇರಳ ವಿಧಾನಸಭೆಯ ವಿರೋಧ ಪಕ್ಷದ ನಾಯಕರಾಗಿದ್ದ ಸತೀಶನ್ ಹಾಗೂ ಹಿರಿಯ ನಾಯಕ ರಮೇಶ್ ಚನ್ನಿಕಲಾ ಮುಖ್ಯಮಂತ್ರಿ ಹುದ್ದೆಯ ಆಕಾಂಕ್ಷಿಗಳಾಗಿದ್ದರು. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಅವರು ಕಳೆದ ಹತ್ತು ದಿನಗಳಿಂದ ಕೇರಳಂನ ಸಿಎಂ ಆಯ್ಕೆಗೆ ಸಂಬಂಧಿಸಿದಂತೆ ನಿರಂತರ ಸಭೆ, ಸಮಾಲೋಚನೆಗಳನ್ನು ನಡೆಸಿದ್ದರಾದರೂ ಮುಖ್ಯಮುಂತ್ರಿ ಅಭ್ಯರ್ಥಿಯ ಆಯ್ಕೆಗೆ ಸಂಬಂಧಿಸಿದಂತೆ ಒಮ್ಮತಕ್ಕೆ ಬರಲು ಸಾಧ್ಯವಾಗಿರಲಿಲ್ಲ.

ಗುರುವಾರ ಈ ಇಬ್ಬರು ನಾಯಕರು ಹಾಗೂ ಕೇರಳಂ ನಾಯಕರುಗಳ ಜತೆ ಚರ್ಚಿಸಿ ಅಂತಿಮವಾಗಿ ವಿ.ಡಿ. ಸತೀಶನ್ ಅವರನ್ನು ಸಿಎಂ ಗಾದೆಗೆ ಆಯ್ಕೆ ಮಾಡಿದರು. ಕಾಂಗ್ರೆಸ್ ಹೈಕಮಾಂಡ್ ಮುಖ್ಯಮಂತ್ರಿ ಗಾದೆಗೆ ಸತೀಶನ್ ಅವರನ್ನು ಆಯ್ಕೆ ಮಾಡಿರುವ ಬಗ್ಗೆ ಕಾಂಗ್ರೆಸ್ ಭವನದಲ್ಲಿಂದು ನಡೆದ ಸುದ್ದಿಗೋಷ್ಠಿ ನಡೆಸಿದ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೇರಳಂನ ಕಾಂಗ್ರೆಸ್ ಉಸ್ತುವಾರಿ ದೀಪ ಮುನ್ಷಿ ಅವರು ಅಧಿಕೃತ ಘೋಷಣೆ ಮಾಡಿದರು. ತಿರುವನಂತಪುರದಲ್ಲಿ ಸಂಜೆ 4 ಗಂಟೆಗೆ ಕೇರಳಂನ ಕಾಂಗ್ರೆಸ್‌ನ ಶಾಸಕಾಂಗ ಪಕ್ಷದ ಸಭೆ ನಡೆಯಲಿದ್ದು, ಅಲ್ಲಿ ಹೈಕಮಾಂಡ್ ಆಯ್ಕೆ ಮಾಡಿರುವ ವಿ.ಡಿ. ಸತೀಶನ್ ರವರನ್ನು ಶಾಸಕಾಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡುವ ಪ್ರಕ್ರಿಯೆ ನಡೆಯಲಿದೆ.



ಕೇರಳಂನ ನಿಧಾನಸಭಾ ಚುನಾಣೆಯಲ್ಲಿ ಭರ್ಜರಿ ಗೆಲುವು ಸಾಧಿಸಿದ್ದ ನಂತರ ನಡೆದ ಕಾಂಗ್ರೆಸ್‌ನ ಶಾಸಕಾಂಗ ಕೇರಳಂನ ಮುಖ್ಯಮಂತ್ರಿ ಆಯ್ಕೆಯನ್ನು ಹೈಕಮಾಂಡ್‌ಗೆ ಬಿಡುವ ನಿರ್ಧಾರ ಕೈಗೊಳ್ಳಲಾಗಿತ್ತು. ಕೇರಳಂನ ವಿಧಾನಸಭಾ ಕ್ಷೇತ್ರ ಫಲಿತಾಂಶ ಮೇ 3 ರಂದು ಪ್ರಕಟವಾಗಿದ್ದರೂ ಮುಖ್ಯಮಂತ್ರಿ ಆಯ್ಕೆ ವಿಳಂಬವಾಗಿತ್ತು. ಸಿಎಂ ಆಯ್ಕೆ ವಿಳಂಬವಾಗುತ್ತಿರುವ ಬಗ್ಗೆ ಬೇಸತ್ತು ತಮಿಳುನಾಡಿನ ಹಲವೆಡೆ ಸಿಎಂ ಅಭ್ಯರ್ಥಿಗಳ ಪರ ವಿರೋಧ ಪೋಸ್ಟರ್ ವಾರ್ ಸಹ ನಡೆದು ಕಾಂಗ್ರೆಸ್‌ನ ಒಳ ಜಗಳ ಬೀದಿಗೆ ಬಂದಿತ್ತು. ಲೋಕಸಭೆಯ ವಿರೋಧ ಪಕ್ಷದ ನಾಯಕರಾಗಿದ್ದ ರಾಹುಲ್‌ಗಾಂಧಿ ಅವರು ಕೆ.ಸಿ. ವೇಣುಗೋಪಾಲ್ ಆಪ್ತರಾಗಿದ್ದು, ರಾಹುಲ್‌ಗಾಂಧಿ, ಕೆ.ಸಿ. ವೇಣುಗೋಪಾಲ್ ಪರ ಒಲವು ತೋರಿದ್ದರು. ಆದರೆ ಸಿಎಂ ಪಟ್ಟಕ್ಕಾಗಿ ಪಟ್ಟು ಹಿಡಿದ ವಿ.ಡಿ. ಸತೀಶನ್ ನನಗೆ ಸಿಎಂ ಹುದ್ದೆ ನೀಡದಿದ್ದರೆ ಉಪಮುಖ್ಯಮಂತ್ರಿ ಹುದ್ದೆಯೂ ಬೇಡ. ಸಚಿವ ಸ್ಥಾನವನ್ನು ನಾವು ಅಲಂಕರಿಸುವುದಿಲ್ಲ. ಶಾಸಕರಾಗಿ ಅಷ್ಟೇ ಮುಂದುವರೆಯುತ್ತನೆ ಎಂಬ ಬಿಗಿ ನಿಲುವು ತಾಳಿದ್ದು, ಮುಖ್ಯಮಂತ್ರಿ ಆಯ್ಕೆ ಕಗ್ಗಂಟಾಗಲು ಕಾರಣವಾಗಿತ್ತು.

# ತೈವಾನ್‌ಗಾಗಿ ಅಮೆರಿಕ-ಚೀನಾ ಯುದ್ಧ ಸಂಭವ: ಕ್ಸಿ ಜಿನ್‌ಪಿಂಗ್ ನೇರ ಎಚ್ಚರಿಕೆ

- ತೈವಾನ್ ದ್ವೀಪ ಚೀನಾದ ಭಾಗವಾಗಿದ್ದು, ಇದರಲ್ಲಿ ಅಮೆರಿಕದ ಅನಗತ್ಯ ಹಸ್ತಕ್ಷೇಪ ಯುದ್ಧಕ್ಕೆ ಕಾರಣವಾಗಲಿದೆ

**ಬೀಜಿಂಗ್:** ಅಮೆರಿಕ ಅಧ್ಯಕ್ಷರ ಚೀನಾ ಪ್ರವಾಸ ಸಿಹಿ-ಕಹಿ ಅನುಭವಗಳ ಬುತ್ತಿಯಾಗಿದೆ. ಜಗತ್ತಿನ ಎರಡು ಪ್ರಬಲ ದೇಶಗಳ ನಡುವಿನ ವಾಣಿಜ್ಯ ಸಂಬಂಧ ಸುಧಾರಣೆಗೆ ಈ ಭೇಟಿ ಮುನ್ನುಡಿ ಬರೆದಿದೆಯಾದರೂ, ರಾಜತಾಂತ್ರಿಕ ಸಂಬಂಧದಲ್ಲಿ ಯಾವ ಬದಲಾವಣೆಯೂ ಕಾಣದಾಗಿದೆ. ಇದಕ್ಕೆ ಪುಷ್ಠಿ ಎಂಬಂತೆ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು ತೈವಾನ್ ವಿಚಾರವಾಗಿ ಅಮೆರಿಕ ಮತ್ತು ಚೀನಾ ನಡುವೆ ಯುದ್ಧ ಸಂಭವಿಸುವ ಅಪಾಯವಿದೆ ಎಂದು ಡೊನಾಲ್ಡ್ ಟ್ರಂಪ್ ಅವರಿಗೆ ನೇರವಾಗಿ ಹೇಳಿದ್ದಾರೆ.

ಬೀಜಿಂಗ್‌ನ ಗ್ರೇಟ್ ಹಾಲ್ ಆಫ್ ದಿ ಪೀಪಲ್‌ನಲ್ಲಿ ನಡೆದ ಅಮೆರಿಕ-ಚೀನಾ ದ್ವಿಪಕ್ಷೀಯ ಮಾತುಕತೆ ವೇಳೆ ತೈವಾನ್ ವಿಚಾರ ಪ್ರಸ್ತಾಪಿಸಿದ ಕ್ಸಿ ಜಿನ್‌ಪಿಂಗ್, ತೈವಾನ್ ದ್ವೀಪ ಚೀನಾದ ಭಾಗವಾಗಿದ್ದು, ಇದರಲ್ಲಿ ಅಮೆರಿಕದ ಅನಗತ್ಯ ಹಸ್ತಕ್ಷೇಪ ಯುದ್ಧಕ್ಕೆ ಕಾರಣವಾಗಲಿದೆ ಎಂದು ನೇರವಾಗಿ ಎಚ್ಚರಿಸಿದರು.

- ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಚೀನಾ ಪ್ರವಾಸ.
- ಡೊನಾಲ್ಡ್ ಟ್ರಂಪ್-ಕ್ಸಿ ಜಿನ್‌ಪಿಂಗ್ ಮಾತುಕತೆ.
- ತೈವಾನ್ ಬಿಕ್ಕಟ್ಟಿನಿಂದಾಗಿ ಅಮೆರಿಕ-ಚೀನಾ ಯುದ್ಧ ಅಪಾಯ.



ಇದಕ್ಕೆ ಡೊನಾಲ್ಡ್ ಟ್ರಂಪ್ ನೇತೃತ್ವದ ಅಮೆರಿಕದ ನಿಯೋಗದ ಮೌನವೇ ಉತ್ತರವಾಗಿತ್ತು. ಡೊನಾಲ್ಡ್ ಟ್ರಂಪ್ ಭೇಟಿಗೂ ಮೊದಲೇ ಚೀನಾ ಎಳೆದ 4 ಕೆಂಪುಗೆರೆ, ದ್ವಿಪಕ್ಷೀಯ ಮಾತುಕತೆಯ ಭವಿಷ್ಯವನ್ನು ನಿರ್ಧರಿಸಿದೆ.

ತೈವಾನ್ ವಿಚಾರವು ಚೀನಾ-ಅಮೆರಿಕ ಸಂಬಂಧದಲ್ಲಿ ಅತ್ಯಂತ ಪ್ರಮುಖವಾದದ್ದು. ಈ ವಿಚಾರವನ್ನು ಸರಿಯಾಗಿ ನಿಭಾಯಿಸಿದರೆ ಮಾತ್ರ ಎರಡು ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳು ಸ್ಥಿರವಾಗಿರಲು ಸಾಧ್ಯ. ಒಂದು ವೇಳೆ ಅಮೆರಿಕ ಈ ವಿಚಾರದಲ್ಲಿ ಏನಾದರೂ ಎಡವಟ್ಟು ಮಾಡಿದರೆ, ಎರಡು ರಾಷ್ಟ್ರಗಳು ನೇರವಾಗಿ ಘರ್ಷಣೆಗೆ ಇಳಿಯಬೇಕಾಗುತ್ತದೆ. ಅಷ್ಟೇ ಅಲ್ಲದೇ, ಇದು ಎರಡು ದೇಶಗಳ ನಡುವೆ ಭೀಕರ ಯುದ್ಧಕ್ಕೂ ಕಾರಣವಾಗಬಹುದು ಎಂದು ಕ್ಸಿ ಜಿನ್‌ಪಿಂಗ್ ಎಚ್ಚರಿಸಿದ್ದಾರೆ. ಮಾತುಕತೆ ವೇಳೆ ಅಮೆರಿಕ-ಚೀನಾ ಬದ್ಧ ವೈರಿಗಳಲ್ಲ ಎಂದಿರುವ ಕ್ಸಿ ಜಿನ್‌ಪಿಂಗ್, ರಾಜತಾಂತ್ರಿಕ ಮತ್ತು ವಾಣಿಜ್ಯ ಸಂಬಂಧಗಳನ್ನು ಸುಧಾರಿಸಲು ಪರಸ್ಪರ ಸಹಕಾರದ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ. ವಾಣಿಜ್ಯ ಕ್ಷೇತ್ರದಲ್ಲಿ ಉಭಯ ದೇಶಗಳ ನಡುವಿನ ಸಂಬಂಧ ಸುಧಾರಿಸುತ್ತಿರುವುದನ್ನು ಒತ್ತಿ ಹೇಳಿರುವ ಕ್ಸಿ ಜಿನ್‌ಪಿಂಗ್, ರಾಜತಾಂತ್ರಿಕ ಸಂಬಂಧ ಸುಧಾರಣೆಗೆ ತೈವಾನ್ ಬಿಕ್ಕಟ್ಟು ಅಡ್ಡಿಯಾಗಿರುವುದನ್ನು ಡೊನಾಲ್ಡ್ ಟ್ರಂಪ್ ಅವರ ಗಮನಕ್ಕೆ ತಂದಿದ್ದಾರೆ.

ಇನ್ನು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರ ತೈವಾನ್ ಹೇಳಿಕೆಗೆ ಅಷ್ಟೇ ತೀಕ್ಷ್ಣವಾಗಿ ಪ್ರತಿಕ್ರಿಯಿಸಿರುವ ತೆಪ್ಪೆ, ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಗೆ ಚೀನಾ ಮಾತ್ರವೇ ಏಕೈಕ ಅಪಾಯವಾಗಿದೆ. ಕ್ಸಿ ಜಿನ್‌ಪಿಂಗ್ ಅವರ ಹೇಳಿಕೆಗಳು ತೈವನ್-ಅಮೆರಿಕ ನಡುವಿನ ಸಂಬಂಧದ ಮೇಲೆ ಪರಿಣಾಮ ಬೀರುವುದಿಲ್ಲ ಎಂದು ಭರವಸೆ ವ್ಯಕ್ತಪಡಿಸಿದೆ.

**ಟ್ರಂಪ್‌ಗೆ ನೇರವಾಗಿಯೇ ಯುದ್ಧದ ಬೆದರಿಕೆ**

ಚೀನಾ ಮೊದಲಿನಿಂದಲೂ ತೈವಾನ್ ದ್ವೀಪದ ಮೇಲೆ ಹಕ್ಕು ಸಾಧಿಸುತ್ತಾ ಬಂದಿದೆ. ತೈವಾನ್ ಸ್ವತಂತ್ರ ರಾಷ್ಟ್ರವಲ್ಲ, ಅದು ಚೀನಾದ ಒಂದು ಪ್ರಾಂತ್ಯ. ಮುಂದೊಂದು ದಿನ ಅದನ್ನು ಬಲವಂತವಾಗಿಯಾದರೂ ಸರಿ, ಚೀನಾ ಜೊತೆ ವಿಲೀನ ಮಾಡುತ್ತೇವೆ ಎಂದು ಕ್ಸಿ ಜಿನ್‌ಪಿಂಗ್ ಹಲವು ಬಾರಿ ಗುಡುಗಿದ್ದಾರೆ. ಆದರೆ ತೈವಾನ್ ಮಾತ್ರ ತಾನು ಸ್ವತಂತ್ರ ಪ್ರಜಾಸತ್ತಾತ್ಮಕ ರಾಷ್ಟ್ರ ಎಂದು ಹೇಳಿಕೊಳ್ಳುತ್ತಿದೆ. ತೈವಾನ್‌ಗೆ ಅಮೆರಿಕದ ಪರೋಕ್ಷ ಬೆಂಬಲ ಬಿಕ್ಕಟ್ಟನ್ನು ಮತ್ತಷ್ಟು ಹೆಚ್ಚಿಸಿದೆ. ಇದೇ ಕಾರಣಕ್ಕೆ, ಕ್ಸಿ ಜಿನ್‌ಪಿಂಗ್ ಅವರು ಡೊನಾಲ್ಡ್ ಟ್ರಂಪ್‌ಗೆ ನೇರವಾಗಿಯೇ ಯುದ್ಧದ ಬೆದರಿಕೆ ಹಾಕಿದ್ದಾರೆ.

**ಡ್ರ್ಯಾಗನ್ ರಾಷ್ಟ್ರದಲ್ಲಿ ಎಲಾನ್ ಮಸ್ಕ್**

ಡೊನಾಲ್ಡ್ ಟ್ರಂಪ್ ಚೀನಾ ಭೇಟಿಗೆ ಒಂಟಿಯಾಗಿ ಹೋಗಿಲ್ಲ. ಬದಲಿಗೆ ಜಗತ್ತಿನ ಟಾಪ್ ಬಿಲಿಯನೇರ್‌ಗಳನ್ನು ತಮ್ಮ ಜೊತೆ ಕರೆದುಕೊಂಡು ಹೋಗಿದ್ದಾರೆ. ಟೆಸ್ಲಾ ಸಿಇಒ ಎಲಾನ್ ಮಸ್ಕ್ ಮತ್ತು ಎನ್‌ವಿಡಿಯಾ ಸಿಇಒ ಜೆನ್ಸನ್ ಹುವಾಂಗ್ ಕೂಡ ಟ್ರಂಪ್ ಜೊತೆ ಬೀಜಿಂಗ್‌ಗೆ ಕಾಲಿಟ್ಟಿದ್ದಾರೆ. ಚೀನಾದಲ್ಲಿ ಟೆಸ್ಲಾ ಕಂಪನಿಯ ಅತಿ ದೊಡ್ಡ ಮಾರುಕಟ್ಟೆ ಇದ್ದು, ಡ್ರ್ಯಾಗನ್ ರಾಷ್ಟ್ರದಲ್ಲಿ ಎಲಾನ್ ಮಸ್ಕ್ ಅವರ ಹೆಜ್ಜೆಗುರುತುಗಳನ್ನು ಮತ್ತಷ್ಟು ಬಲಪಡಿಸುವುದು ಡೊನಾಲ್ಡ್ ಟ್ರಂಪ್ ಅವರ ಗುರಿಯಾಗಿದೆ.

